ಸಂಪುಟ: 05 ಸಂಚಿಕೆ: 223 ಪುಟಗಳು: 08 ಮಂಗಳವಾರ 28 ಅಕ್ಟೋಬರ್ 2025 www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail. com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ಹಿಂದುರುಗಿ ನೋಡುವ ಅವಶ್ಯಕತೆ ಇಲ್ಲ ಮುಂದೆ ನೋಡಿ ನಮಗೆ ಅನಂತ ಶಕ್ತಿ, ಅನಂತ ಉತ್ಸಾಹ, ಅನಂತ ತಾಳ್ಮೆ ಬೇಕು, ಆಗ ಮಾತ್ರ ಮಹತ್ಕಾರ್ಯಗಳನ್ನು ನಾವು ಸಾಧಿಸಬಹುದು

## ಮತದಾರರ ಪಟ್ಟಿ ವಿಶೇಷ ಪರಿಶೀಲನೆ ಕರ್ನಾಟಕದಲ್ಲೂ ಜಾರಿ?

• ಉದಯವಾಹಿನಿ, ಮಂಗಳೂರು

ಇತ್ತೀಚೆಗೆ, ಬಿಹಾರದಲ್ಲಿ ಭಾರೀ ಬಿರುಗಾಳಿಯೆಬ್ಬಿಸಿದ್ದ ಅಲ್ಲಿನ ಮತದಾರರ ಗುರುತಿನ ಚೀಟಿಗಳ ವಿಶೇಷ ಪರಿಶೀಲನೆಯು ಸದ್ಯದಲ್ಲೇ ದೇಶದ 15 ರಾಜ್ಯಗಳಲ್ಲಿ ಜಾರಿಗೆ ಬರಲಿದೆ. ಈ ಕುರಿತಂತೆ, ಅ. 27ರಂದು ಕೇಂದ್ರ ಚುನಾವಣಾ ಆಯೋಗ, ನವದೆಹಲಿಯಲ್ಲಿ ನಡೆಯಲಿರುವ ವಿಶೇಷ ಸುದ್ದಿಗೋಷ್ಠಿಯ ಮೂಲಕ ಪ್ರಕಟಣೆ ನೀಡಲಿದೆ. ಮುಖ್ಯ ಚುನಾವಣಾ ಆಯುಕ್ತರಾದ ಜ್ಞಾನೇಶ್ ಕುಮಾರ್ ಅವರು ಸುದ್ದಿಗೋಷ್ಠಿಯನ್ನು ನಡೆಸಿಕೊಡಲಿದ್ದಾರೆ.

ಕರ್ನಾಟಕದಲ್ಲಿ ಇತ್ತೀಚೆಗೆ ವೋಟ್ ಚೋರಿ ಆರೋಪಗಳು ಕೇಳಿಬಂದಿವೆ. ಹಾಗಾಗಿ, ಕರ್ನಾಟಕದಲ್ಲಿಯೂ ಮತದಾರರ



ಪಟ್ಟಿ ಪರಿಷ್ಕರಣೆಗೆ ಕೇಂದ್ರ ಚುನಾವಣಾ ಆಯೋಗ ಮುಂದಾಗಬಹುದು ಎಂದು ಅಂದಾಜಿಸಲಾಗಿದೆ. ಕಳೆದ ಲೋಕಸಭಾ ಚುನಾವಣೆಯ ಸಂದರ್ಭದಲ್ಲಿ ನಕಲಿ ಮತದಾನಗಳು ನಡೆದಿವೆ ಎಂದು ಇತ್ತೀಚೆಗೆ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಆರೋಪಿಸಿದ್ದರು. ಪ್ರಮುಖವಾಗಿ, ಬೆಂಗಳೂರಿನ ಮಹದೇವಪುರ ವಿಧಾನಸಭಾ ಕ್ಷೇತ್ರದಲ್ಲಿ ಅತ್ಯಧಿಕವಾಗಿ ಮತಗಳ್ಳತನ ಆಗಿದೆ

**ಗುರುತಿನ ಚೀಟಿಗಳ ವಿಶೇಷ ಪರಿಶೀಲನೆ**

ಎಂಬುದು ಅವರ ವಾದ. ಮತ್ತೊಂದೆಡೆ, ಆಳಂದ ವಿಧಾನಸಭಾ ಕ್ಷೇತ್ರದಲ್ಲಿಯೂ ಮತಗಳ್ಳತನ ನಡೆದಿದ್ದಾಗಿ ವರದಿಯಾಗಿತ್ತು. ಈ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರ ಎಸ್‌ಐಟಿ ನೇಮಿಸಿ ತನಿಖೆಗೆ ಆದೇಶಿಸಿದೆ. ತನಿಖೆಯು ಪ್ರಗತಿಯಲ್ಲಿದ್ದು ಇತ್ತೀಚೆಗೆ, ಆಳಂದ ಮತಗಳ್ಳತನದ ಕಿಂಗ್ ಪಿನ್ ನನ್ನು ಬಂಧಿಸಲಾಗಿದೆ. ಮೇಲೆ ತಿಳಿಸಿದಂತೆ ಎಸ್‌ಐಆರ್ ಎಂದರೆ ಮತದಾರರರ ಗುರುತಿನ ಚೀಟಿಗಳ ವಿಶೇಷ ಪರಿಶೀಲನೆ. ಆ ಮೂಲಕ, ಅರ್ಹ ಮತದಾರರಿಗೆ ಮಾತ್ರ ಮತದಾನದ ಹಕ್ಕನ್ನು ನೀಡಲಾಗುತ್ತದೆ. ಅನಧಿಕೃತವಾಗಿ ಅಥವಾ ಅಕ್ರಮವಾಗಿ ಮತದಾರರ ಗುರುತಿನ ಚೀಟಿಗಳನ್ನು ಹೊಂದಿರುವ ನಾಗರಿಕರನ್ನು ಮತದಾರರ ಪಟ್ಟಿಯಿಂದ ಕಿತ್ತೊಗೆಯಲಾಗುತ್ತದೆ.

**ಎಸ್‌ಐಆರ್ ಪ್ರಮಾಣ:** ಮತದಾರರ ಗುರುತಿನ ಚೀಟಿಗಳ ವಿಶೇಷ ಪರಿಶೀಲನೆಯಲ್ಲಿ, ಮತದಾರರು ತಮ್ಮ ಮತದಾರರ ಗುರುತಿನ ಚೀಟಿಯ ನಕಲು ಪ್ರತಿಗಳು, ತಮ್ಮ ಫೋಟೋ ಹಾಗೂ ವಿಳಾಸ ದೃಢೀಕರಣ ಪ್ರಮಾಣಪತ್ರಗಳನ್ನು ಆಧಾರ್ ಕಾರ್ಡ್, ಸರ್ಕಾರಿ ಉದ್ಯೋಗದ ಐಡಿ ಕಾರ್ಡ್ ಇತ್ಯಾದಿ. ಆದರೆ, ಪಡಿತರ ಚೀಟಿಗಳನ್ನು ವಿಳಾಸ ದೃಢೀಕರಣಕ್ಕೆ ಪರಿಗಣಿಸಲಾಗುವುದಿಲ್ಲ.

ಉದಯ ವಾಹಿನಿ

ವರದಿಗಾರರು ಬೇಕಾಗಿದ್ದಾರೆ

ಎಂ.ಎ., ಜರ್ನಲಿಸಂ ಮಾಡಿರುವಂತಹ ಉತ್ಸಾಹಿ ಯುವಕ ಯುವತಿಯರು ತಾಲ್ಲೂಕು ಹಾಗೂ ಜಿಲ್ಲಾ ಮಟ್ಟಗಳಲ್ಲಿ ಕೆಲಸ ಮಾಡುವಂತಹ

ರಾಜ್ಯದಾದ್ಯಂತ ವರದಿಗಾರರು ಬೇಕಾಗಿದ್ದಾರೆ

ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಿ:

9448225696

+91 8035841833

#: 1230 'JAYAMAHAL 13th cross, 2nd phase, Girinagar, Bangalore-560085. (Near to Bangalore one park, opposite mandya medical)

udayavahininews@gmail.com

## ಸಿದ್ದುದೇ ಸಿಎಂ ಆಟ ಡಿಕೆಶಿ ಪರದಾಟ


**ಐದು ವರ್ಷ ಸಿದ್ದರಾಮಯ್ಯನವರೇ ಸಿಎಂ ಎಂಬ ರಾಜಣ್ಣ ಹೇಳಿಕೆಗೆ ಮಂಗಳೂರಿನ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿಂದು ಪ್ರತಿಕ್ರಿಯಿಸಿದ ಸಿದ್ದರಾಮಯ್ಯ, "ಅದು ಅವರ ಸ್ವಂತ ಅಭಿಪ್ರಾಯ. ಹೈಕಮಾಂಡ್ ತೀರ್ಮಾನ ಮಾಡಿದರೆ ನಾನೇ ಪೂರ್ಣಾವಧಿ ಮುಖ್ಯಮಂತ್ರಿ" ಎಂದರು. ಇದೇ ವೇಳೆ, ಕೆ.ಹೆಚ್.ಮುನಿಯಪ್ಪ , ಡಾ.ಜಿ.ಪರಮೇಶ್ವರ್, ಡಿ.ಕೆ. ಶಿವಕುಮಾರ್ ಅವರು ಮುಖ್ಯಮಂತ್ರಿ ರೇಸ್‌ನಲ್ಲಿರುವ ಕುರಿತ ಪ್ರಶ್ನೆಗೆ, ಪ್ರಜಾಪ್ರಭುತ್ವದಲ್ಲಿ ಸ್ಪರ್ಧೆಯಲ್ಲಿ ಇರುವವರನ್ನು ತಪ್ಪಿಸಲು ಆಗಲ್ಲ. ಸ್ಪರ್ಧೆಯಲ್ಲಿ ಇರಬೇಡಿ ಎಂದು ಹೇಳಲು ಆಗಲ್ಲ. ಪ್ರಜಾಪ್ರಭುತ್ವದಲ್ಲಿ ಕೇಳೋದು ಅವರ ಹಕ್ಕು. ಅಂತಿಮವಾಗಿ ಹೈಕಮಾಂಡ್ ತೀರ್ಮಾನ ಮಾಡುತ್ತದೆ. ಹೇಳುವ ಕೇಳುವ ಹಕ್ಕು ಎಲ್ಲರಿಗೂ ಇದೆ ಎಂದು ತಿಳಿಸಿದರು.**

**2028ರ ಚುನಾವಣೆಯಲ್ಲೂ ಸಿದ್ದರಾಮಯ್ಯ ಸ್ಪರ್ಧೆ..**

**ನಾಯಕತ್ವ ಬದಲಾವಣೆ ಚರ್ಚೆ: ಹೈಕಮಾಂಡ್ ಸ್ಪಷ್ಟನೆ ಕೊಡಬೇಕು**

**ಹೈಕಮಾಂಡ್ ತೀರ್ಮಾನಿಸಿದರೆ, 5 ವರ್ಷ ನಾನೇ ಸಿಎಂ**







'ರಾಜ್ಯದಲ್ಲಿ ಮುಖ್ಯಮಂತ್ರಿಗಳ ಕುರ್ಚಿಯೂ, ಕೆಪಿಸಿಸಿ ಅಧ್ಯಕ್ಷರ ಹುದ್ದೆಯೂ ಖಾಲಿ ಇಲ್ಲ. ಯಾವುದೇ ಜಾತಿ, ಮತ, ಧರ್ಮದ ಆಧಾರದ ಮೇಲೆ ನಾಯಕತ್ವ ನಿರ್ಧಾರ ಆಗುವುದಿಲ್ಲ. ಪಕ್ಷ 2028ರಲ್ಲೂ ಮರಳಿ ಅಧಿಕಾರಕ್ಕೆ ಬರಲಿದ್ದು, ಆಗ ಪಕ್ಷದ ವರಿಷ್ಠರು, ಸೂಕ್ತ ಸಂದರ್ಭದಲ್ಲಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ನೇತೃತ್ವದಲ್ಲಿ ಉತ್ತಮ ಆಡಳಿತ ನೀಡುತ್ತಿದ್ದು, ಜನಮೆಚ್ಚುಗೆಗೆ ಪಾತ್ರವಾಗಿದೆ.

-ಈಶ್ವರ ಬಿ. ಖಂಡ್ರೆ, ಅರಣ್ಯ ಜೀವಿಶಾಸ್ತ್ರ ಮತ್ತು ಪರಿಸರ ಸಚಿವ

'ಯತೀಂದ್ರ ಎಲ್ಲಿಯೂ ಮುಖ್ಯಮಂತ್ರಿ ಸ್ಥಾನವಾಗಲಿ, ಪಕ್ಷದ ಅಧ್ಯಕ್ಷ ಸ್ಥಾನದ ಬಗ್ಗೆಯಾಗಲಿ ಹೇಳಿಲ್ಲ. 2028ರ ಚುನಾವಣೆಯ ಸ್ಥಿತಿಗತಿ ನೋಡಿ ಕೊಂಡು ನಿರ್ಧಾರ ಮಾಡೋಣ. ಪಕ್ಷದ ಹೈಕಮಾಂಡ್ ಯಾರನ್ನು ಏನು ಮಾಡಬೇಕು ಎಂದು ನಿರ್ಧರಿಸುತ್ತದೆ' ಎಂದೂ ಹೇಳಿದರು. ದಲಿತ ಮುಖ್ಯಮಂತ್ರಿಗೆ ಅವಕಾಶ ಬರುವವರೆಗೆ ಕಾಯಬೇಕು. ಈಗಂತೂ ಅವಕಾಶ ಇಲ್ಲ. ನವೆಂಬರ್ ಕ್ರಾಂತಿ ಆಗುವುದಿಲ್ಲ. ಅದಕ್ಕೆ ಹೈಕಮಾಂಡ್ ಬಿಡುವುದಿಲ್ಲ. ಮಹಾರಾಷ್ಟ್ರ ಉಪ ಮುಖ್ಯಮಂತ್ರಿ ಏಕನಾಥ್ ಶಿಂಧೆ ಒಬ್ಬರೇ, ಮಾಜಿ ಮುಖ್ಯಮಂತ್ರಿ ಶರದ್ ಪವಾರ್ ಕೂಡ ಒಬ್ಬರೇ. ಇನ್ನೊಬ್ಬ ಏಕನಾಥ್ ಶಿಂಧೆ, ಪವಾರ್ ಹುಟ್ಟಿಕೊಳ್ಳಲು ಆಗುವುದಿಲ್ಲ' ಎಂದು ಸಚಿವ ಸತೀಶ್ ಜಾರಕಿಹೊಳಿ ತಿಳಿಸಿದರು.



**ನವೆಂಬರ್ 15ಕ್ಕೆ ಸಿದ್ದರಾಮಯ್ಯ ದೆಹಲಿಗೆ!**

ಇನ್ನು ನವೆಂಬರ್ 15ರಂದು ಸಿಎಂ ಸಿದ್ದರಾಮಯ್ಯ ಅವರು ದೆಹಲಿ ಪ್ರವಾಸ ಕೈಗೊಳ್ಳಲಿದ್ದಾರೆ. ದೆಹಲಿಯಲ್ಲಿ ಕಾಂಗ್ರೆಸ್ ಹಿರಿಯ ನಾಯಕ ಕಪಿಲ್ ಸಿಬಲ್ ಅವರ ಪುಸ್ತಕ ಬಿಡುಗಡೆ ಕಾರ್ಯಕ್ರಮ ಇದೆ. ಆದರೆ ಇದರ ನೆಪದಲ್ಲಿ ಹೈಕಮಾಂಡ್ ನಾಯಕರನ್ನು ಭೇಟಿ ಮಾಡಿ ಮಾತುಕತೆ ನಡೆಸುವ ಸಾಧ್ಯತೆ ದಟ್ಟವಾಗಿದೆ. ನವೆಂಬರ್ 6ರಂದು ಬಿಹಾರದಲ್ಲಿ ಮೊದಲನೇ ಹಂತದ ಚುನಾವಣೆ ನಡೆಯಲಿದೆ. ಬಿಹಾರ ಚುನಾವಣಾ ಫಲಿತಾಂಶದ ಬಳಿಕ ರಾಜ್ಯ ರಾಜಕಾರಣದಲ್ಲಿ ಕೆಲವೊಂದು ಬದಲಾವಣೆ ನಡೆಯುವುದುವ ಪಕ್ಕಾ ಎನ್ನುತ್ತಿವೆ ಮೂಲಗಳು. ಈ ಸುಳಿವನ್ನು ಸಚಿವರು, ಶಾಸಕರು ನೀಡುತ್ತಿದ್ದಾರೆ. ಹೀಗಾಗಿ ಸಿಎಂ ಹಾಗೂ ಡಿಸಿಎಂ ದೆಹಲಿ ಪ್ರವಾಸ ಸಾಕಷ್ಟು ಕುತೂಹಲಕ್ಕೆ ಕಾರಣವಾಗಿದೆ.

• ಉದಯವಾಹಿನಿ, ಮಂಗಳೂರು

ಕಲ್ಲಡ್ಕ ಪ್ರಭಾಕರ ಭಟ್ ಅವರ ಮೇಲೆ ಎಫ್‌ಐಆರ್ ದಾಖಲಾದ ಬಗ್ಗೆ ಪ್ರತಿಕ್ರಿಯಿಸಿ, ಯಾರೇ ದ್ವೇಷ ಭಾಷಣ ಮಾಡಿದರೂ ಅವರ ಮೇಲೆ ಎಫ್‌ಐಆರ್ ಹಾಕಿಯೇ ಹಾಕಲಾಗುತ್ತದೆ. ಸಮಾಜದಲ್ಲಿ ದ್ವೇಷ ಉಂಟು ಮಾಡುವುದು ಸರಿಯಲ್ಲ. ಅಶಾಂತಿ ನಿರ್ಮಾಣ ಮಾಡುವುದು ಸರಿಯಲ್ಲ. ಅವರು ಮಹಿಳೆಯರ ಬಗ್ಗೆ ಕೆಟ್ಟದಾಗಿ ಮಾತನಾಡಿದ್ದಾರೆ. ಆದ್ದರಿಂದ ಎಫ್‌ಐಆರ್ ದಾಖಲಾಗಿದೆ ಎಂದರು. ಆರ್‌ಎಸ್‌ಎಸ್ ಜಮೀನು ಕಟ್ಟಡದ ಆಡಿಟ್ ವಿಚಾರಕ್ಕೆ, ಆ ಬಗ್ಗೆ ನನಗೆ ಗೊತ್ತಿಲ್ಲ. ಸಚಿವ ಕೃಷ್ಣ ಬೈರೇಗೌಡ ಅವರನ್ನೇ ಕೇಳಿ ಎಂದು ಹೇಳಿದರು. ಧರ್ಮಸ್ಥಳ ಎಸ್‌ಐಟಿ ತನಿಖೆ ಪ್ರಕರಣದ ಬಗ್ಗೆ ಮಾತನಾಡಿದ ಅವರು, ತನಿಖೆಗೆ ನಾವು ಇಂಟರ್ಫಿಯರ್ ಆಗಲ್ಲ.

ಗೃಹ ಸಚಿವರಿಗೆ ವರದಿ ಕೊಡಬಹುದು. ವರದಿ ಕೊಡದೆಯೂ ಇರಬಹುದು. ನನ್ನ ಬಳಿ ಏನೂ ಹೇಳಿಲ್ಲ. ಈ ತಿಂಗಳ ಅಂತ್ಯದಲ್ಲಿ ಕೊಡಬಹುದು ಎಂದರು.

**1** ಮುಖ್ಯಮಂತ್ರಿ ಆಗಿ ನೀವೇ ಮುಂದುವರಿಯುತ್ತಿರಾ ಎಂಬ ಪ್ರಶ್ನೆಗೆ ಸಿಎಂ ಹೇಳಿದ್ದೇನು ಗೊತ್ತಾ

**2** ಕರಾವಳಿಗೆ ಪದೇ ಪದೇ ಭೇಟಿ ನೀಡುವ ಬಗ್ಗೆ ಸಿಎಂ ಸಿದ್ದರಾಮಯ್ಯ ಏನಂದ್ರು..

**3** ಯಾರೇ ದ್ವೇಷ ಭಾಷಣ ಮಾಡಿದರೂ ಕೇಸು ದಾಖಲಾಗುತ್ತದೆ ಎಂದ ಸಿಎಂ

**ಮುನಿಯಪ್ಪ ಸಿಎಂ ಆದ್ರೆ ನಾನೂ ಸಂತೋಷ ಪಡ್ತೇನೆ**

ಕೆ.ಹೆಚ್ ಮುನಿಯಪ್ಪ ಸಿಎಂ ಆದರೆ ನಾನೂ ಸಂತೋಷ ಪಡ್ತೇನೆ ಅಂತಾ ಗೃಹ ಸಚಿವ ಪರಮೇಶ್ವರ್ ಹೇಳಿದ್ದಾರೆ. ಶಿವಮೊಗ್ಗದಲ್ಲಿ ಮುನಿಯಪ್ಪ ಪರ ಕಾರ್ಯಕರ್ತರು ಸಿಎಂ ಘೋಷಣೆ ಕೂಗಿದ ವಿಚಾರಕ್ಕೆ ಪ್ರತಿಕ್ರಿಯಿಸಿದ ಅವರು, ನಮ್ಮ ಪಕ್ಷದಲ್ಲಿ ಕೆಚ್.ಹೆಚ್ ಮುನಿಯಪ್ಪರವರು ಹಿರಿಯರಿದ್ದಾರೆ. ಅವರು ಸಮರ್ಥರು. ತುಳಿತಕ್ಕೆ ಒಳಗಾಗಿರೋ ಸಮುದಾಯದಿಂದ ಬಂದವರು. ಮುನಿಯಪ್ಪರವರು ಸಿಎಂ ಆದರೆ ತಪ್ಪೇನು ಎಂದು ಪ್ರಶ್ನಿಸಿದ್ದಾರೆ. ಮುನಿಯಪ್ಪ ಸಿಎಂ ಆದರೆ ನಾನೂ ಸಂತೋಷ ಪಡ್ತೇನೆ. ಆದ್ರೆ ಸಿಎಂ ಆಯ್ಕೆ ಬಗ್ಗೆ ಹೈಕಮಾಂಡ್‌ನವರೇ ತೀರ್ಮಾನಿಸಬೇಕು. ಪ್ರಸ್ತುತ ಬಿಹಾರ ಚುನಾವಣೆಗೆ ಹೈಕಮಾಂಡ್ ಬ್ಯುಸಿ ಇದೆ ಎಂದು ಹೇಳಿದ್ರು.





**ಹೈಕಮಾಂಡ್ ತೀರ್ಮಾನ ಎಂದ ಪರಮೇಶ್ವರ್:** ನಾಯಕತ್ವ ಬದಲಾವಣೆ ಅಥವಾ ಸಂಪುಟ ಪುನಾರಚನೆಯ ಅಗತ್ಯವಿದ್ರೆ ಬಿಹಾರದಲ್ಲಿ ಚುನಾವಣೆಯ ಬಳಿಕ ಕಾಂಗ್ರೆಸ್ ಹೈಕಮಾಂಡ್ ತೀರ್ಮಾನ ಮಾಡಲಿದೆ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ತಿಳಿಸಿದ್ದಾರೆ. ಸದಾಶಿವನಗರ ನಿವಾಸದ ಬಳಿ ಮಾತನಾಡಿ, ಸಿಎಂ ಬದಲಾವಣೆ ಬಗ್ಗೆ ತೀರ್ಮಾನ ಕೈಗೊಳ್ಳುವುದು ಹೈಕಮಾಂಡ್. ನಾವು ಇಲ್ಲಿ ಕುಳಿತುಕೊಂಡು ತೀರ್ಮಾನ ಕೈಗೊಳ್ಳಲು ಆಗುವುದಿಲ್ಲ. ಅವಶ್ಯಕತೆ ಇದ್ದರೆ ಬಿಹಾರ ಚುನಾವಣೆ ನಂತರ ಹೈಕಮಾಂಡ್‌ನವರೇ ತೀರ್ಮಾನ ಮಾಡುತ್ತಾರೆ. ಪುನಾರಚನೆಯೋ, ಎರಡೂವರೆ ವರ್ಷದ ನಂತರ ಅಧಿಕಾರ ಬದಲಾವಣೆಯೋ, ಏನೇ ಇದ್ರೂ ಹೈಕಮಾಂಡ್ ತೀರ್ಮಾನ ಮಾಡಲಿದೆ. ನಾವು ಇಲ್ಲಿ ಮಾತಾಡೋದರಿಂದ ಗೊಂದಲ ಆಗುತ್ತೆ. ಆಡಳಿತಕ್ಕೆ ಚುರುಕು ಕೊಡುವ ಕೆಲಸ ಆಗಬೇಕಾಗಿದೆ. ಸಂಪುಟ ಪುನಾರಚನೆ ಬಗ್ಗೆ ನನಗೆ ಯಾರೂ ಹೇಳಿಲ್ಲ ಎಂದು ಸ್ಪಷ್ಟಪಡಿಸಿದರು.

**2028ರ ಚುನಾವಣೆ ಸ್ಪರ್ಧೆ ಬಗ್ಗೆ ಸಿದ್ದರಾಮಯ್ಯ ಸ್ಫೋಟಕ ಹೇಳಿಕೆ!:** ಕರ್ನಾಟಕ ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದ ಸಿಎಂ ಸಿದ್ದರಾಮಯ್ಯ ತನ್ನ ರಾಜಕೀಯ ಜೀವನದ ಬಗ್ಗೆ ಸ್ಫೋಟಕ ಮಾಹಿತಿ ಹಂಚಿಕೊಂಡಿದ್ದಾರೆ. 2028ರ ವಿಧಾನಸಭಾ ಚುನಾವಣೆ ಸ್ಪರ್ಧೆ ಬಗ್ಗೆ ಹೇಳಿಕೆ ನೀಡಿದ್ದಾರೆ. 2028ರ ವಿಧಾನಸಭಾ ಚುನಾವಣೆಯಲ್ಲೂ ನಾನು ಸ್ಪರ್ಧೆ ಮಾಡಬೇಕು ಎಂದು ನನ್ನ ಸ್ನೇಹಿತರು, ಬೆಂಬಲಿಗರು ಹೇಳುತ್ತಿದ್ದಾರೆ ಎಂದು ಸಿದ್ದರಾಮಯ್ಯ ಹೇಳಿದ್ದಾರೆ.

ಹಿಂದೆ ನಾನು 2028ರಲ್ಲಿ ಸ್ಪರ್ಧಿಸಲ್ಲ ಎಂದು ಹೇಳಿದ್ದೆ. ಆದರೆ ಈಗ ನನ್ನ ಸ್ನೇಹಿತರು ನೀವು ಸ್ಪರ್ಧಿಸಿದರೆ ಪಕ್ಷಕ್ಕೆ ದೊಡ್ಡ ಅನುಕೂಲ ಎಂದು ಒತ್ತಾಯಿಸುತ್ತಿದ್ದಾರೆ ಎಂದು ಸಿಎಂ ಸಿದ್ದರಾಮಯ್ಯ ನ್ಯೂಸ್ 18 ರೈಸಿಂಗ್ ಕರ್ನಾಟಕ ಕಾರ್ಯಕ್ರಮದಲ್ಲಿ ಮಾಹಿತಿ ನೀಡಿದ್ದಾರೆ. ಆದರೆ ನಾನು ಇದರ ಬಗ್ಗೆ ಇನ್ನೂ ನಿರ್ಧರಿಸಿಲ್ಲ ಎಂದಿದ್ದಾರೆ. ಒಟ್ಟಾರೆಯಾಗಿ ಇದು ಚುನಾವಣಾ ರಾಜಕೀಯದಿಂದ ನಿವೃತ್ತಿ ಯೋಚನೆಯನ್ನು ಅಲ್ಲಗೆಳೆದಂತಿದೆ.

## ನಾನು 24ಕ್ಯಾರೇಟ್ ಚಿನ್ನ, ನಾಡಗೌಡರಿಗೆ ಸಚಿವ ಸ್ಥಾನ ಕೇಳುವ ಹಕ್ಕಿಲ್ಲ

• ಉದಯವಾಹಿನಿ, ಬೆಂಗಳೂರು

ಶಾಸಕರು ಸಚಿವ ಸ್ಥಾನ ಕೇಳಬಾರದು ಎಂದೇ ನಿಗಮ, ಮಂಡಳಿ ಅಧ್ಯಕ್ಷ ಸ್ಥಾನ ನೀಡಲಾಗಿದೆ. ಹೀಗಾಗಿ ಮುದ್ದೇಬಿಹಾಳ ಶಾಸಕ ಅಪ್ಪಾಜಿ ನಾಡಗೌಡ ಅವರಿಗೆ ಈಗ ಸಚಿವ ಸ್ಥಾನ ಕೇಳುವ ಹಕ್ಕಿಲ್ಲ' ಎಂದು ಇಂಡಿ ಕ್ಷೇತ್ರದ ಕಾಂಗ್ರೆಸ್ ಶಾಸಕ ಯಶವಂತರಾಯಗೌಡ ಪಾಟೀಲ ತಿರುಗೇಟು ನೀಡಿದರು. 'ಸಿ.ಎಸ್.ನಾಡಗೌಡರು ಈಗಾಗಲೇ ಎರಡು ಬಾರಿ ಸಚಿವರಾಗಿದ್ದಾರೆ. ಅಲ್ಲದೇ, ಹಾಲಿ ನಿಗಮ-ಮಂಡಳಿ ಅಧ್ಯಕ್ಷ ಸ್ಥಾನದಲ್ಲಿದ್ದಾರೆ. ಈಗ ಸಚಿವ ಸ್ಥಾನ ಕೇಳುವುದರಲ್ಲಿ ಅರ್ಥವಿಲ್ಲ' ಎಂದರು. 'ಇಂಡಿ ಮತಕ್ಷೇತ್ರಕ್ಕೆ ಇಲ್ಲಿಯವರೆಗೆ ಸಚಿವ ಸ್ಥಾನ ದೊರಕಿಲ್ಲ. ಈ ಕೊರತೆ ಮುಂಬರುವ ಸಚಿವ ಸಂಪುಟ ಪುನರ್‌ರಚನೆ ವೇಳೆ ನೀಗುವ ವಿಶ್ವಾಸವಿದೆ. ಪಕ್ಷದ ವರಿಷ್ಠರು ಈ ಹಿಂದೆ ನನಗೆ ಸಚಿವ ಸ್ಥಾನ ನೀಡುವ ಭರವಸೆ ನೀಡಿದ್ದಾರೆ. ಹೀಗಾಗಿ ನಿಗಮ, ಮಂಡಳಿ ಅಧ್ಯಕ್ಷ ಸ್ಥಾನದ ಅವಕಾಶ ಬಂದಾಗ ನಯವಾಗಿ ತಿರಸ್ಕರಿಸಿದ್ದೇನೆ. ಈ ಹಿಂದೆ ಪಕ್ಷದ ವರಿಷ್ಠರು ಕೊಟ್ಟಿರುವ ಆಶ್ವಾಸನೆಯಂತೆ ಸಚಿವ ಸ್ಥಾನ ನೀಡಲಿ' ಎಂದು ಹಕ್ಕೊತ್ತಾಯ ಮಾಡಿದರು.

## ಕೃಷಿ ವಿವಿ: ರಾಜ್ಯಮಟ್ಟದ ಪ್ರಶಸ್ತಿಗೆ ಐವರು ಕೃಷಿ ಸಾಧಕರ ಆಯ್ಕೆ

• ಉದಯವಾಹಿನಿ, ಬೆಂಗಳೂರು

ಬೆಂಗಳೂರು ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯವು ಕೃಷಿಮೇಳ-2025ರ ಪ್ರಯುಕ್ತ ರಾಜ್ಯಮಟ್ಟದ ರೈತ ಮತ್ತು ರೈತ ಮಹಿಳೆ ಪ್ರಶಸ್ತಿಗಳಿಗೆ ಐವರು ಕೃಷಿ ಸಾಧಕರನ್ನು ಆಯ್ಕೆ ಮಾಡಿದೆ. ಎಚ್.ಡಿ. ದೇವೇಗೌಡ ರಾಜ್ಯ ಮಟ್ಟದ ಅತ್ಯುತ್ತಮ ರೈತ ಪ್ರಶಸ್ತಿಗೆ ಕೋಲಾರ ತಾಲ್ಲೂಕು ಮದನಹಳ್ಳಿ ಗ್ರಾಮದ ರವಿಶಂಕರ್ ಎಂ.ಎನ್., ಎಂ.ಎಚ್. ಮರೀಗೌಡ ರಾಜ್ಯಮಟ್ಟದ ಅತ್ಯುತ್ತಮ ತೋಟಗಾರಿಕೆ ರೈತ ಪ್ರಶಸ್ತಿಗೆ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿ ತಾಲ್ಲೂಕು ಬೀಡಿಗಾನಹಳ್ಳಿಯ ಮಂಜುನಾಥ ಬಿ.ಆರ್. ಅವರನ್ನು ಆಯ್ಕೆ ಮಾಡಲಾಗಿದೆ. ಕ್ಯಾನ್ ಬ್ಯಾಂಕ್ ರಾಜ್ಯ ಮಟ್ಟದ ಅತ್ಯುತ್ತಮ ರೈತ ಪ್ರಶಸ್ತಿಗೆ ಬೆಂಗಳೂರು ದಕ್ಷಿಣ ಜಿಲ್ಲೆ ರಾಮನಗರ ತಾಲ್ಲೂಕು ಲಕ್ಷ್ಮೀಪುರ ಗ್ರಾಮದ ಶಿವರಾಜು ಎಲ್.ವಿ., ಕ್ಯಾನ್ ಬ್ಯಾಂಕ್ ರಾಜ್ಯ ಮಟ್ಟದ ಅತ್ಯುತ್ತಮ ರೈತ ಮಹಿಳೆ ಪ್ರಶಸ್ತಿಗೆ ಪದ್ಮನಿ, ಆರ್. ದ್ವಾರಕಿನಾಥ್ ಅತ್ಯುತ್ತಮ ರೈತ ಪ್ರಶಸ್ತಿಗೆ ಗೋವಿಂದಪ್ಪ ಎಚ್.ಎಲ್. ಅವರನ್ನು ಆಯ್ಕೆ ಮಾಡಲಾಗಿದೆ. ಇದಲ್ಲದೇ ಜಿಲ್ಲಾ ಮಟ್ಟದ ಪ್ರಗತಿಪರ ರೈತ ಮತ್ತು ರೈತ ಮಹಿಳೆ ಪ್ರಶಸ್ತಿಗೆ ಆನೇಕಲ್ ತಾಲ್ಲೂಕು ಹಳೇಹಳ್ಳಿ ತಾಲ್ಲೂಕಿನ ಸತೀಶ್ ಕುಮಾರ್, ಯಲಹಂಕ ತಾಲ್ಲೂಕು ಚೊಕ್ಕನಹಳ್ಳಿ ಲಕ್ಷ್ಮಮ್ಮ ಸೇರಿದಂತೆ 12 ಸಾಧಕರನ್ನು ಆಯ್ಕೆ ಮಾಡಲಾಗಿದೆ. ತಾಲ್ಲೂಕು ಮಟ್ಟದ ಯುವ ರೈತ ಮತ್ತು ಯುವ ರೈತ ಮಹಿಳೆ ಪ್ರಶಸ್ತಿಗೆ 74 ಮಂದಿಯನ್ನು ಆಯ್ಕೆ ಮಾಡಲಾಗಿದೆ ಎಂದು ಬೆಂಗಳೂರು ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಕುಲಸಚಿವರು ತಿಳಿಸಿದ್ದಾರೆ.

## ಬಿಪಿಎಲ್ ರೇಷನ್ ಕಾರ್ಡ್‌ದಾರರ ಆದಾಯ ಮಿತಿ ಬದಲಾವಣೆಗೆ ಸರ್ಕಾರ ಚಿಂತನೆ

• ಉದಯವಾಹಿನಿ ಬೆಂಗಳೂರು

ರಾಜ್ಯ ಸರ್ಕಾರವು ಬಿಪಿಎಲ್ ಕಾರ್ಡ್‌ಗಳ ಅರ್ಹತಾ ಮಾನದಂಡಗಳನ್ನು ಪರಿಷ್ಕರಿಸುವ ಬಗ್ಗೆ ಚಿಂತನೆ ನಡೆಸುತ್ತಿದೆ ಎಂದು ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಕೆ.ಎಚ್. ಮುನಿಯಪ್ಪ ತಿಳಿಸಿದ್ದಾರೆ.

ಪ್ರಸ್ತುತ 1.2 ಲಕ್ಷ ರೂಪಾಯಿಗಳ ವಾರ್ಷಿಕ ಆದಾಯ ಮಿತಿಯನ್ನು ಹಣದುಬ್ಬರಕ್ಕೆ ಅನುಗುಣವಾಗಿ ಪರಿಷ್ಕರಿಸುವ ಬಗ್ಗೆ ಕೇಳಿದ ಪ್ರಶ್ನೆಗೆ ಉತ್ತರಿಸಿದ ಅವರು, ರೇಷನ್ ಕಾರ್ಡ್‌ಗಳ ವಿತರಣೆಗೆ ಕೇಂದ್ರ ಸರ್ಕಾರ ಮಾರ್ಗಸೂಚಿಗಳನ್ನು ನೀಡುತ್ತದೆ. ಅರ್ಹತಾ ಮಾನದಂಡಗಳನ್ನು ಪರಿಷ್ಕರಿಸುವುದು ಸರ್ಕಾರದ ಪರಿಶೀಲನೆಯಲ್ಲಿದೆ. ಈ ವಿಷಯದಲ್ಲಿ ಅಗತ್ಯವಿರುವ ಕ್ರಮ ಕೈಗೊಳ್ಳುತ್ತೇವೆ ಎಂದು ಹೇಳಿದರು. ಭಾನುವಾರ ಶಿವಮೊಗ್ಗದಲ್ಲಿ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅವರು, ಪ್ರಸ್ತುತ 5 ಕೆಜಿ ಅಕ್ಕಿಯ ಜೊತೆಗೆ, ಸಾರ್ವಜನಿಕ ವಿತರಣಾ ವ್ಯವಸ್ಥೆಯ ಅಡಿಯಲ್ಲಿ ಬೇಳೆಕಾಳುಗಳು, ಅಡುಗೆ ಎಣ್ಣೆ, ಸಕ್ಕರೆ ಮತ್ತು ಉಪ್ಪನ್ನು ವಿತರಿಸಲು ಎರಡು ತಿಂಗಳೊಳಗೆ ಟೆಂಡರ್ ಕರೆಯಲಾಗುವುದು.





ಮುಖ್ಯಮಂತ್ರಿಗಳು ಈ ಪ್ರಸ್ತಾವನೆಗೆ ಅನುಮೋದನೆ ನೀಡಿದ್ದಾರೆ ಎಂದರು. ದುರುಪಯೋಗವನ್ನು ತಡೆಯಲು, ಅಕ್ಕಿಯ ಜೊತೆಗೆ ಬೇಳೆಕಾಳುಗಳು ಮತ್ತು ಅಡುಗೆ ಎಣ್ಣೆಯನ್ನು ವಿತರಿಸಲು ಸರ್ಕಾರ ನಿರ್ಧರಿಸಿದೆ. ರೇಷನ್ ಕಾರ್ಡ್ ಹೊಂದಿರುವವರ ಸಮೀಕ್ಷೆಯು ಸುಮಾರು 90% ರಷ್ಟು ಜನರು ಬೇಳೆಕಾಳುಗಳು ಮತ್ತು ಅಡುಗೆ ಎಣ್ಣೆಯನ್ನು ಸೇರಿಸಬೇಕೆಂದು ಕೋರಿದ್ದಾರೆ ಎಂದು ಬಹಿರಂಗಪಡಿಸಿದೆ ಎಂದು ಸಚಿವರು ವಿವರಿಸಿದರು.

**ಕೇಂದ್ರ ಸರ್ಕಾರ ಮಾರ್ಗಸೂಚಿ**

ಯಾವುದೇ ಬಿಪಿಎಲ್ ಅಥವಾ ಎಪಿಎಲ್ ಕಾರ್ಡ್‌ಗಳನ್ನು ರದ್ದುಗೊಳಿಸಲಾಗುವುದಿಲ್ಲ, ಆದರೆ ಅನರ್ಹ ಬಿಪಿಎಲ್ ಕಾರ್ಡ್ ಹೊಂದಿರುವವರಿಗೆ ಎಪಿಎಲ್ ಕಾರ್ಡ್‌ಗಳನ್ನು ನೀಡಲಾಗುವುದು ಎಂದು ಅವರು ಸ್ಪಷ್ಟಪಡಿಸಿದರು.

**ಅನರ್ಹ ಬಿಪಿಎಲ್ ಕಾರ್ಡ್ ತೆಗೆದು ಹಾಕಿದ ಬಳಿಕ ಹೊಸ ರೇಷನ್ ಕಾರ್ಡ್ ಅರ್ಜಿ:** ಅನರ್ಹ ಬಿಪಿಎಲ್ ಫಲಾನುಭವಿಗಳನ್ನು ತೆಗೆದುಹಾಕುವ ಪ್ರಕ್ರಿಯೆ ಪೂರ್ಣಗೊಂಡ ನಂತರ ಹೊಸ ರೇಷನ್ ಕಾರ್ಡ್‌ಗಳಿಗಾಗಿ ಅರ್ಜಿಗಳನ್ನು ಆಹ್ವಾನಿಸಲಾಗುವುದು ಎಂದು ಅವರು ಹೇಳಿದರು. 'ಒನ್ ನೇಷನ್ ಒನ್ ರೇಷನ್ ಕಾರ್ಡ್' ಯೋಜನೆಯ ಅಡಿಯಲ್ಲಿ ಬರುವ ಫಲಾನುಭವಿಗಳಿಗೆ ರೇಷನ್ ಕಾರ್ಡ್‌ಗಳನ್ನು ನಿರಾಕರಿಸಲಾಗುವುದಿಲ್ಲ ಎಂದು ಅವರು ಭರವಸೆ ನೀಡಿದರು.

## ಬಿಎಂಟಿಸಿ ಇವಿ ಬಸ್‌ಗಳಲ್ಲಿ ತಾಂತ್ರಿಕ ದೋಷ: ಹೆಚ್ಚುತ್ತಿವೆ ಅಪಘಾತಗಳ ಪ್ರಮಾಣ

### ■ ಸಮಸ್ಯೆ ಪರಿಹರಿಸುವಂತೆ ಕೋರಿ ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿಗೆ ಪತ್ರ ಬರೆದ ರಾಮಲಿಂಗ ರೆಡ್ಡಿ

• ಉದಯವಾಹಿನಿ ಬೆಂಗಳೂರು


ಸಿಲಿಕಾನ್ ಸಿಟಿ ಬೆಂಗಳೂರು ನಗದಲ್ಲಿ ಸಂಚರಿಸುವ ಬಿಎಂಟಿಸಿ ಪರಿಸರ ಸ್ನೇಹಿ ಇವಿ ಬಸ್ ಗಳಲ್ಲಿ ತಾಂತ್ರಿಕ ದೋಷ ತೀವ್ರ ಪ್ರಮಾಣದಲ್ಲಿ ಕಂಡು ಬರುತ್ತಿವೆ. ಇದುವರೆಗೆ ಸುಮಾರು 13,000 ಇವಿ ಬಸ್‌ಗಳು ಕೆಟ್ಟು ನಿಂತ ಪ್ರಕರಣಗಳು ವರದಿಯಾಗಿವೆ. ಇನ್ನು ಅಪಘಾತಗಳ ಸಂಖ್ಯೆ ಕೂಡಾ ಹೆಚ್ಚಾಗುತ್ತಿದ್ದು, ಇವಿ ಬಸ್‌ಗಳು ಪರಿಸರ ಸ್ನೇಹಿ ಆದರೂ ಇತರ ಸಮಸ್ಯೆಗಳಿಗೆ ಕಾರಣವಾಗುತ್ತಿವೆ.

ಈ ಹಿನ್ನೆಲೆಯಲ್ಲಿ ಸಮಸ್ಯೆ ಪರಿಹರಿಸಲು ಕ್ರಮ ಕೈಗೊಳ್ಳುವಂತೆ ಕೋರಿ ಕೇಂದ್ರ ಬೃಹತ್ ಕೈಗಾರಿಕಾ ಸಚಿವ ಎಚ್.ಡಿ.ಕುಮಾರಸ್ವಾಮಿಗೆ ಸಾರಿಗೆ ಸಚಿವ ರಾಮಲಿಂಗಾ ರೆಡ್ಡಿ ಪತ್ರ ಬರೆದಿದ್ದಾರೆ.

**ನಿತ್ಯ ಒಂದಲ್ಲಾ ಒಂದು ಸಮಸ್ಯೆ,!:** ನಗರದಲ್ಲಿ ಕಾರ್ಯನಿರ್ವಹಿಸುವ ಬಿಎಂಟಿಸಿ ಇವಿ ಬಸ್‌ಗಳಲ್ಲಿ ಇದುವರೆಗೆ ಸುಮಾರು 13,000 ಬ್ರೇಕ್ ಡೌನ್ ಪ್ರಕರಣಗಳು ವರದಿಯಾಗಿವೆ. ಆದರೆ, ಬಿಎಂಟಿಸಿ ಬಸ್‌ಗಳು ಕೇವಲ 321 ಬ್ರೇಕ್ ಡೌನ್ ಪ್ರಕರಣಗಳು ಕಂಡಿವೆ. ಹೀಗಾಗಿ ಜಿಸಿಸಿ ಆಪರೇಟರ್‌ಗಳ ಕಾರ್ಯಕ್ಷಮತೆಯ ಪರಿಶೀಲನೆ ಕೈಗೊಳ್ಳಬೇಕು. ವಿಶೇಷವಾಗಿ ಅಪಘಾತಗಳ ಪ್ರಮಾಣ ಕಡಿಮೆಗೊಳಿಸಲು ಕ್ರಮ ವಹಿಸುವುದು, ಸುರಕ್ಷತಾ ಅನುಸರಣೆ ಮತ್ತು ಚಾಲಕರ ತರಬೇತಿ ಕುರಿತಂತೆ ಗಮನಹರಿಸಬೇಕು ಎಂದು ಕೇಂದ್ರ ಸಚಿವರಿಗೆ ಬರೆದ ಪತ್ರದಲ್ಲಿ ಕೋರಲಾಗಿದೆ ಎಂಬ ಮಾಹಿತಿಯನ್ನು ರಾಮಲಿಂಗಾ ರೆಡ್ಡಿ ನೀಡಿದ್ದಾರೆ.



**ಕೆಟ್ಟು ನಿಂತಿವೆ 13,000 ಬಸ್ ಗಳು!**



**ಪತ್ರದಲ್ಲಿ ಏನೆಲ್ಲಾ ಅಂಶಗಳಿವೆ:** ಮುಂದಿನ ಟೆಂಡರ್ ದಾಖಲೆಗಳಲ್ಲಿ ಬಾಧ್ಯತೆಯ ಅಂಶಗಳನ್ನು ಸೇರಿಸಿ, ಇಎಂ ಆಪರೇಟರ್‌ಗಳು ಸೇವೆ ಪ್ರಾರಂಭಿಸುವ ಮೊದಲು ಸಮಗ್ರ ಮತ್ತು ಪ್ರಮಾಣಿತ ಚಾಲಕರ ತರಬೇತಿ ಕಾರ್ಯಕ್ರಮಗಳನ್ನು ಕೈಗೊಳ್ಳುವುದು ಕಡ್ಡಾಯ ಮಾಡಬೇಕು. ಸುರಕ್ಷತೆ ಮತ್ತು ಸೇವಾ ಗುಣಮಟ್ಟದ ಮಾನದಂಡಗಳನ್ನು ಕಟ್ಟುನಿಟ್ಟಾಗಿ ಪಾಲಿಸಲು ರಾಜ್ಯ ಸಾರಿಗೆ ಸಂಸ್ಥೆಗಳು ಮತ್ತು ಸಚಿವಾಲಯ ಜಂಟಿಯಾಗಿ ಯೋಜನೆಯನ್ನು ರೂಪಿಸಬೇಕು.

ಪ್ರಯಾಣಿಕರ ಹಿತಾಸಕ್ತಿ ಮತ್ತು ಎಲೆಕ್ಟ್ರಿಕ್ ಮೊಬಿಲಿಟಿ ಯೋಜನೆಗಳ ವಿಶ್ವಾಸಾರ್ಹತೆಯನ್ನು ಕಾಯ್ದುಕೊಳ್ಳುವ ದೃಷ್ಟಿಯಿಂದ ಶೀಘ್ರದಲ್ಲೇ ಸರಿಯಾದ ಕ್ರಮಗಳನ್ನು ಕೈಗೊಳ್ಳುವುದು ಅವಶ್ಯಕವಾಗಿದೆ.

ಜಿಸಿಸಿ ಮಾದರಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲೆಕ್ಟ್ರಿಕ್ ಬಸ್ಸುಗಳಲ್ಲಿ ಚಾಲಕರ ನಿರ್ಲಕ್ಷ್ಯ ಮತ್ತು ಬೇಜವಾಬ್ದಾರಿಯ ಚಾಲನೆಗಳಿಂದ ಅಪಘಾತಗಳ ಹಾಗೂ ಮಾರಣಾಂತಿಕ ಪ್ರಕರಣಗಳ ಸಂಖ್ಯೆ ಹೆಚ್ಚಾಗುತ್ತಿವೆ.

ಇದರ ಪರಿಣಾಮವಾಗಿ, ಸಾರ್ವಜನಿಕರು ಸಾರಿಗೆ ವ್ಯವಸ್ಥೆಯ ಮೇಲಿನ ನಂಬಿಕೆಯನ್ನು ಕಳೆದುಕೊಳ್ಳುವ ಪರಿಸ್ಥಿತಿ ಉಂಟಾಗಿದೆ.

**ಬಿಎಂಟಿಸಿ ಡೀಸೆಲ್ ಬಸ್ ಕಾರ್ಯಕ್ಷಮತೆ ಹೆಚ್ಚು!**

**ಬಿಎಂಟಿಸಿ ಕಾರ್ಯನಿರ್ವಹಿಸುತ್ತಿರುವ 5,423 ಡೀಸೆಲ್ ಬಸ್‌ಗಳ ಕಾರ್ಯಕ್ಷಮತೆ ಉತ್ತಮವಾಗಿದೆ. ಬ್ರೇಕ್ ಡೌನ್, ನಿರ್ವಹಣಾ ಸಮಸ್ಯೆ ಬಹಳ ಕಡಿಮೆ ಇದೆ. ಈವರೆಗೆ ಕೇವಲ 321 ಡೀಸೆಲ್ ಬಸ್ ಬ್ರೇಕ್ ಡೌನ್ ಪ್ರಕರಣಗಳು ವರದಿಯಾಗಿವೆ ಎಂದರು. 2023-24 ರಿಂದ 2025-26 ಸೆಪ್ಟೆಂಬರ್ ವರೆಗೆ 2% ರದ್ದತಿ ಕಂಡಿದೆ. ಮೊಬೈಲ್ ಬಳಕೆ ಪ್ರಕರಣ 561 ಹಾಗೂ ಮದ್ಯಪಾನ/ಅಜಾಗರೂಕ ಚಾಲನೆಯ 67 ಪ್ರಕರಣ ವರದಿಯಾಗಿವೆ ಎಂದು ರಾಮಲಿಂಗಾ ರೆಡ್ಡಿ ವಿವರ ನೀಡಿದ್ದಾರೆ.**

2023-24 ರಿಂದ 2025-26 ಸೆಪ್ಟೆಂಬರ್ ವರೆಗೆ ಇವಿ ಬಿಎಂಟಿಸಿ ಬಸ್‌ಗಳಿಂದ 70 ಅಪಘಾತ ಪ್ರಕರಣಗಳು ದಾಖಲಾಗಿವೆ.


ಎನ್‌ಟಿಪಿಸಿ ಲಿಮಿಟೆಡ್ ನಗರದಲ್ಲಿ ಒಟ್ಟು 90 ಇವಿ ಬಿಎಂಟಿಸಿ ಬಸ್‌ಗಳ ಕಾರ್ಯನಿರ್ವಹಣೆ ಮಾಡುತ್ತಿದೆ. ಈ ಬಸ್‌ಗಳು ಕಳೆದ ಎರಡೂವರೆ ವರ್ಷದಿಂದ ಒಟ್ಟು 6.22% ರದ್ದತಿ ಕಂಡಿದೆ. ಅದೇ ಒಟ್ಟು 150 ಬಾರಿ ಅಪಘಡಗಳು ಸಂಭವಿಸಿವೆ. ಬ್ಯಾಟರಿ ಕಾರಣದಿಂದ ಕೆಟ್ಟು ನಿಂತ ಬಸ್‌ಗಳ ಪ್ರಕರಣ 842 ಆಗಿದೆ.

ಇವಿ ಬಸ್‌ಗಳ ಚಾಲಕರಿಗೆ ಸರಿಯಾದ ತರಬೇತಿ ನೀಡಲಾಗುತ್ತಿಲ್ಲ. ಅದರಲ್ಲಿ ಅನುಭವಿ ಚಾಲಕರಿಲ್ಲ. ಅಜಾಗರೂಕ ಚಾಲನೆ ಸಂಬಂಧ ಅವರಿಗೆ ಎಚ್ಚರಿಕೆಯನ್ನೂ ನೀಡಲಾಗಿದೆ. ಇದರಿಂದ ನಮಗೂ ಕೆಟ್ಟ ಹೆಸರು, ಕೇಂದ್ರ ಸರ್ಕಾರಕ್ಕೂ ಕೆಟ್ಟ ಹೆಸರು ಬರುತ್ತಿದೆ. ಹೀಗಾಗಿ ಇವಿ ಚಾಲಕರನ್ನು ಆಯಾ ರಸ್ತೆ ಸಾರಿಗೆ ಸಂಸ್ಥೆಗಳಿಗೆ ಜವಾಬ್ದಾರಿ ಕೊಡಬೇಕು. ಈ ಇವಿ ಬಸ್‌ಗಳ ಸಂಬಂಧ ನಾಲ್ಕು ರಸ್ತೆ ನಿಗಮಗಳಿಗೆ ಮಾಸಿಕ ಸುಮಾರು 35 ಕೋಟಿ ರೂ. ಕಾರ್ಯ ನಿರ್ವಹಣಾ ವೆಚ್ಚ ತಗುಲುತ್ತಿದೆ. ಹೀಗೆ ಹಲವು ಅಂಶಗಳನ್ನು ಪತ್ರದಲ್ಲಿ ವಿವರಿಸಿದ್ದಾರೆ.

| ಈ ದಿನದ ದರ | ಪೆಟ್ರೋಲ್: 103.50 ₹/L | ಡೀಸೆಲ್ : 90.03 ₹/L | ಬಂಗಾರ: ₹12,328/Gram24ct ₹11,300/Gram22ct | ಬೆಳ್ಳಿ: ₹157.00/Gram |
|---|---|---|---|---|

# ದಾಸರ ಪದಗಳ ಗಾಯನ

• ಉದಯವಾಹಿನಿ ಬೆಂಗಳೂರು



ಜಯನಗರ 5ನೇ ಬಡಾವಣೆಯ ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಪರಮಪೂಜ್ಯ ಶ್ರೀ ಶ್ರೀ ಸುಬುಧೇಂದ್ರತೀರ್ಥ ಶ್ರೀಪಾದಂಗಳವರ ಆದೇಶದಂತೆ ಶ್ರೀಮಠದ ಹಿರಿಯ ವ್ಯವಸ್ಥಾಪಕರಾದ ಶ್ರೀ ಆರ್ ಕೆ ವಾದೀಂದ್ರಾಚಾರ್ಯರ ನೇತೃತ್ವದಲ್ಲಿ ಅಕ್ಟೋಬರ್ 30, ಗುರುವಾರ ಸಂಜೆ 5-15ಕ್ಕೆ ಕು|| ಅವನಿ ಭಟ್ (ದಾಸರ ಪದಗಳ ಗಾಯನ), ಶ್ರೀ ಟಿ.ಎಸ್. ರಮೇಶ್ (ಕೀಬೋರ್ಡ್), ಶ್ರೀ ಎನ್. ಮೋಹನ್ (ತಬಲಾ) ಏರ್ಪಡಿಸಿದೆ ಎಂದು ಶ್ರೀ ನಂದಕಿಶೋರ್ ಆಚಾರ್ಯರು ತಿಳಿಸಿದ್ದಾರೆ. ಸ್ಥಳ : ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠ, 11ನೇ ಮುಖ್ಯರಸ್ತೆ, 45ನೇ ಅಡ್ಡರಸ್ತೆ, ಜಯನಗರ 5ನೇ ಬಡಾವಣೆ, ಬೆಂಗಳೂರು41

# ಖಾಸಗಿ ಕಂಪನಿಯ ಬ್ಯಾಂಕ್ ಖಾತೆ ಹ್ಯಾಕ್ ಮಾಡಿ 48 ಕೋಟಿ ರೂ. ವಂಚನೆ

• ಉದಯವಾಹಿನಿ ಬೆಂಗಳೂರು

ಖಾಸಗಿ ಹಣಕಾಸು ಕಂಪನಿಯ ಬ್ಯಾಂಕ್ ಖಾತೆಗಳನ್ನು ಹ್ಯಾಕ್ ಮಾಡಿ ವಿದೇಶಿ ಐಪಿ ವಿಳಾಸಗಳನ್ನು ಬಳಸಿಕೊಂಡು 48 ಕೋಟಿ ರೂ. ವಂಚನೆಯಿಂದ ವರ್ಗಾಯಿಸಿದ ಆರೋಪದ ಮೇಲೆ ಇಬ್ಬರನ್ನು ಬಂಧಿಸಲಾಗಿದೆ ಎಂದು ಪೊಲೀಸರು ಸೋಮವಾರ ತಿಳಿಸಿದ್ದಾರೆ. ಈ ಸಂಬಂಧ ವಿಜ್‌ಡಿಎಂ ಫೈನಾನ್ಸ್ ಪ್ರೈವೇಟ್ ಲಿಮಿಟೆಡ್‌ನ ಹಿರಿಯ ವ್ಯವಸ್ಥಾಪಕರೊಬ್ಬರು ಆಗಸ್ಟ್ 7 ರಂದು ಸೈಬರ್ ಕ್ರೈಮ್ ಪೊಲೀಸ್ ಠಾಣೆಗೆ ನೀಡಿದ ದೂರಿನ ಆಧಾರದ ಮೇಲೆ ಎಫ್‌ಐಆರ್ ದಾಖಲಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಆಗಸ್ಟ್ 6 ಮತ್ತು 7 ರ ನಡುವೆ ಕಂಪನಿಯ ಬ್ಯಾಂಕ್ ಖಾತೆಗಳಿಂದ ಹಲವಾರು ಅನಧಿಕೃತ ಮತ್ತು ಅನುಮಾನಾಸ್ಪದ ಹಣ ವರ್ಗಾವಣೆಗಳು ನಡೆದಿವೆ ಎಂದು ಅವರು ತಮ್ಮ ದೂರಿನಲ್ಲಿ ತಿಳಿಸಿದ್ದಾರೆ. ಕಂಪನಿಯ ಆಂತರಿಕ ತನಿಖೆಯಲ್ಲಿ ಈ ವಹಿವಾಟುಗಳನ್ನು ಅದರ ಅಧಿಕೃತ ವ್ಯವಸ್ಥೆಗಳು ಅಥವಾ ನೋಂದಾಯಿತ ಐಪಿ ವಿಳಾಸಗಳಿಂದ ನಡೆಸಲಾಗಿಲ್ಲ ಎಂದು ತಿಳಿದುಬಂದಿದೆ. ಬದಲಾಗಿ, ಅವು ವಿದೇಶಿ ಐಪಿ ವಿಳಾಸಗಳಿಂದ ನಡೆದಿದೆ ಮತ್ತು ಸುಮಾರು 47 ಕೋಟಿ ರೂ.ಗಳನ್ನು ಕಂಪನಿಯ ಖಾತೆಗಳಿಂದ ಇತರ ಬ್ಯಾಂಕ್ ಖಾತೆಗಳಿಗೆ ಅಕ್ರಮವಾಗಿ ವರ್ಗಾಯಿಸಲಾಗಿದೆ ಎಂದು ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

# ವಿದ್ಯುತ್ ಕ್ಷೇತ್ರದ ಖಾಸಗೀಕರಣ ನಿಲ್ಲಿಸಿ: ಸರ್ಕಾರಕ್ಕೆ ಎಐಇಸಿಎ ಆಗ್ರಹ

• ಉದಯವಾಹಿನಿ ಬೆಂಗಳೂರು

ವಿದ್ಯುತ್ ಕ್ಷೇತ್ರದ ಖಾಸಗೀಕರಣ ಹಾಗೂ ಸ್ಮಾರ್ಟ್ ಮೀಟರ್ ಅಳವಡಿಕೆಯನ್ನು ನಿಲ್ಲಿಸುವಂತೆ ದಕ್ಷಿಣ ಭಾರತ ವಿದ್ಯುತ್ ಗ್ರಾಹಕರ ಸಮಾವೇಶದಲ್ಲಿ ಸರ್ಕಾರವನ್ನು ಆಗ್ರಹಿಸಲಾಯಿತು. ನಗರದಲ್ಲಿ ಅಖಿಲ ಭಾರತ ವಿದ್ಯುತ್ ಬಳಕೆದಾರರ ಸಂಘ (ಎಐಇಸಿಎ) ಆಯೋಜಿಸಿದ್ದ ಸಮಾವೇಶದಲ್ಲಿ ಟೈಮ್ ಆಫ್ ಡೇ ಸುಂಕವನ್ನು ಕೈ ಬಿಡಬೇಕು ಹಾಗೂ ರಾಜ್ಯದಲ್ಲಿ ಪ್ರತಿ ಯೂನಿಟ್‌ಗೆ 36 ಪೈಸೆ ಮೇಲು ತೆರಿಗೆ ಮತ್ತು ಸ್ಥಿರ ದರ ಏರಿಕೆ ವಾಪಸ್ ಪಡೆಯುವುದು ಸೇರಿ ನಾಲ್ಕು ನಿರ್ಣಯ ಕೈಗೊಳ್ಳಲಾಯಿತು. ಸಮಾವೇಶ ಉದ್ಘಾಟಿಸಿ ಮಾತನಾಡಿದ ಎಐಇಸಿಎ ಅಧ್ಯಕ್ಷ ಸ್ವಪನ್ ಘೋಷ್, ವಿದ್ಯುತ್ ಕ್ಷೇತ್ರವು ಈಗ ಸಂಪೂರ್ಣ ಖಾಸಗೀಕರಣವಾಗುತ್ತಿದೆ. ಈ ಜನವಿರೋಧಿ ನೀತಿಯ ವಿರುದ್ಧ ದೇಶದಾದ್ಯಂತ ಬಳಕೆದಾರರೆಲ್ಲರೂ ಚಳುವಳಿ ಪ್ರಾರಂಭಿಸಬೇಕು' ಎಂದು ಕರೆ ನೀಡಿದರು. ಸಾಮಾಜಿಕ ಹೋರಾಟಗಾರ ಎಂ.ಜಿ.ದೇವಸಹಾಯಂ ಎಐಇಸಿಎ ಸಲಹೆಗಾರ ಎಸ್. ಗಾಂಧಿ ಮಾತನಾಡಿದರು. ಜೆಪಿಎಸ್ ರಾಜ್ಯ ಉಪಾಧ್ಯಕ್ಷ ಬಿ. ದಿಲೀಪನ್, ಎಐಇಸಿಎ ಉಪಾಧ್ಯಕ್ಷ ಕೆ.ಸೋಮಶೇಖರ್, ಖಜಾಂಜಿ ಅಜಯ್ ಚಟರ್ಜಿ, ಪ್ರಧಾನ ಕಾರ್ಯದರ್ಶಿ ವೇಣುಗೋಪಾಲ್ ಭಟ್, ಎಐಕೆಕೆಎಂಎಸ್ ಮುಖಂಡರಾದ ದೀಪಾ ಹಾಜರಿದ್ದರು.

# ಪ್ರೀತಿಸುವಂತೆ ವಸ್ತ್ರವಿನ್ಯಾಸಕಿಗೆ ದುಂಬಾಲು: ಫಿಲ್ಡ್ ಸಿಟಿ ಮಾಲೀಕನ ವಿರುದ್ಧ ಎಫ್‌ಐಆರ್

• ಉದಯವಾಹಿನಿ ಬೆಂಗಳೂರು

ಪ್ರೀತಿಸುವಂತೆ ವಸ್ತ್ರವಿನ್ಯಾಸಕಿಯನ್ನು ಪೀಡಿಸಿ. ಜೀವ ಬೆದರಿಕೆ ಹಾಕಿದ ಆರೋಪದ ಮೇಲೆ ತಮಿಳುನಾಡಿನ ಇವಿಪಿ ಫಿಲ್ಡ್ ಸಿಟಿ ಮಾಲೀಕನ ವಿರುದ್ಧ ವೈಯಾಲಿಕಾವಲ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಸದಾಶಿವನಗರ ನಿವಾಸಿ 42 ವರ್ಷದ ಸಂತ್ರಸ್ತೆ ದೂರಿನ ಮೇರೆಗೆ ಸಂತೋಷ್ ರೆಡ್ಡಿ ವಿರುದ್ಧ ಲೈಂಗಿಕ ಕಿರುಕುಳ, ಹಲ್ಲೆ, ಅಪರಾಧ ಸಂಚು, ಬೆದರಿಕೆ ಆರೋಪದಡಿ ಪ್ರಕರಣ ದಾಖಲಿಸಿಕೊಂಡು, ತನಿಖೆ ಕೈಗೊಂಡಿದ್ದಾರೆ. ದೂರುದಾರ ವಸ್ತ್ರ ವಿನ್ಯಾಸಕಿಯು ವಿವಾಹಿತರಾಗಿದ್ದು, ಹಲವು ವರ್ಷಗಳಿಂದ ಸದಾಶಿವನಗರದ ಸ್ಯಾಂಕಿ ಮುಖ್ಯರಸ್ತೆಯ ಅಪಾರ್ಟ್‌ಮೆಂಟ್‌ನಲ್ಲಿ ವಾಸವಾಗಿದ್ದಾರೆ. ಅವರ ಪತಿ ಉತ್ತರ ಭಾರತದಲ್ಲಿದ್ದಾರೆ. 2023ರಲ್ಲಿ ಸಂತೋಷ್ ರೆಡ್ಡಿಯ ಮಗಳು ಭಾವನ್ಯಾ ರೆಡ್ಡಿ ಅವರು ವಸ್ತ್ರ ವಿನ್ಯಾಸಕಿಯನ್ನು ಸಂಪರ್ಕಿಸಿ, ತಮ್ಮ ಸಂಬಂಧಿಕರ ಮದುವೆಗೆ ವಸ್ತ್ರ ವಿನ್ಯಾಸ ಮಾಡಿಕೊಡುವಂತೆ ಕೇಳಿದ್ದರು. ಅದರಂತೆ ವಸ್ತ್ರ ವಿನ್ಯಾಸ ಮಾಡಿಕೊಟ್ಟಿದ್ದರು ಎಂದು ಪೊಲೀಸರು ತಿಳಿಸಿದ್ದಾರೆ. ನಂತರ ಸಂತೋಷ್ ರೆಡ್ಡಿ ತಮ್ಮ ಮಗಳ ಮೂಲಕ ವಸ್ತ್ರ ವಿನ್ಯಾಸಕಿಯನ್ನು ಪರಿಚಯಿಸಿಕೊಂಡು, ಕಂಪನಿಯಲ್ಲಿ ಬಂಡವಾಳ ಹೂಡಿಕೆಗೆ ಆಸಕ್ತಿ ತೋರಿದ್ದರು. ಆದರೆ, ವಸ್ತ್ರ ವಿನ್ಯಾಸಕಿ ಮತ್ತು ಅವರ ಕುಟುಂಬ ಸದಸ್ಯರು ಅದಕ್ಕೆ ಒಪ್ಪಿರಲಿಲ್ಲ ಎಂದು ಹೇಳಿದರು. 'ಕೆಲ ತಿಂಗಳುಗಳ ಹಿಂದೆ ನನಗೆ ಕರೆ ಮಾಡಿದ್ದ ಸಂತೋಷ್ ರೆಡ್ಡಿ, ತಮ್ಮ ಮಗಳಿಗೆ ಮದುವೆ ಮಾಡಲು ನಿರ್ಧರಿಸಿರುವುದಾಗಿ ಹೇಳಿ ಒಳ್ಳೆಯ ವರ ನೋಡುವಂತೆ ಕೋರಿದ್ದರು. ಮತ್ತೆ ಕೆಲ ದಿನಗಳ ಬಳಿಕ ಕರೆ ಮಾಡಿ, ಮಗಳು ಹಣದೊಂದಿಗೆ ಮನೆ ಬಿಟ್ಟು ಹೋಗಿದ್ದಾಳೆ ಎಂದು ಅಲವತ್ತುಕೊಂಡಿದ್ದರು. ಆಗ ಅವರನ್ನು ಸಮಾಧಾನಪಡಿಸಿದ್ದೆ' ಎಂದು ವಸ್ತ್ರ ವಿನ್ಯಾಸಕಿ ಪೊಲೀಸರಿಗೆ ನೀಡಿರುವ ದೂರಿನಲ್ಲಿ ಉಲ್ಲೇಖಿಸಿದ್ದಾರೆ.

# ಸಾಹಿತ್ಯಾಸಕ್ತರಿಗಾಗಿ ಮತ್ತೆ ಬಂದಿದೆ ಕನ್ನಡ ಪುಸ್ತಕ ಹಬ್ಬ




ಉದಯವಾಹಿನಿ ಚಿತ್ರ

• ಉದಯವಾಹಿನಿ ಬೆಂಗಳೂರು

ಕನ್ನಡ ರಾಜ್ಯೋತ್ಸವ ಪ್ರಯುಕ್ತ ರಾಷ್ಟ್ರೋತ್ಥಾನ ಸಾಹಿತ್ಯ ಆಯೋಜಿಸುವ 5ನೇ ವರ್ಷದ ಕನ್ನಡ ಪುಸ್ತಕ ಹಬ್ಬದ ಕುರಿತು (ಅ.27) ರಾಷ್ಟ್ರೋತ್ಥಾನ ಪರಿಷತ್‌ನ ಕೇಶವ ಶಿಲ್ಪದಲ್ಲಿ ಪತ್ರಿಕಾಗೋಷ್ಠಿ ನಡೆದಿದೆ. ಒಟ್ಟು 37 ದಿನಗಳ ಕಾಲ ನಡೆಯುವ ಕನ್ನಡ ಪುಸ್ತಕ ಹಬ್ಬದ ಕುರಿತು ರಾಷ್ಟ್ರೋತ್ಥಾನ ಸಾಹಿತ್ಯದ ವಿಶ್ವಸ್ಥರಾದ ಕೆ.ಎಸ್. ನಾರಾಯಣ್ ವಿವರಣೆ ನೀಡಿದರು. ಕನ್ನಡ ಪುಸ್ತಕ ಹಬ್ಬದ 5ನೇ ಆವೃತ್ತಿ ನ 1 ರಿಂದ ಡಿ.7ರ ವರೆಗೆ ಕೇಶವಶಿಲ್ಪ ಸಭಾಂಗಣದಲ್ಲಿ ನಡೆಯಲಿದೆ. ನವೆಂಬರ್ 1 ಬೆಳಿಗ್ಗೆ 11 ಗಂಟೆಗೆ ಮೈಸೂರು ರಾಜವಂಶಸ್ಥರು, ಕೊಡಗು-ಮೈಸೂರು ಕ್ಷೇತ್ರದ ಸಂಸದರಾದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಪುಸ್ತಕ ಹಬ್ಬವನ್ನು ಉದ್ಘಾಟಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಭಾರತ ಸರಕಾರದ ಸಾಮರ್ಥ್ಯ ನಿರ್ಮಾಣ ಆಯೋಗದ ಮಾನವಸಂಪನ್ಮೂಲ ಸದಸ್ಯ, ಸ್ವಾಮಿ ವಿವೇಕಾನಂದ ಯೂಥ್ ಮೂವ್‌ಮೆಂಟ್ ಸ್ಥಾಪಕ ಡಾ. ಆರ್. ಬಾಲಸುಬ್ರಮಣ್ಯಂ ಮತ್ತು ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯದ ವಿಶ್ರಾಂತ ಕುಲಪತಿ ಪ್ರೊ. ಮಲ್ಲೇಪುರಂ ಜಿ. ವೆಂಕಟೇಶ ಭಾಗವಹಿಸಲಿದ್ದಾರೆ. ರಾಷ್ಟ್ರೋತ್ಥಾನ ಪರಿಷತ್ತಿನ ಅಧ್ಯಕ್ಷ ಎಂ. ಪಿ. ಕುಮಾರ್ ಅಧ್ಯಕ್ಷತೆಯಲ್ಲಿ ಕಾರ್ಯಕ್ರಮ ನಡೆಯಲಿದೆ ಎಂದು ಸುದ್ದಿಗೋಷ್ಠಿಯಲ್ಲಿ ಕೆ.ಎಸ್. ನಾರಾಯಣ ಅವರು ತಿಳಿಸಿದ್ದಾರೆ. ಕನ್ನಡ ಪುಸ್ತಕ ಹಬ್ಬ ಉದ್ಘಾಟನಾ ಕಾರ್ಯಕ್ರಮಕ್ಕೂ ಮುನ್ನ ಬೆಳಿಗ್ಗೆ 9.30ಕ್ಕೆ ಎನ್.ಆರ್ ಕಾಲೊನಿಯಲ್ಲಿರುವ ಗೋಖಲೆ ಸಾರ್ವಜನಿಕ ವಿಚಾರ ಸಂಸ್ಥೆಯ ಆವರಣದಿಂದ ರಾಷ್ಟ್ರೋತ್ಥಾನ ಪರಿಷತ್ತಿನವರೆಗೆ ತಾಯಿ ಭುವನೇಶ್ವರಿಯ ಭವ್ಯ ಶೋಭಾಯಾತ್ರೆ ನಡೆಯಲಿದೆ.

# ಅಂಧ ಯುವತಿ ಭವ್ಯಳ ಬಾಳ ಸಂಗಾತಿಯಾದ ಇಂಜನಿಯರ್ ಲೋಕೇಶ್

• ಉದಯವಾಹಿನಿ ಬೆಂಗಳೂರು


ಉದಯವಾಹಿನಿ ಚಿತ್ರ

ಶ್ರೀರಾಕುಂ ಅಂಧ ಮಕ್ಕಳ ಶಾಲೆಯಲ್ಲಿ ಸಂಸ್ಥಾಪನಾ ದಿನಾಚರಣೆ ಮತ್ತು ಹಳೆಯ ವಿದ್ಯಾರ್ಥಿನಿಯಾಗಿದ್ದ ಭವ್ಯರವರು ಇದೇ ಶಾಲೆಯಲ್ಲಿ ಸಂಪೂರ್ಣ ವ್ಯಾಸಂಗ ಮುಗಿಸಿ ಹೊಸಕೋಟೆಯಲ್ಲಿ ಸಿಟಿ ಮುನ್ಸಿಪಲ್ ಕೌನ್ಸಿಲ್ ನೌಕರಿ ಮಾಡುತ್ತಿದ್ದಾರೆ ಕುಮಾರಿ ಭವ್ಯಳಿಗೆ ಇಂಜನಿಯರ್ ಪದವೀಧರ ಖಾಸಗಿ ಸಂಸ್ಥೆಯಲ್ಲಿ ಕೆಲಸ ಮಾಡುತ್ತಿರುವ ಲೋಕೇಶ್ ಅವರು ಬಾಳಸಂಗಾತಿಯಾಗಿ ವಿವಾಹ ಸಂಭ್ರಮ ನೇರವೇರಿತು.

ಶ್ರೀ ರಾಕುಂ ಅಂಧ ಮಕ್ಕಳ ಶಾಲೆ ಸಂಸ್ಥಾಪಕ ಸ್ವಾಮಿ ರಾಕುಂಜೀ ಮಹಾರಾಜ್ ಅವರು, ಮಾಜಿ ಶಾಸಕಿ ಶ್ರೀಮತಿ ಪ್ರೇಮಿಳಾ ನೇಸರ್ಗಿರವರು, ವಿಧಾನಪರಿಷತ್ ಮಾಜಿ ಸದಸ್ಯರಾದ ಆರ್.ವಿ.ವೆಂಕಟೇಶ್ ಅವರು ನೂತನ ವಧು-ವರನಿಗೆ ಶುಭಕೋರಿದರು. ಇದೇ ಸಂದರ್ಭದಲ್ಲಿ ಸ್ವಾಮಿ ರಾಕುಂಜೀ ಮಹಾರಾಜ್ ಅವರು ಮಾತನಾಡಿ ವಿವಾಹವು ಸ್ವರ್ಗದಲ್ಲಿ ನಿಶ್ಚಯವಾಗುತ್ತದೆ ಎಂದು ಹಿಂದೂ ಪುರಾಣದಲ್ಲಿ ಉಲ್ಲೇಖವಿದೆ. ಗಂಡು, ಹೆಣ್ಣು ಜೀವನವನ್ನು ಅರ್ಥಮಾಡಿಕೊಂಡು ಜೀವನ ಸಾಗಿಸಬೇಕು. ಆಚಾರ್ಯ ಶ್ರೀ ರಾಕುಂ ಶಾಲೆಯಲ್ಲಿ ವಿದ್ಯಾಭ್ಯಾಸ ಮುಗಿಸಿದ 10ಕ್ಕೂ ಹೆಚ್ಚು ಯುವಕ, ಯುವತಿಯರಿಗೆ ಆಶ್ರಮದ ಸಂಪೂರ್ಣ ವೆಚ್ಚ ಭರಿಸಿ ವಿವಾಹ ನೇರವೇರಿಸಲಾಗಿದೆ. ಆಚಾರ್ಯ ಶ್ರೀ ರಾಕುಂ ವಧು-ವರ ಅನ್ವೇಷಣಾ ಕೇಂದ್ರ ಆರಂಭಿಸಲಾಗಿದೆ ಇಲ್ಲಿ ಉಚಿತವಾಗಿ ನೋಂದಾಣಿ ಮಾಡಿಕೊಳ್ಳಬಹುದು. ನಮ್ಮ ಆಶ್ರಮದ ಯುವಕ, ಯುವತಿಯರನ್ನ ಮದುವೆಯಾದರೆ ನಮ್ಮ ಆಶ್ರಮ ಆವರಣದಲ್ಲಿ ಮದುವೆ ಮಾಡಿಕೊಡಲಾಗುವುದು ಎಂದು ಹೇಳಿದರು.


# ಇನ್ನು ಮುಂದೆ ಗ್ರಾಮಗಳಲ್ಲಿಯೂ ಬಡಾವಣೆ ನಿರ್ಮಾಣ

## ನಮೂನೆ-1ರಲ್ಲಿ ಅರ್ಜಿಯನ್ನು ಅಗತ್ಯ ದಾಖಲೆಗಳೊಂದಿಗೆ ಗ್ರಾಮ ಪಂಚಾಯತಿಗೆ ಸಲ್ಲಿಸಬೇಕೆಂದು ಪ್ರಿಯಾಂಕ್ ಖರ್ಗೆ ಹೇಳಿಕೆ

• ಉದಯವಾಹಿನಿ ಬೆಂಗಳೂರು

ರಾಜ್ಯದ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಸ್ಥಳೀಯ ಯೋಜನಾ ಪ್ರದೇಶವನ್ನು ಹೊರತುಪಡಿಸಿದ ಪ್ರದೇಶಗಳಲ್ಲಿನ ಭೂಪರಿವರ್ತಿತ ಜಮೀನುಗಳಲ್ಲಿ ಬಡಾವಣೆಗಳ ವಿನ್ಯಾಸ ಅನುಮೋದನೆಗೆ ರಾಜ್ಯ ಸರ್ಕಾರ ಅನುಮತಿಸಿ ಆದೇಶಿಸಿದೆ. ಈ ಮೂಲಕ ಗ್ರಾಮೀಣ ಭಾಗದಲ್ಲಿಯೂ ಬಡಾವಣೆಗಳನ್ನು ನಿರ್ಮಿಸುವುದಕ್ಕೆ ಅವಕಾಶ ನೀಡಿದಂತೆ ಆಗಿದೆ.

ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಸ್ಥಳೀಯ ಯೋಜನಾ ಪ್ರದೇಶವನ್ನು ಹೊರತುಪಡಿಸಿದ ಪ್ರದೇಶಗಳಲ್ಲಿನ ಭೂಪರಿವರ್ತಿತ ಜಮೀನುಗಳಲ್ಲಿ ಬಡಾವಣೆಗಳ ವಿನ್ಯಾಸ ಅನುಮೋದನೆಯ ಕುರಿತು ವಹಿಸಬೇಕಾದ ಕ್ರಮಗಳ ಬಗ್ಗೆ ಗ್ರಾಮೀಣಾಭಿವೃದ್ಧಿ ಇಲಾಖೆ ಸುತ್ತೋಲೆಯ ಮೂಲಕ ಸ್ಪಷ್ಟ ನಿರ್ದೇಶನಗಳನ್ನು ನೀಡಿದ್ದು, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ತಿದ್ದುಪಡಿ) ಅಧಿನಿಯಮ, 2025 ರ ಪ್ರಕರಣ 199(ಬಿ) ರಲ್ಲಿ ಕಟ್ಟಡ ನಿರ್ಮಾಣ ಉದ್ದೇಶಗಳಿಗಾಗಿ ಇರುವ ಕಟ್ಟಡ ನಿವೇಶನಗಳಿಗಾಗಿ ಹೊಸ ಖಾತಾ ಅಥವಾ ಪಿ.ಐ.ಡಿಯನ್ನು ನೀಡಲು, ಗ್ರಾಮ ಪಂಚಾಯತಿ ಅಥವಾ ಸರ್ಕಾರವು ಅಧಿಸೂಚನೆಯ ಮೂಲಕ ಗೊತ್ತುಪಡಿಸಲಾದ ಪ್ರಾಧಿಕಾರಗಳು, ಅಧಿಕಾರ ವ್ಯಾಪ್ತಿಯ ಯೋಜನಾ ಪ್ರಾಧಿಕಾರದ ಮೂಲಕ ಬಡಾವಣೆ ನಕ್ಷೆಗಾಗಿ ಪೂರ್ವಾನುಮೋದನೆಯನ್ನು ಪಡೆದುಕೊಳ್ಳಬೇಕಾಗಿದೆ ಎಂದು ತಿಳಿಸಿರುವ ಸಚಿವರು ಅಭಿವೃದ್ಧಿದಾರರು ವಿನಿಯಮ 4(1) ರಲ್ಲಿ ತಿಳಿಸಿರುವಂತೆ ನಮೂನೆ-1 ರಲ್ಲಿ ಅರ್ಜಿಯನ್ನು ಅಗತ್ಯ ದಾಖಲೆಗಳೊಂದಿಗೆ ಗ್ರಾಮ ಪಂಚಾಯತಿಗೆ ಸಲ್ಲಿಸಬೇಕೆಂದು ಸಚಿವ ಪ್ರಿಯಾಂಕ್ ಖರ್ಗೆ ಹೇಳಿದ್ದಾರೆ. ವಿನ್ಯಾಸ ನಕ್ಷೆಯ ಪ್ರಕಾರ ಬಡಾವಣೆಯ ಮಾಲೀಕರು ಸಂಬಂಧಿಸಿದ ಗ್ರಾಮ ಪಂಚಾಯತಿಗೆ ವಿನ್ಯಾಸ ನಕ್ಷೆಯ ಪ್ರಕಾರ ರಸ್ತೆಗಳ ಅಗಲೀಕರಣಕ್ಕೆ ಮೀಸಲಿರಿಸಿದ ರಸ್ತೆಗಳು ಸೇರಿದಂತೆ ರಸ್ತೆಗಳು, ಪಾರ್ಕ್‌ಗಳು, ವಾಹನ ನಿಲ್ದಾಣಗಳು, ನಾಗರೀಕ ಸೌಲಭ್ಯದ ಪ್ರದೇಶಗಳು, ಸಾರ್ವಜನಿಕ ಬಳಕೆಯ ಪ್ರದೇಶಗಳು ಹಾಗೂ ಇತರೆ ಮೂಲಭೂತ ಸೌಕರ್ಯಗಳ ಪ್ರದೇಶಗಳನ್ನು ಉಚಿತವಾಗಿ ನೋಂದಾಯಿತ ಪರಿತ್ಯಾಜನ ಪತ್ರದ ಮುಖಾಂತರ ವರ್ಗಾಯಿಸಬೇಕಾಗುತ್ತದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಮಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.



**ಸ್ಥಳೀಯ ಯೋಜನಾ ಪ್ರದೇಶವನ್ನು ಹೊರತುಪಡಿಸಿದ ಪ್ರದೇಶದಲ್ಲಿ ಬರುವ ಗ್ರಾಮ ಪಂಚಾಯತಿಗಳು ತಮ್ಮ ವ್ಯಾಪ್ತಿಯಲ್ಲಿನ ಭೂಪರಿವರ್ತಿತ ಜಮೀನುಗಳಲ್ಲಿ ವಿನ್ಯಾಸ ಅನುಮೋದನೆ ಹಾಗೂ ಅಭಿವೃದ್ಧಿ ಕಾಮಗಾರಿಗಳನ್ನು ಮಾರ್ಗ ಸೂಚಿಗಳನ್ವಯ ಅನುಷ್ಠಾನಗೊಳಿಸಿರುವುದನ್ನು ಖಾತ್ರಿಪಡಿಸಿಕೊಂಡು ಬಡಾವಣೆಗಳಿಗೆ ಸಂಬಂಧಿಸಿದ ಎಲ್ಲಾ ಅಗತ್ಯ ದಾಖಲೆಗಳನ್ನು ನಿರ್ವಹಿಸಿ, ತೆರಿಗೆ ವ್ಯಾಪ್ತಿಗೆ ಒಳಪಡಿಸಲು ಅಗತ್ಯ ಕ್ರಮವಹಿಸಲು ತಿಳಿಸಲಾಗಿದೆ ಎಂದೂ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದ್ದಾರೆ.**

**ಬಡಾವಣೆಯ ಮಾಲೀಕರು, ನಿಯಮ-11 ರ ಪ್ರಕಾರ ಅನುಮೋದಿತ ಬಡಾವಣೆಯಲ್ಲಿನ ಅಭಿವೃದ್ಧಿ ಕಾರ್ಯಗಳನ್ನು ಪ್ರಸ್ತುತ ಜಾರಿಯಲ್ಲಿರುವ ನಿಯಮಗಳಂತೆ ಸಂಬಂಧಿಸಿದ ಇಲಾಖೆಗಳಾದ ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಎಸ್ಕಾಂ ಹಾಗೂ ಅವಶ್ಯಕ ಇತರೆ ಇಲಾಖೆಗಳಿಂದ ಅನುಮೋದಿತ ವಿನ್ಯಾಸದಂತೆ ದೃಢೀಕೃತ ಅಂದಾಜು ಪಟ್ಟಿಗಳನ್ವಯ ಅನುಷ್ಟಾನ ಮಾಡಬೇಕಾಗುತ್ತದೆ ಎಂದೂ ಸಚಿವರು ಮಾಹಿತಿ ನೀಡಿದ್ದಾರೆ.**

# ಗಾಂಧಿನಗರ ಕ್ಷೇತ್ರದಲ್ಲಿ 11,200 ನಕಲಿ ಮತದಾರರು

• ಉದಯವಾಹಿನಿ ಬೆಂಗಳೂರು



ಗಾಂಧಿನಗರ ಕ್ಷೇತ್ರದಲ್ಲಿ 11,200 ನಕಲಿ ಮತದಾರರಿದ್ದಾರೆ. ಮತಗಳ್ಳತನ ನಡೆಯದಿದ್ದರೆ ಬೆಂಗಳೂರು ಸೆಂಟ್ರಲ್ ಕ್ಷೇತ್ರಕ್ಕೆ ಕಾಂಗ್ರೆಸ್ ಸಂಸದರು ಆಯ್ಕೆ ಆಗುತ್ತಿದ್ದರು ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ತಿಳಿಸಿದ್ದಾರೆ.

ಗಾಂಧಿನಗರ ವಿಧಾನಸಭಾ ಕ್ಷೇತ್ರದ ಸನ್ ರೈಸ್ ಸರ್ಕಲ್‌ನಲ್ಲಿ ಮತಗಳ್ಳತನ ವೋಟ್ ಚೋರಿ ವಿರುದ್ಧ ನಡೆಯುತ್ತಿರುವ ಮತದಾರರ ಹಕ್ಕುಗಳಿಗಾಗಿ ಸಹಿ ಸಂಗ್ರಹ ಅಭಿಯಾನಕ್ಕೆ ಚಾಲನೆ ನೀಡಿ ಅವರು ಮಾತನಾಡಿದ ಅವರು, ನಕಲಿ ಮತದಾರರ ಪಟ್ಟಿಯನ್ನು ದಾಖಲೆ ಸಮೇತ ಚುನಾವಣಾ ಆಯೋಗಕ್ಕೆ ಸಲ್ಲಿಸಿದ್ದರೂ, ಇನ್ನು ಯಾವುದೇ ಕ್ರಮ ಆಗಿಲ್ಲ. ನಕಲಿ ಮತಗಳ ಅಳಿಸುವ ಪ್ರಕ್ರಿಯೆಗೆ ಚುನಾವಣಾ ಆಯೋಗ ಇನ್ನೂ ಮೀನಮೇಷ ಎಣಿಸುತ್ತಿರುವುದು ಏಕೆ ಎಂದು ಪ್ರಶ್ನಿಸಿದರು. ದೇಶದಲ್ಲಿ ಈಗಾಗಲೇ ಮತಗಳ್ಳತನ ವಿರುದ್ಧ ಲೋಕಸಭೆ ವಿಪಕ್ಷ ನಾಯಕ ರಾಹುಲ್ ಗಾಂಧಿಯವರು ಸವಿಸ್ತಾರವಾಗಿ ದೇಶದ ಜನತೆಗೆ ದಾಖಲೆಯ ಸಮೇತವಾಗಿ ನಿರೂಪಿಸಿದ್ದಾರೆ. ಇದು ಇಡೀ ದೇಶವೇ ಆತಂಕಪಡುವ ಸ್ಥಿತಿಯಲ್ಲಿದೆ.

ಸಾಂವಿಧಾನಿಕ ಪೀಠಗಳನ್ನು ಬಿಜೆಪಿ ತಮ್ಮ ಮತ ಬ್ಯಾಂಕ್ ಮಾಡಿಕೊಂಡಿರುವುದು ಖಂಡನೀಯ ಎಂದು ದಿನೇಶ್ ಗುಂಡೂರಾವ್ ಟೀಕಿಸಿದರು.

**ಸೆಂಟ್ರಲ್‌ನ ವೋಟ್ ಚೋರಿ ಡೇಟಾ ಸಲ್ಲಿಕೆ!**


ಕರ್ನಾಟಕ ರಾಜ್ಯದ ಮಹದೇವಪುರ ಕ್ಷೇತ್ರದಲ್ಲಿ ಸುಮಾರು 1 ಲಕ್ಷಕ್ಕೂ ಹೆಚ್ಚು ನಕಲಿ ಮತದಾರರನ್ನು ಸೃಷ್ಟಿಸಿ, ಅವರಿಂದ ಮತದಾನ ಪಡೆದುಕೊಂಡು ಅಧಿಕಾರಕ್ಕೆ ಬಂದ ಬಿಜೆಪಿ ಸರಕಾರಕ್ಕೆ ಜನರು ಪ್ರಶ್ನೆ ಮಾಡಬೇಕಾಗಿದೆ.

ಇದು ಸಂಪೂರ್ಣ ಪ್ರಜಾಪ್ರಭುತ್ವದ ಕಗ್ಗೊಲೆ. ಆಯೋಗವನ್ನು ತಮ್ಮ ಕೈಗೊಂಬೆಯಾಗಿಸಿಕೊಂಡು ಇಲ್ಲದೇ ಇರುವ ಮತದಾರರನ್ನು ಸೃಷ್ಟಿಸಿ, ಸಾಂವಿಧಾನಿಕ ಮೌಲ್ಯಗಳನ್ನು ಮೂಲೆಗುಂಪು ಮಾಡಿ ಮತಗಳ್ಳತನ ನಡೆಸಿ ಅಧಿಕಾರಕ್ಕೆ ಬಂದಿರುವುದು ಶೋಚನೀಯ. ನಾವು ನಡೆಸುತ್ತಿರುವ ಮತಗಳ್ಳತನ ವೋಟ್ ಚೋರಿ ವಿರುದ್ಧ ನಡೆಯುತ್ತಿರುವ ಮತದಾರರ ಹಕ್ಕುಗಳಿಗಾಗಿ ಸಹಿ ಸಂಗ್ರಹ ಅಭಿಯಾನ ಕಾರ್ಯಕ್ರಮವನ್ನು ಯಶಸ್ವಿಯಾಗಿ ನಡೆಸಿ ಕಣ್ಣಿಗೆ ಕಪ್ಪುಪಟ್ಟಿ ಕಟ್ಟಿಕೊಂಡು ನಿದ್ರೆ ಮಾಡುತ್ತಿರುವ ಅಧಿಕಾರಿಗಳನ್ನು ಎಚ್ಚರಿಸಬೇಕಾಗಿದೆ.

ದೇಶಾದ್ಯಂತ ಈ ಸಹಿ ಸಂಗ್ರಹ ನಡೆಯುತ್ತಿದ್ದು ಗಾಂಧಿನಗರ ಕ್ಷೇತ್ರದಿಂದಲೂ ಸುಮಾರು 1 ಲಕ್ಷಕ್ಕೂ ಅಧಿಕ ಸಹಿ ಸಂಗ್ರಹ ಮಾಡುವ ಗುರಿಯನ್ನು ಹೊಂದಿದೆ ಎಂದರು.

# ಲಂಚ ಬೇಕೆ ಲಂಚ ಘೋಷಣೆ ಕೂಗುವ ವಿನೂತನ ಪ್ರತಿಭಟನೆ

• ಉದಯವಾಹಿನಿ ಬೆಂಗಳೂರು



ಉದಯವಾಹಿನಿ ಚಿತ್ರ

ನೆಲದ ಕಾನೂನು ಧಿಕ್ಕರಿಸುತ್ತಿರುವ ಸಾಮರ್ ಇಂಟರ್ ನ್ಯಾಷನಲ್ ಸ್ಕೂಲ್ ವಿರುದ್ಧ ಕ್ರಮ ಕೈಗೊಳ್ಳದ ಅಲ್ಪಸಂಖ್ಯಾತ ಇಲಾಖೆ ಮತ್ತು ಶಾಲಾ ಶಿಕ್ಷಣ ಇಲಾಖೆಗಳ ಆಯುಕ್ತರ ಕಛೇರಿಗಳ ಮುಂಭಾಗ ನ್ಯಾಯಾಲಯದ ಆದೇಶ ಪಾಲಿಸಲು ನಿಮಗೆ ''ಲಂಚ ಬೇಕೆ ಲಂಚ'' ಎಂಬ ವಿನೂತನ ಪ್ರತಿಭಟನೆ ನಡೆಸಲು ಕನ್ನಡಪರ ಸಂಘಟನೆಗಳು ಮುಂದಾಗಿವೆ. ಅಲ್ಲದೇ ಶಾಲಾ ಆಡಳಿತ ಮಂಡಳಿಯನ್ನು ರಕ್ಷಿಸುತ್ತಿರುವ ಅಧಿಕಾರಿಗಳನ್ನು ಸನ್ಮಾನಿಸುವ ಚಳವಳಿಯನ್ನು ಸಹ ಹಮ್ಮಿಕೊಳ್ಳಲು ತೀರ್ಮಾನಿಸಿವೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಕರ್ನಾಟಕ ರಕ್ಷಣಾ ವೇದಿಕೆಯ ಮುಖಂಡ ಸೂರ್ಯ ಅಡಿಗ ಶ್ರೀನಿವಾಸ್ ಮಾತನಾಡಿ, ಹೈಕೋರ್ಟ್ ತೀರ್ಪನ್ನು ಜಾರಿಗೊಳಿಸಲು ನಿಮಗೆ ಲಂಚ ಬೇಕೆ ಲಂಚ ಎಂದು ಪ್ರಶ್ನಿಸುವ, ಅನಧಿಕೃತ ಶಾಲೆಯ ಬೆನ್ನೆಲುಬಾಗಿರುವ ಅಧಿಕಾರಿಗಳನ್ನು ಸನ್ಮಾನಿಸುವ ಹೋರಾಟಗಳನ್ನು ನ್ಯಾಯಾಲಯದ ಆದೇಶ ಪಾಲನೆಯಾಗುವ ತನಕ ಹಮ್ಮಿಕೊಳ್ಳುತ್ತೇವೆ ಎಂದರು.

ಈ ಆಡಳಿತ ಮಂಡಳಿಯ ವಸತಿ ಶಾಲೆಗೆ ಸರ್ಕಾರದ ಅನುಮತಿಯಿಲ್ಲ. ನಕಲಿ ದಾಖಲೆ ಸೃಷ್ಟಿಸಿ 5 ಲಕ್ಷ ರೂಪಾಯಿ ಪಡೆದಿರುವ ಶಾಲಾ ಮುಖ್ಯಸ್ಥ ಅರ್ಷದ್ ಮುಖ್ತಾರ್ ವಿರುದ್ಧ ಕ್ರಿಮಿನಲ್ ಮೊಕದ್ದಮೆ ದಾಖಲಿಸಬೇಕು.

ಅಲ್ಪಸಂಖ್ಯಾತ ಇಲಾಖೆಯಿಂದ ಮದರಸ ನಡೆಸಲು ಹಣ ಪಡೆದಿರುವ ಜಾಮಿಯ ಮೊಹಮ್ಮದಿಯ ಮನ್ಸೂರ, ಜಾಮಿಯ ಮೊಹಮ್ಮದಿಯ ಸೋಸೈಟಿ, ಆಲ್ ಜಾಮಿಯ ಮೊಹಮ್ಮದಿಯ ಎಜುಕೇಷನ್ ಸೊಸೈಟಿ ಸಂಸ್ಥೆಗಳು ದೇಶದ ಯಾವುದೇ ರಾಜ್ಯದಲ್ಲಿ ನೊಂದಣಿಯಾಗಿಲ್ಲ. ಹೀಗಿದ್ದರೂ 2017 ರಲ್ಲಿ ಅಲ್ಪಸಂಖ್ಯಾತ ಇಲಾಖೆ 10 ಲಕ್ಷ ಮಂಜೂರು ಮಾಡಿ, 5 ಲಕ್ಷ ರೂ ಬಿಡುಗಡೆ ಮಾಡಿತ್ತು.

**2017 ರಲ್ಲಿ ಅಲ್ಪಸಂಖ್ಯಾತ ಇಲಾಖೆ 10 ಲಕ್ಷ ಮಂಜೂರು**

ಇದನ್ನು ಪ್ರಶ್ನಿಸಿದಾಗ ಹೈಕೋರ್ಟ್ ಸೆಪ್ಟೆಂಬರ್ 24 ರಂದು ಕ್ರಮ ತೆಗೆದುಕೊಳ್ಳುವಂತೆ ನೀಡಿದ ಆದೇಶ ಪಾಲನೆಯಾಗುತ್ತಿಲ್ಲ. ಇದೇ ಮೇ 30 ರಂದು ಈ ಶಾಲೆಯ 1 ರಿಂದ 10 ನೇ ತರಗತಿ ವರೆಗಿನ ಮಾನ್ಯತೆಯನ್ನು ರದ್ದು ಮಾಡಲಾಗಿದೆ. ಇದನ್ನು ಆಡಳಿತ ಮಂಡಳಿ ಪ್ರಶ್ನಿಸಿ ಒಂದು ತಿಂಗಳುಗಳ ಕಾಲ ತಡೆಯಾಜ್ಞೆ ತಂದಿತ್ತು.

ಜುಲೈ 29 ರಂದು ನಾಲ್ಕು ತಿಂಗಳುಗಳ ಒಳಗೆ ಕ್ರಮ ಕೈಗೊಳ್ಳುವಂತೆ ಹೈಕೋರ್ಟ್ ನೀಡಿದ ಆದೇಶಕ್ಕೂ ಕಿಮ್ಮತ್ತು ನೀಡುತ್ತಿಲ್ಲ. ಆಡಳಿತ ವ್ಯವಸ್ಥೆಯ ದಿವ್ಯ ನಿರ್ಲಕ್ಷ್ಯ ಹಾಗೂ ಅನಧಿಕೃತ ಸಂಸ್ಥೆಗಳ ಪರವಾಗಿನ ಒಲವನ್ನು ಇದು ಎತ್ತಿ ತೋರಿಸುತ್ತಿದೆ ಎಂದರು.

# ಅಕ್ಟೋಬರ್ 31ರ ಒಳಗೆ ಧರ್ಮಸ್ಥಳ ಪ್ರಕರಣದ ತನಿಖೆ ಸಂಪೂರ್ಣ

• ಉದಯವಾಹಿನಿ ಬೆಂಗಳೂರು

ಧರ್ಮಸ್ಥಳ ಪ್ರಕರಣಕ್ಕೆ ಸಂಬಂಧಪಟ್ಟಂತೆ ಅ.31ರ ಒಳಗೆ ತನಿಖೆ ಪೂರ್ಣಗೊಳ್ಳಲಿದೆ. ಬೆಂಗಳೂರಿನಲ್ಲಿ ಈ ವಿಚಾರವಾಗಿ ಗೃಹ ಸಚಿವ ಜಿ ಪರಮೇಶ್ವರ್ ಮಹತ್ವದ ಸುಳಿವು ನೀಡಿದ್ದು, ಅಕ್ಟೋಬರ್ 31ರ ಒಳಗಾಗಿ ಎಸ್‌ಐಟಿ ಅಧಿಕಾರಿಗಳು ಧರ್ಮಸ್ಥಳ ಪ್ರಕರಣದ ಕುರಿತು ವರದಿ ಸಲ್ಲಿಸಲಿದ್ದಾರೆ ಎಂದು ತಿಳಿಸಿದರು.



ಧರ್ಮಸ್ಥಳ ವಿರುದ್ಧ ಷಡ್ಯಂತ್ರ ರೂಪಿಸಿದ ಆರೋಪಕ್ಕೆ ಸಂಬಂಧಪಟ್ಟಂತೆ ಅಕ್ಟೋಬರ್‌ನಲ್ಲಿ ಎಸ್‌ಐಟಿ ವರದಿ ನೀಡುವುದಾಗಿ ಹೇಳಿದೆ. ಅಕ್ಟೋಬರ್ 31ರ ಒಳಗೆ ತನಿಖಾ ವರದಿ ಕೊಡಬಹುದು. ಒಂದೆರಡು ದಿನ ಹಿಂದೆ ಮುಂದೆ ಆಗಬಹುದು ಅಷ್ಟೇ. ಎಲ್ಲವನ್ನು ಸೇರಿಸಿ ಕೊಡಲು ಹೇಳಿದ್ದೇವೆ. ಯಾವ ರೀತಿ ವರದಿ ಕೊಡುತ್ತಾರೆ ಎಂದು ನೋಡಬೇಕಿದೆ ಎಂದು ಜಿ ಪರಮೇಶ್ವರ್ ತಿಳಿಸಿದರು.

### ಇದುವರೆಗೂ ಏನಾಗಿದೆ

ಧರ್ಮಸ್ಥಳ ಗ್ರಾಮದಲ್ಲಿ ನೂರಾರು ಹೆಣಗಳನ್ನು ಹೂತು ಹಾಕಿದ್ದೇನೆ ಎಂದು ಸ್ವಚ್ಛತಾ ಕಾರ್ಮಿಕನಾಗಿದ್ದ ಚಿನ್ನಯ್ಯ ನೀಡಿದ ದೂರಿನ ಆಧಾರದಲ್ಲಿ ಧರ್ಮಸ್ಥಳ ಪೊಲೀಸ್ ಠಾಣೆಯಲ್ಲಿ ಜು.4ರಂದು ಪ್ರಕರಣ ದಾಖಲಾಗಿತ್ತು. ಈ ನಡುವೆ ದೂರುದಾರ ಬೆಳ್ತಂಗಡಿ ನ್ಯಾಯಾಲಯಕ್ಕೆ ಹಾಜರಾಗಿ ನ್ಯಾಯಾಧೀಶರ ಎದುರು ವಿವರವಾದ ಹೇಳಿಕೆಯನ್ನೂ ನೀಡಿದ್ದ. ದೂರುದಾರ ತಾನೇ ಹೂತಿಟ್ಟಿದ್ದ ತಲೆ ಬುರುಡೆ ಎಂದು ಹೇಳಿ ಅಸ್ಥಿಪಂಜರದ ಸಮೇತ ದೂರು ಕೊಟ್ಟಿದ್ದ.

**ಧರ್ಮಸ್ಥಳ ವಿರುದ್ಧ ಷಡ್ಯಂತ್ರ**

ಸರ್ಕಾರ ಈ ಪ್ರಕರಣದ ತನಿಖೆಯನ್ನು ಎಸ್‌ಐಟಿ ಹೆಗಲಿಗೆ ಹಾಕಿತ್ತು. ಚಿನ್ನಯ್ಯನ ಹೇಳಿಕೆ ಮೇಲೆ ಎಸ್‌ಐಟಿ ತಂಡ 13ಕ್ಕೂ ಹೆಚ್ಚು ಪಾಯಿಂಟ್‌ಗಳಲ್ಲಿ ಅಸ್ಥಿಪಂಜರದ ಅವಶೇಷಗಳಿಗೆ ಉತ್ಖನನ ನಡೆಸಿದೆ.

ಸಿಕ್ಕ ಅವಶೇಷಗಳನ್ನು ದೂರುದಾರರ ಪರ ವಕೀಲರು ಪಂಚರ ಸಮ್ಮುಖದಲ್ಲಿ ಪೊಲೀಸರು ಸ್ವಾಧೀನಕ್ಕೆ ಪಡೆದುಕೊಂಡು ವಿಧಿವಿಜ್ಞಾನ ತನಿಖೆಗೆ ಕಳಿಸಿದ್ದರು. ಈ ನಡುವೆ, ಶ್ರೀ ಕ್ಷೇತ್ರ ಧರ್ಮಸ್ಥಳ ಹಾಗೂ ಅದರ ಧರ್ಮಾಧಿಕಾರಿಗಳ ವಿರುದ್ಧ ನಡೆಸಲಾಗುತ್ತಿರುವ ವ್ಯವಸ್ಥಿತ ಷಡ್ಯಂತ್ರದ ಭಾಗವಾಗಿ ಮಹೇಶ್ ಶೆಟ್ಟಿ ತಿಮರೋಡಿ, ಗಿರೀಶ್ ಮಟ್ಟಣ್ಣನವರ್, ಟಿ ಜಯಂತ್ ಹಾಗೂ ಎಂಡಿ ಸಮೀರ್ ಮತ್ತಿತರರ ಚಲನವಲನ, ಚಟುವಟಿಕೆಗಳು, ಹಣಕಾಸಿನ ಮೂಲ ಮತ್ತು ಅವರ ಸಂಪರ್ಕ ಜಾಲಗಳ ಬಗ್ಗೆ ಸಮಗ್ರ ತನಿಖೆ ನಡೆಸಲು ನಿರ್ದೇಶನ ನೀಡುವಂತೆ ಕೋರಿ ಕರ್ನಾಟಕ ಹೈಕೋರ್ಟ್‌ಗೆ ಅರ್ಜಿ ಸಲ್ಲಿಕೆಯಾಗಿದ್ದು ನ್ಯಾಯಾಲಯ ಈ ಬಗ್ಗೆ ರಾಜ್ಯ ಸರಕಾರಕ್ಕೆ ಹಾಗೂ ತನಿಖಾ ಸಂಸ್ಥೆಗಳಿಗೆ ನೋಟೀಸ್ ಜಾರಿ ಮಾಡಿದೆ.

**ಈ ನಡುವೆ ಅನೇಕರ ವಿಚಾರಣೆ ನಡೆಸಿದ ಬಳಿಕ ದೂರುದಾರನನ್ನೇ ವಶಕ್ಕೆ ಪಡೆಯಲಾಗಿದ್ದು, ಇದೀಗ ದೂರುದಾರ ಚಿನ್ನಯ್ಯ ಶಿವಮೊಗ್ಗ ಜೈಲಿನಲ್ಲಿದ್ದಾನೆ. ದೂರುದಾರ ತೋರಿಸಿದ ಜಾಗದಲ್ಲಿ ಅನುಮಾನಾಸ್ಪದ ಅಸ್ಥಿಪಂಜರಗಳು ಸಿಗದ ಹಿನ್ನೆಲೆಯಲ್ಲಿ ಧರ್ಮಸ್ಥಳ ಕೇಸ್ ಹಿಂದೆ ಷಡ್ಯಂತ್ರ ಅಡಗಿದೆ ಎನ್ನುವ ಆರೋಪಗಳೂ ಕೇಳಿ ಬಂದಿವೆ. ಮೊದಲಿನ ಹೇಳಿಕೆಗೆ ವ್ಯತಿರಿಕ್ತವಾದ ಹೇಳಿಕೆಯನ್ನೂ ಚಿನ್ನಯ್ಯ ನೀಡಿದ್ದು, ಇದು ಧರ್ಮಸ್ಥಳ ಕ್ಷೇತ್ರದ ವಿರುದ್ಧದ ವ್ಯವಸ್ಥಿತ ಷಡ್ಯಂತ್ರ ಎಂದು ಆರೋಪಿಸಲಾಗಿದೆ.**

# ಹೈಕೋರ್ಟ್ ಸ್ಥಳಾಂತರ ಬೇಡಿಕೆ ಬಗ್ಗೆ ಪರಿಶೀಲನೆ

## ಕಬ್ಬನ್ ಉದ್ಯಾನವನದ ಉನ್ನತೀಕರಣಕ್ಕೆ ಹಣ ಬಿಡುಗಡೆ ಮಾಡುವಂತೆ ನಾಗರಿಕರು ಮನವಿ

• ಉದಯವಾಹಿನಿ ಬೆಂಗಳೂರು



ಉದಯವಾಹಿನಿ ಚಿತ್ರ

ಕಬ್ಬನ್ ಪಾರ್ಕ್ ಮತ್ತು ಲಾಲ್ ಬಾಗ್ ಕರ್ನಾಟಕ ಹಾಗೂ ದೇಶದ ಹೆಗ್ಗುರುತುಗಳು. ಕಬ್ಬನ್ ಪಾರ್ಕ್ ಅಭಿವೃದ್ಧಿಗೆ ಬಿಡಿಎಯಿಂದ 5 ಕೋಟಿ ರೂಪಾಯಿ ಅನುದಾನ ನೀಡಲಾಗುವುದು ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಹೇಳಿದರು.

ಕಬ್ಬನ್ ಪಾರ್ಕ್ ನಲ್ಲಿ ಬೆಂಗಳೂರು ನಡಿಗೆ ಕಾರ್ಯಕ್ರಮದ ಅಂಗವಾಗಿ ನಡೆದ ನಾಗರಿಕರ ಜತೆ ಸಂವಾದ ಕಾರ್ಯಕ್ರಮದಲ್ಲಿ ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಅಹವಾಲು ಸ್ವೀಕರಿಸಿ ಮಾತನಾಡಿದರು. ಕಬ್ಬನ್ ಉದ್ಯಾನವನದ ಉನ್ನತೀಕರಣಕ್ಕೆ ಹಣ ಬಿಡುಗಡೆ ಮಾಡುವಂತೆ ನಾಗರಿಕರು ಮನವಿ ಮಾಡಿದ್ದಾರೆ. ಅವರ ಮನವಿಯಂತೆ ಮಿಕ್ಕ ಅನುದಾನವನ್ನು ತೋಟಗಾರಿಕೆ ಇಲಾಖೆಯಿಂದ ನೀಡುವಂತೆ ವ್ಯವಸ್ಥೆ ಮಾಡಲಾಗುವುದು. ಈ ಉದ್ಯಾನದ ಆವರಣದಲ್ಲಿ ಯಾವುದೇ ರೀತಿಯ ನಿರ್ಮಾಣ ಕೆಲಸಗಳಿಗೆ ಸರ್ಕಾರ ಆಸ್ಪದ ನೀಡುವುದಿಲ್ಲ. ಇವುಗಳ ರಕ್ಷಣೆಗೆ ಏನು ಕೆಲಸ ಮಾಡಬೇಕು ಅದನ್ನು ಮಾಡುತ್ತೇವೆ ಎಂದರು.

ಉದ್ಯಾನದಲ್ಲಿ ಸರ್ಕಾರದ ವತಿಯಿಂದಲೇ ಒಂದಷ್ಟು ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ನಡೆಸುವ ಬಗ್ಗೆ ಆಲೋಚನೆ ಮಾಡಲಾಗುವುದು. ನಾನು ನೋಡಿದಂತೆ ಕಬ್ಬನ್ ಪಾರ್ಕ್ ಅನ್ನು ಅತ್ಯುತ್ತಮವಾಗಿ ನಿರ್ವಹಣೆ ಮಾಡಲಾಗಿದೆ. ನಾನು ಮದುವೆಯಾದ ಹೊಸತರಲ್ಲಿ ನನ್ನ ಹೆಂಡತಿಯನ್ನ ಕಬ್ಬನ್ ಪಾರ್ಕ್ ತೋರಿಸಲು ಕರೆದುಕೊಂಡು ಬಂದಿದ್ದೆ. ವಿದ್ಯಾರ್ಥಿ ನಾಯಕನಾಗಿದ್ದಾಗಲೂ ಇಲ್ಲಿಗೆ ಬಂದು ಸಮಯ ಕಳೆಯುತ್ತಿದ್ದೆವು ಎಂದರು.

**ಕಬ್ಬನ್ ಪಾರ್ಕ್ ಅಭಿವೃದ್ಧಿಗೆ 5 ಕೋಟಿ ರೂ ಅನುದಾನ**

ಅರಣ್ಯ ಇಲಾಖೆಯ ಜೊತೆ ಚರ್ಚೆ ಮಾಡಿ ನಗರದಾದ್ಯಂತ ಇರುವ ಅರಣ್ಯ ಇಲಾಖೆ ಜಾಗಗಳಲ್ಲಿ ಕಬ್ಬನ್ ಪಾರ್ಕ್ ಹಾಗೂ ಲಾಲ್ ಬಾಗ್ ಮಾದರಿಯಲ್ಲಿ ಉದ್ಯಾನಗಳ ಅಭಿವೃದ್ಧಿ ಮಾಡಿ, 'ಟ್ರೀ ಪಾರ್ಕ್' ಸ್ಥಾಪಿಸುವ ನಿರ್ಧಾರ ಮಾಡಲಾಗಿದೆ. ಇಲ್ಲಿ ಯಾವುದೇ ಮರಗಳನ್ನು ಕಡಿಯುವುದಿಲ್ಲ. ಇದರಿಂದ ಕಾಡಿನ ಸಂರಕ್ಷಣೆಯೂ ಆದಂತೆ ಆಗುತ್ತದೆ. ಲಾಲ್ ಬಾಗ್ ಅಭಿವೃದ್ಧಿಗೆ ಈಗಾಗಲೇ 10 ಕೋಟಿ ರೂಪಾಯಿ ಘೋಷಣೆ ಮಾಡಿದ್ದೇನೆ ಎಂದರು. ನ್ಯಾಯಮಿತ್ರ ಸಹಕಾರಿ ಬ್ಯಾಂಕ್ ಕಾರ್ಯಕ್ರಮಕ್ಕೆ ಹೋದ ಸಂದರ್ಭದಲ್ಲಿ ಹೈಕೋರ್ಟ್ ಸ್ಥಳಾಂತರಕ್ಕೆ 15 – 20 ಎಕರೆ ಜಾಗ ನೀಡಿ ಎಂದು ವಕೀಲರು, ಮುಖ್ಯ ನ್ಯಾಯಮೂರ್ತಿಗಳು ಮನವಿ ಮಾಡಿದ್ದರು. ಸರ್ಕಾರದ ಮುಂದೆಯೂ ಇದರ ಬಗ್ಗೆ ಚರ್ಚೆ ನಡೆಸಲಾಗುವುದು. ನ್ಯಾಯಾಲಯದವರನ್ನೂ ವಿಶ್ವಾಸಕ್ಕೆ ತೆಗೆದುಕೊಂಡು ಹತ್ತಿರದಲ್ಲಿ ಎಲ್ಲಿ ಸ್ಥಳಾವಕಾಶ ದೊರೆಯಬಹುದು ಎಂದು ಪರಿಶೀಲನೆ ಮಾಡಲಾಗುವುದು. ಹಳೆಯ ಐತಿಹಾಸಿಕ ಕಟ್ಟಡವಾದ ಕಾರಣಕ್ಕೆ ಅದನ್ನು ಏನೂ ಮಾಡಲು ಸಾಧ್ಯವಿಲ್ಲ. ಆದರೆ ಸ್ಥಳವಾಕಾಶ ಚಿಕ್ಕದಿದೆ ಎಂದರು. ಈ ಮೊದಲು ಎಲ್ಲಾ ಹೋರಾಟಗಳು, ಪ್ರತಿಭಟನೆಗಳು ಕಬ್ಬನ್ ಪಾರ್ಕ್ ಅಲ್ಲಿಯೇ ನಡೆಯುತ್ತಿತ್ತು. ಎಸ್.ಎಂ.ಕೃಷ್ಣ ಅವರ ಕಾಲದಲ್ಲಿ ಇದನ್ನು ಸ್ವಾತಂತ್ರ್ಯ ಉದ್ಯಾನಕ್ಕೆ ಸ್ಥಳಾಂತರ ಮಾಡಲಾಯಿತು. ನಗರದ ಶ್ವಾಸಕೋಶದಂತೆ ಇರುವ ಈ ಉದ್ಯಾನ ಉಳಿಸಿಕೊಳ್ಳಲು ಏನು ಮಾಡಬೇಕೊ ಅದನ್ನು ನಾನು ಮಾಡುತ್ತೇನೆ. ಎಷ್ಟು ಗಂಟೆಗೆ ಯಾರು ಒಳ ಬಂದರು ಹೊರ ಹೋದರು ಎಂಬುದನ್ನು ದಾಖಲು ಮಾಡಲು ಕಬ್ಬನ್ ಪಾರ್ಕ್ ನಲ್ಲಿ ಹೈಟೆಕ್ ಕ್ಯಾಮೆರಾ ಗಳನ್ನು ಅಳವಡಿಕೆ ಮಾಡಬೇಕು. ಆಯುಕ್ತರ ಕಚೇರಿಯಲ್ಲಿಯೂ ಸಹ ಇದರ ವೀಕ್ಷಣೆಗೆ ವ್ಯವಸ್ಥೆ ಕಲ್ಪಿಸಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದ್ದೇನೆ ಎಂದರು.

**ಹೈಕೋರ್ಟ್ ಅನ್ನು ನಗರದ ಹೊರಗೆ ಸ್ಥಾಪಿಸಲು ಸಾಧ್ಯವಿಲ್ಲ. ಅದಕ್ಕೆ ಸೂಕ್ತ ಸ್ಥಳಗಳನ್ನು ಗುರುತಿಸುವ ಕೆಲಸ ನಡೆಯುತ್ತಿದೆ. ಕಕ್ಷಿದಾರರು, ಲಾಯರ್‌ಗಳಿಗೆ ಅನುಕೂಲವಾಗುವಂತಹ ಸ್ಥಳ ನೋಡಬೇಕಿದೆ. ಒಂದಷ್ಟು ಜನ ವಕೀಲರು ಭೇಟಿ ಮಾಡಿ ರೇಸ್ ಕೋರ್ಸ್ ಜಾಗ ಬಳಸಿಕೊಳ್ಳುವ ಬಗ್ಗೆ ತಿಳಿಸಿದರು. ಒಂದಷ್ಟು ಕಾನೂನಾತ್ಮಕ ತೊಡಕುಗಳು ಇರುವ ಕಾರಣಕ್ಕೆ ಆನಂತರ ಅದರ ಬಗ್ಗೆ ಆಲೋಚನೆ ಮಾಡೋಣ ಎಂದು ತಿಳಿಸಿದ್ದೇನೆ ಎಂದರು.**

# ಕಾಂಗ್ರೇಸ್ ಪಕ್ಷದಿಂದ ವೋಟ್ ಚೋರ್ ಗದ್ದಿ ಚೋಡ್ ಪ್ರತಿಭಟನೆ

## ಬಿಜೆಪಿ ವೋಟ್ ಚೋರ್ ವಿರುದ್ಧ ಸಚಿವ ಡಾ.ಎಂಸಿ ಸುಧಾಕರ್, ಎಐಸಿಸಿ ಪ್ರ ಕಾರ್ಯದರ್ಶಿ ಅಭಿಷೇಕ್ ದತ್ ಆಕ್ರೋಶ

• ಉದಯವಾಹಿನಿ ಚಿಂತಾಮಣಿ

ಚಿಂತಾಮಣಿ ನಗರದಲ್ಲಿರುವ ಎಂ.ಸಿ ಆಂಜನೇಯರೆಡ್ಡಿ ಕಲ್ಯಾಣ ಮಂಟಪದಲ್ಲಿ ಚಿಂತಾಮಣಿ ವಿಧಾನಸಭಾ ಕ್ಷೇತ್ರ ಕಾಂಗ್ರೇಸ್ ಸಮಿತಿಯ ವತಿಯಿಂದ ''ವೋಟ್ ಚೋರ್ ಗದ್ದಿ ಚೋಡ್'' ಎಂಬ ಘೋಷಣೆಯಡಿ ಬಿಜೆಪಿ ಪಕ್ಷದ ಕರಾಳ ನಡೆ, ಸಂವಿ ಧಾನ ವಿರೋಧಿ ಮತಗಳ್ಳತನದ ವಿರುದ್ಧ ಭಾರೀ ಪ್ರತಿಭಟನೆ ಹಾಗೂ ಸಹಿ ಸಂಗ್ರಹಣಾ ಅಭಿಯಾನವು ನಡೆಯಿತು.

ಈ ಕಾರ್ಯಕ್ರಮದಲ್ಲಿ ಎಐಸಿಸಿ ಪ್ರಧಾನ ಕಾರ್ಯದರ್ಶಿ ಅಭಿಷೇಕ್ ದತ್ ಹಾಗೂ ಉನ್ನತ ಶಿಕ್ಷಣ ಸಚಿವ ಡಾ. ಎಂ.ಸಿ. ಸುಧಾಕರ್ ರವರು ಭಾಗವಹಿಸಿ, ಸಂವಿಧಾನ ವಿರೋಧಿ ಕ್ರಮಗಳನ್ನು ಖಂಡಿಸಿ ಸಹಿ ಮಾಡಿ ತಮ್ಮ ಆಕ್ರೋಶವನ್ನು ವ್ಯಕ್ತಪಡಿಸಿದರು.

ಕಾರ್ಯಕ್ರಮವನ್ನುದ್ದೇಶಿಸಿ ಅಭಿಷೇಕ್ ದತ್ ಮಾತನಾಡಿ, ಜನತೆಯ ವಿಶ್ವಾಸದ ಮತವನ್ನು ಕದ್ದುಕೊಂಡು ಅಧಿಕಾರಕ್ಕೆ ಬರುವ ಬಿಜೆಪಿ ಪಕ್ಷವು


ಉದಯವಾಹಿನಿ ಚಿತ್ರ

ಪ್ರಜಾಪ್ರಭುತ್ವದ ಆತ್ಮವನ್ನೇ ಹಾಳು ಮಾಡುತ್ತಿದೆ. ಮತದ ಮೌಲ್ಯವನ್ನು ಉಳಿಸುವ ಹೋರಾಟದಲ್ಲಿ ಜನತೆ ಕಾಂಗ್ರೇಸ್‌ನೊಂದಿಗೆ ನಿಲ್ಲಬೇಕು ಎಂದು ಅವರು ರಾಜ್ಯದಲ್ಲಿ ಕಾಂಗ್ರೇಸ್ ಪಕ್ಷ ಆಧಿಕಾರಕ್ಕೆ ಬಂದ ಮೇಲೆ ಐದು ಗ್ಯಾರಂಟಿ ಯೋಜನೆ ಗಳಾದ ಉಚಿತ ಸಾರಿಗೆ, ಗೃಹಲಕ್ಷ್ಮೀ, ಗೃಹಜ್ಯೋತಿ, ಯುವನಿಧಿ, ಅನ್ನಭಾಗ್ಯ ಯೋಜನೆ ಗಳು 1 ಕೋಟಿಗೂ ಹೆಚ್ಚಿನ ಸಂಖ್ಯೆಗೆ ಜನರಿಗೆ ಸಮರ್ಪಕವಾಗಿ ತಲುಪುತ್ತಿದ್ದು, ಲೋಕಸಭೆ ಚುನಾವಣೆಯಲ್ಲಿ ಬಿಜೆಪಿ ಪಕ್ಷದವರು ಮಹದೇವಪುರ ವಿಧಾನಸಭಾ ಕ್ಷೇತ್ರದಲ್ಲಿ ಮತಗಳ್ಳತನ ನಡೆದಿರುವುದು ಇಡೀ ದೇಶವೇ ನೋಡಿದೆ ಎಂದರು.

ಈ ಸಂದರ್ಭದಲ್ಲಿ ಕೆಪಿಸಿಸಿ ಉಸ್ತುವಾರಿ ಕೃಷ್ಣಂರಾಜು, ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಉದಯ ಶಂಕರ್, ಲೋಕಸಭಾ ಚುನಾವಣೆಯ ಕಾಂಗ್ರೇಸ್ ಪಕ್ಷದ ಅಭ್ಯರ್ಥಿ ಗೌತಮ್, ಕಾಂಗ್ರೇಸ್ ಪಕ್ಷದ ಜಿಲ್ಲಾಧ್ಯಕ್ಷ ಕೇಶವರೆಡ್ಡಿ, ಚಿಂತಾಮಣಿ ತಾಲ್ಲೂಕು ಕಾಂಗ್ರೇಸ್ ಅಧ್ಯಕ್ಷ ಮುರುಗಮಲ್ಲ ಲಕ್ಷ್ಮೀ ನಾರಾಯಣರೆಡ್ಡಿ, ಕಾಂಗ್ರೇಸ್ ಪಕ್ಷದ ರಾಜ್ಯ ಮುಖಂಡರಾದ ಪುಟ್ಟು ಆಂಜಿನಪ್ಪ, ಎಸ್ಸಿ ಘಟಕದ ಜಿಲ್ಲಾಧ್ಯಕ್ಷ ಚಿನ್ನಸಂದ್ರ ನಾರಾಯಣಸ್ವಾಮಿ, ಕಾರ್ಮಿಕ ವಿಭಾಗದ ಜಿಲ್ಲಾಧ್ಯಕ್ಷ ಕೋನಪಲ್ಲಿ ಕೊದಂಡ, ಜಿಲ್ಲಾ ಯುವ ಕಾಂಗ್ರೇಸ್ ಅಧ್ಯಕ್ಷ ಕುಬೇರ ಅಚ್ಚು, ಗ್ರಾಮಾಂತರ ಯುವ ಕಾಂಗ್ರೇಸ್ ಅಧ್ಯಕ್ಷ ಕಲ್ಯಾಣ್ ರೆಡ್ಡಿ, ನಗರ ಅಧ್ಯಕ್ಷ ಸಾಯಿನಾಥ್, ನಗರಸಭೆ ಅಧ್ಯಕ್ಷ ಜಗನ್ನಾಥ್, ಉಪಾಧ್ಯಕ್ಷೆ ರಾಣಿಯಮ್ಮ ಸೇರಿದಂತೆ ಎಲ್ಲಾ ನಗರಸಭಾ ಸದಸ್ಯರು, ತಾಲ್ಲೂಕು ಮಟ್ಟದ ಕಾಂಗ್ರೇಸ್ ನಾಯಕರು, ಕಾರ್ಯಕರ್ತರು, ಮಹಿಳಾ ಘಟಕದ ಸದಸ್ಯರು, ಯುವ ಕಾಂಗ್ರೇಸ್ ಕಾರ್ಯಕರ್ತರು ಭಾಗವಹಿಸಿ ಮತ್ತಿತರರು ಉಪಸ್ಥಿತರಿದ್ದರು.

> ಸಂವಿಧಾನ ಸಂರಕ್ಷಣೆ ನಮ್ಮೆಲ್ಲರ ಕರ್ತವ್ಯ. ಜನರ ಹಕ್ಕು, ಜನರ ತೀರ್ಮಾನವನ್ನು ಕದಿಯುವ ಪ್ರಯತ್ನಗಳಿಗೆ ಕಾಂಗ್ರೇಸ್ ತೀವ್ರವಾಗಿ ಖಂಡಿಸುತ್ತದೆ, ಮತಗಳ್ಳತನ ಮಾಡಿ ಲೋಕಸಭೆ ಚುನಾವಣೆಯಲ್ಲಿ ಬಿಜೆಪಿ ಪಕ್ಷದವರು ವಾಮಾ ಮಾರ್ಗದ ಮೂಲಕ ಆಧಿಕಾರಕ್ಕೆ ಬಂದಿದ್ದಾರೆ. ಚುನಾವಣೆಯ ಸಮರ್ಪಕವಾಗಿ ನಡೆದಿದ್ದರೆ, ದೇಶದಲ್ಲಿ ಇಂದು ಕಾಂಗ್ರೇಸ್ ಪಕ್ಷ ಅಧಿಕಾರದಲ್ಲಿದ್ದು, ರಾಹುಲ್ ಗಾಂಧಿರವರ ದೇಶದ ಪ್ರಧಾನಿಯಾಗಿರುತ್ತಿದ್ದರೆಂದ ಅವರು ಚಿಂತಾಮಣಿ ವಿಧಾನಸಭಾ ಕ್ಷೇತ್ರದಲ್ಲಿ ಸಾವಿರಾರು ಕೋಟಿ ಅನುದಾನವನ್ನು ತಂದು ಅಭಿವೃದ್ಧಿ ಮಾಡಲಾಗುತ್ತಿದ್ದು, ನಮ್ಮ ವಿರೋಧ ಪಕ್ಷದವರು ಏನು ಅಭಿವೃದ್ಧಿಯಾಗುತ್ತಿಲ್ಲವೆಂದು ಅಪಪ್ರಚಾರ ಮಾಡುತ್ತಿದ್ದಾರೆ, ಇಂತಹ ಆಪಪ್ರಚಾರಗಳಿಗೆಲ್ಲಾ ನಮ್ಮ ಕಾರ್ಯಕರ್ತರು ದಾಖಲೆ ಸಮೇತ ತಕ್ಕ ಉತ್ತರಗಳನ್ನು ಕೊಡಬೇಕೆಂದು ಕಾರ್ಯಕರ್ತರಿಗೆ ಕರೆ ನೀಡಿದರು.
>
> – ಸಚಿವ ಡಾ. ಎಂ.ಸಿ. ಸುಧಾಕರ್

# ಗಗನ ಕುಸುಮವಾದ ಜಿಲ್ಲಾ ಗ್ಯಾಸೆಟಿಯರ್ ರಚನೆ!

• ಉದಯವಾಹಿನಿ ಚಿಕ್ಕಬಳ್ಳಾಪುರ

ಜಿಲ್ಲಾ ಗ್ಯಾಸೆಟಿಯರ್ ರಚನೆಯ ಪ್ರಕ್ರಿಯೆಗಳಿಗೆ ಚಾಲನೆ ದೊರೆತು ನಾಲ್ಕೂ ಮುಕ್ಕಾಲು ವರ್ಷಗಳಾಗಿವೆ. ಇನ್ನೇನು ಅರ್ಧ ದಶಕ ಸಮೀಪಿಸುತ್ತಿದೆ. ಆದರೂ ಪ್ರಕ್ರಿಯೆಗಳು ಆಮೆಗತಿಯಲ್ಲಿವೆ ಅವಿಭಜಿತ ಕೋಲಾರ ಜಿಲ್ಲೆಯಿಂದ ಬೇರ್ಪಟ್ಟು ಚಿಕ್ಕಬಳ್ಳಾಪುರವು ಜಿಲ್ಲೆಯಾಗಿ ಅಸ್ತಿತ್ವ ಪಡೆದು 18 ವರ್ಷಗಳು ಕಳೆದಿವೆ.


ಉದಯವಾಹಿನಿ ಚಿತ್ರ

ಆದರೆ ಈವರೆಗೂ ಜಿಲ್ಲೆಗೆ ಪ್ರತ್ಯೇಕ ಗ್ಯಾಸೆಟಿಯರ್ ಹೊಂದುವ 'ಭಾಗ್ಯ' ಚಿಕ್ಕಬಳ್ಳಾಪುರಕ್ಕೆ ದೊರೆತಿಲ್ಲ.

2021ರ ಫೆಬ್ರುವರಿಯಲ್ಲಿ ಜಿಲ್ಲಾ ಗ್ಯಾಸೆಟಿಯರ್ ರಚನೆಗೆ ಚಾಲನೆ ದೊರೆತಿತ್ತು. ಹೀಗೆ ಚಾಲನೆ ದೊರೆತು ನಾಲ್ಕೂ ಮುಕ್ಕಾಲು ವರ್ಷ ದಾಟಿದರೂ ಪ್ರಕ್ರಿಯೆಗಳು ಪ್ರಗತಿ ಕಂಡಿಲ್ಲ. ಆರಂಭದಲ್ಲಿ ಹೇಗಿತ್ತೋ ಅದೇ ಸ್ಥಿತಿಯಲ್ಲಿದೆ. ಬೆಂಗಳೂರಿನ ಕಾವೇರಿ ಭವನದಲ್ಲಿ ಒಂದು ಸಭೆ ಮತ್ತು ಚಿಕ್ಕಬಳ್ಳಾಪುರ ಜಿಲ್ಲಾಧಿಕಾರಿ ಕಚೇರಿಯಲ್ಲಿ ಗ್ಯಾಸೆಟಿಯರ್ ಸಂಬಂಧಿಸಿದಂತೆ ಕಾರ್ಯಾಗಾರ ನಡೆದಿತ್ತು. ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷರೂ ಆದ ಶಿಕ್ಷಣ ತಜ್ಞ ಕೋಡಿ ರಂಗಪ್ಪ, ಲೇಖಕ ರಂಗಾರೆಡ್ಡಿ ಕೋಡಿರಾಂಪುರ, ಚಿಂತಾಮಣಿ ಸರ್ಕಾರಿ ಮಹಿಳಾ ಪದವಿ ಮತ್ತು ಸ್ನಾತಕೋತ್ತರ ಕಾಲೇಜಿನ ಇತಿಹಾಸ ವಿಭಾಗದ ಮುಖ್ಯ ಎಂ.ಎನ್. ರಘು ಹೀಗೆ ವಿವಿಧ ಕ್ಷೇತ್ರಗಳ ವಿಷಯ ಪರಿಣತರಿಗೆ ರಚನೆಯ ಜವಾಬ್ದಾರಿ ವಹಿಸಲಾಗಿತ್ತು. ಈ ಕಾರ್ಯಕ್ಕಾಗಿ ಇಲಾಖೆಯು 20 ಲೇಖಕರನ್ನು ನಿಯೋಜಿಸಿತ್ತು. ಈ ಲೇಖಕರಿಗಾಗಿಯೇ ಇಲಾಖೆಯು 2021ರ ಫೆಬ್ರುವರಿಯಲ್ಲಿ ಜಿಲ್ಲಾ ಕೇಂದ್ರದಲ್ಲಿ ಸಂಪನ್ಮೂಲ ವ್ಯಕ್ತಿಗಳಿಂದ ತರಬೇತಿ ಕಾರ್ಯಾಗಾರ ನಡೆಸಿತ್ತು. ಜಿಲ್ಲಾ ಗ್ಯಾಸೆಟಿಯರ್ ಒಟ್ಟು 17 ಅಧ್ಯಾಯಗಳನ್ನು ಒಳಗೊಂಡಿರುತ್ತದೆ.

ಇದು ಎರಡು–ಮೂರು ಶತಮಾನಗಳಿಗೂ ಹೆಚ್ಚು ಕಾಲ ದಾಖಲೆಯಾಗಿ ಇರಲಿದೆ. ಹಾಗಾಗಿ ಜಿಲ್ಲೆಯ ಇಲಾಖೆಗಳ ಅಧಿಕಾರಿಗಳು ಸಕಾಲಕ್ಕೆ ನಮಗೆ ಪೂರಕ ಮಾಹಿತಿಯನ್ನು ಒದಗಿಸಿದಲ್ಲಿ ಶೀಘ್ರದಲ್ಲೇ ಜಿಲ್ಲಾ ಗ್ಯಾಸೆಟಿಯರ್ ಪೂರ್ಣಗೊಳ್ಳಲಿದೆ ಎಂದು ಕಾರ್ಯಾಗಾರದಲ್ಲಿ ಹೆಚ್ಚುವರಿ ಜಿಲ್ಲಾಧಿಕಾರಿ ತಿಳಿಸಿದ್ದರು.

# ಬಂಡೀಪುರ ಸಫಾರಿ ಕಚೇರಿ ಸುತ್ತ ಮದ್ಯದ ಬಾಟಲಿಗಳ ರಾಶಿ

• ಉದಯವಾಹಿನಿ ಗುಂಡ್ಲುಪೇಟೆ


ಉದಯವಾಹಿನಿ ಚಿತ್ರ

**ಅಧಿಕಾರಿಗಳ ವಿರುದ್ಧ ಆಕ್ರೋಶ**

ಪ್ರತಿಷ್ಠಿತ ಹುಲಿ ರಕ್ಷಿತಾರಣ್ಯ ಬಂಡೀಪುರದಲ್ಲಿ ನೂತನವಾಗಿ ಆರಂಭಿಸಲಾದ ಸಫಾರಿ ಕಛೇರಿ ಸೇರಿದಂತೆ ಕ್ಷೇತ್ರ ನಿರ್ದೇಶಕರ ಕಚೇರಿ ಸುತ್ತಲಿನ ಆವರಣದಲ್ಲಿ ಮದ್ಯದ ಬಾಟಲಿಗಳು ರಾಶಿರಾಶಿಯಾಗಿ ಬಿದ್ದಿರುವುದನ್ನ ಗಮನಿಸಿದ ಸಾಮೂಹಿಕ ನಾಯಕತ್ವ ರೈತ ಸಂಘದ ಸದಸ್ಯರು ಅಧಿಕಾರಿಗಳ ವಿರುದ್ಧ ಕೆಂಡಾಮಂಡಲರಾದ ಘಟನೆ ನಡೆಯಿತು.

ಅರಣ್ಯ ಸಚಿವ ಈಶ್ವರ್ ಖಂಡ್ರೆ ಅವರನ್ನ ಭೇಟಿಯಾಗಿ ಮಾನವ ಮತ್ತು ವನ್ಯಜೀವಿ ಸಂಘರ್ಷದ ಬಗ್ಗೆ ಮನದಟ್ಟು ಮಾಡಲು ಮೇಲುಕಾಮನಹಳ್ಳಿ ಬಳಿಯ ಸಫಾರಿ ಕೌಂಟರ್ ಬಳಿ ಸೇರಿದ್ದ ರೈತ ಸಂಘ ಸದಸ್ಯರು ಸಿಎಫ್ , ಎಸಿಎಫ್ ಕಚೇರಿ ಸುತ್ತಲೂ ರಾಶಿ ರಾಶಿ ಮದ್ಯದ ಬಾಟಲಿಗಳು ಬಿದ್ದಿರುವುದನ್ನ ಗಮನಿಸಿ ಇದೇನು ಸರ್ಕಾರಿ ಕಚೇರಿಯೋ ಅಥವಾ ಅಧಿಕಾರಿಗಳ ಸ್ವ ವಿಲಾಸಿ ತಾಣವೋ ಎಂದು ಪ್ರಶ್ನಿಸಿ ಆಡಳಿತದ ವಿರುದ್ಧ ದಿಕ್ಕಾರದ ಘೋಷಣೆಗಳನ್ನ ಕೂಗಿದರು.

**ಜನಸಾಮಾನ್ಯರಿಗೊಂದು ನ್ಯಾಯವೇ:** ಗೋಪಾಲಸ್ವಾಮಿ ಬೆಟ್ಟ ಪ್ರವೇಶಿಸುವ ಹೆಬ್ಬಾಗಿಲಿನಲ್ಲೇ ಪ್ಲಾಸ್ಟಿಕ್ ಕವರ್ ಇನ್ನಿತರ ವಸ್ತುಗಳನ್ನ ನಿಷಿದ್ಧಗೊಳಿಸಲಾಗಿದೆ ನೆಪದಲ್ಲಿ ಸ್ಥಳೀಯರಿಗೆ ಬೋಧನೆ ಮಾಡುವ ಅರಣ್ಯ ಇಲಾಖೆ ಅಧಿಕಾರಿಗಳಿಗೆ ತಮ್ಮ ಕಚೇರಿಯ ಸುತ್ತಲೂ ಮದ್ಯದ ಬಾಟಲಿ ಕುರಿತು ಮಾಹಿತಿಯಿಲ್ಲವೇ ಎಂದು ಮುಖಂಡ ಹೊನ್ನೂರು ಪ್ರಕಾಶ್ ಪ್ರಶ್ನಿಸಿದ್ದಾರೆ. ಅಧಿಕಾರಿಗಳು ಹಣವುಳ್ಳವರಿಗೊಂದು ನ್ಯಾಯ ಜನಸಾಮಾನ್ಯರಿಗೊಂದು ನ್ಯಾವವೆಂಬ ರೀತಿಯಲ್ಲಿ ವರ್ತಿಸುತ್ತಿರುವುದು ಖಂಡನೀಯ ನಡೆಯಾಗಿದೆ ಎಂದು ಆಕ್ರೋಶ ಹೊರಹಾಕಿದರು.

> ಅರಣ್ಯ ಸಂರಕ್ಷಣೆ ಮಾಡಬೇಕಿರುವ ಅಧಿಕಾರಿಗಳು ಪ್ರಭಾವಿಗಳಿಗೆ ಎಣ್ಣೆರಾದನೆ ಮಾಡಲು ಅವಕಾಶ ನೀಡಿರುವುದು ಸರಿಯಲ್ಲ, ಕ್ಷೇತ್ರ ನಿರ್ದೇಶಕರ ಕಚೇರಿ ಅರಣ್ಯ ಪ್ರದೇಶಕ್ಕೆ ಹೊಂದಿಕೊಂಡಂತಿರುವುದರಿಂದ ಮದ್ಯದ ಬಾಟಲಿ , ನಿಷೇಧಿತ ಪ್ಲಾಸ್ಟಿಕ್ ಬಾಟಲಿಗಳು ಎಲ್ಲೆಂದರಲ್ಲಿ ಬಿದ್ದಿರುವುದರಿಂದ ವನ್ಯಜೀವಿಗಳ ಪ್ರಾಣಕ್ಕೆ ಸಂಚಕಾರ ತಂದಂತಾಗುತ್ತದೆ.
>
> ಸಿದ್ದಪ್ಪ , ರೈತ ಸಂಘ ದೇವರಹಳ್ಳಿ.

# ಕೆರೆಗಳಿಗೆ ನೀರು ಹರಿಸುವ ಯೋಜನೆಯಿಂದ ಕೆರೆಗಳಲ್ಲಿ ನೀರು ಸಂಗ್ರಹ

• ಉದಯವಾಹಿನಿ ಬಾಗೇಪಲ್ಲಿ

ಹೆಬ್ಬಾಳ– ನಾಗವಾರದಿಂದ ಏತ ನೀರಾವರಿ ಮೂಲಕ ತಾಲ್ಲೂಕಿನ 24 ಗ್ರಾಮಗಳ ಕೆರೆಗಳಿಗೆ ನೀರು ಹರಿಸುವ ಯೋಜನೆಯಿಂದ ಕೆರೆಗಳಲ್ಲಿ ನೀರು ಸಂಗ್ರಹ ಆಗಿರುವುದರಿಂದ ಅಂತರ್ಜಲದ ಮಟ್ಟ ಹೆಚ್ಚಾಗಿದೆ. ಈ ಹಿಂದೆ ಶಾಸಕ ಎಸ್.ಎನ್. ಸುಬ್ಬಾರೆಡ್ಡಿ ತಾಲ್ಲೂಕಿನ ಮಿಟ್ಟೇಮರಿ ಹೋಬಳಿಯ ಮಲ್ಲಿಗುರ್ಕಿ ಗ್ರಾಮದ ಕೆರೆಯ ಬಳಿ ಎಚ್. ಎನ್. ವ್ಯಾಲಿಯಿಂದ ಏತ ನೀರಾವರಿ ಕಾಮಗಾರಿಗೆ ಭೂಮಿ ಪೂಜೆ ಮಾಡಿದ್ದರು. ತಾಲ್ಲೂಕಿಗೆ ಹೆಬ್ಬಾಳ–ನಾಗವಾರ ವ್ಯಾಲಿಯಿಂದ ಕೆರೆಗಳಿಗೆ ನೀರು ಹರಿಸಬೇಕು, ಇಲ್ಲವಾದರೆ ರಾಜೀನಾಮೆ ನೀಡಲು ಸಿದ್ಧ ಎಂದು ಅಂದಿನ ಕುಮಾರಸ್ವಾಮಿ–ಸರ್ಕಾರದ ಮೇಲೆ ಒತ್ತಡ ಹಾಕಿದ್ದರು.

ಕಾಂಗ್ರೇಸ್, ಜೆಡಿಎಸ್ ಸಮ್ಮಿಶ್ರ ಸರ್ಕಾರದ ಅಂದಿನ ಮುಖ್ಯಮಂತ್ರಿ ಎಚ್.ಡಿ.ಕುಮಾರಸ್ವಾಮಿ ರೂ.83 ಕೋಟಿ ಬಿಡುಗಡೆ ಮಾಡಿದ್ದರು. ಇದೀಗ ತಾಲ್ಲೂಕಿನ ಕಸಬಾ, ಮಿಟ್ಟೇಮರಿ ಹಾಗೂ ಗೂಳೂರಿನ 24 ಕೆರೆಗಳಿಗೆ ಎಚ್.ಎನ್.ವ್ಯಾಲಿಯಿಂದ 2ನೇ ಹಂತದಲ್ಲಿ ಸಂಸ್ಕರಿಸಿದ ನೀರು ಹರಿಸಲಾಗುತ್ತಿದೆ.

ಕುಡಿಯಲು ಹಾಗೂ ಕೃಷಿ ಬಳಕೆಗೆ ಈ ನೀರನ್ನು ನಿಷೇಧಿಸಲಾಗಿದೆ ಎಂದು ಅಧಿಕಾರಿಗಳು ಸ್ಪಷ್ಟಪಡಿಸಿದ್ದಾರೆ. ಕೆರೆಗಳಿಗೆ ನೀರು ತುಂಬಿಸಿ, ಅಂತರ್ಜಲ ಮಟ್ಟ ಹೆಚ್ಚಿಸಲಾಗುತ್ತಿದೆ. ಇದರಿಂದ


ಉದಯವಾಹಿನಿ ಚಿತ್ರ

ತೆರೆದ, ಕೊಳವೆಬಾವಿಗಳಲ್ಲಿ ನೀರು ಸಂಗ್ರಹಕ್ಕೆ ಸಹಕಾರಿ ಆಗಲಿದೆ.

**ಯಾವ ಕೆರೆಗೆ ನೀರು:** ತಾಲ್ಲೂಕಿನ ಕೊತ್ತಕೋಟೆ 1 ಮತ್ತು 2, ಕೋಡಿಪಲ್ಲಿ, ಮಲ್ಲಿಗುರ್ಕಿ, ಮೇರುವಪಲ್ಲಿ, ನಲ್ಲಮಲ್ಲೇಪಲ್ಲಿ 1 ಮತ್ತು 2, ಬೂರಗಮಡಗು ಕೆರೆ, ಆಚೇಪಲ್ಲಿ ಕೆರೆ, ಯಲ್ಲಂಪಲ್ಲಿ ಊರ ಮುಂದಿನ ಕೆರೆ, ಪಾಕಮಾಕಲಪಲ್ಲಿ, ಸಂಜೀವ ಕೆರೆ, ಕಾರಕೂರು ಕೆರೆ, ಮರವಪಲ್ಲಿ, ಮಲ್ಲಸಂದ್ರ, ಕೊಂಡಂವಾರಿಪಲ್ಲಿ, ತೀಮಾಕಲಪಲ್ಲಿ, ಬಾಲರೆಡ್ಡಿಪಲ್ಲಿ, ಸಿದ್ದನಪಲ್ಲಿ, ಚರ್ಲೋಪಲ್ಲಿ, ಮೊಟಕಪಲ್ಲಿ 1 ಮತ್ತು 2 ಹಾಗೂ ನಲ್ಲಪರೆಡ್ಡಿಪಲ್ಲಿಯ 24 ಕೆರೆಗಳಿಗೆ ನೀರು ಹರಿಸುವ ಯೋಜನೆ ಆಗಿದೆ. ತಾಲ್ಲೂಕಿನಲ್ಲಿ ಈಗಾಗಲೇ 10 ಕೆರೆಗಳಿಗೆ ನೀರು ಹರಿದಿದೆ. ಉಳಿದ ಕೆರೆಗಳಿಗೆ ನೀರು ಹರಿಸುವ ಯೋಜನೆಗೆ ಸಿದ್ಧತೆ ನಡೆದಿವೆ.

ತಾಲ್ಲೂಕಿನ ಮಲ್ಲಿಗುರ್ಕಿ ಕೆರೆಯಲ್ಲಿ ನೀರು ತುಂಬಿದೆ. ಇದೀಗ ಆಚೇಪಲ್ಲಿ ಗ್ರಾಮದ ಕೆರೆಗೆ ಪೈಪ್ ಮೂಲಕ ನೀರು ಸರಬರಾಜು ಆಗುತ್ತಿದೆ. ಆಚೇಪಲ್ಲಿ ಗ್ರಾಮದ ಕೆರೆಗೆ ಶಾಸಕ ಎಸ್.ಎನ್.ಸುಬ್ಬಾರೆಡ್ಡಿ ಹಾಗೂ ಮುಖಂಡರು ಭೇಟಿ ಮಾಡಿ ಪರಿಶೀಲನೆ ಮಾಡಿದರು. ತುಂಬಿದ, ತುಂಬಬೇಕಾದ ಕೆರೆಗಳ ಮಾಹಿತಿಯನ್ನು ಅಧಿಕಾರಿಗಳಿಂದ ಸಂಗ್ರಹಿಸಿದರು.

ನೀರು ಹರಿಸುವ ಯೋಜನೆ ಪ್ರಗತಿಯಲ್ಲಿ ಇದೆ. ಈ ನೀರು ಅಂತರ್ಜಲ ಮಟ್ಟ ಏರಿಕೆ ಮಾತ್ರ ಬಳಕೆ ಆಗಲಿದೆ. ತೆರೆದಬಾವಿಗಳಲ್ಲಿ, ಕೊಳವೆಬಾವಿಗಳಲ್ಲಿ ನೀರಿನ ಸಂಗ್ರಹಣೆ ಆಗುವುದರಿಂದ ಅಂತರ್ಜಲ ಮಟ್ಟ ಹೆಚ್ಚಾಗಲಿದ್ದು ಶುದ್ಧವಾದ ನೀರು ಸಿಗಲಿದೆ ಎಂದು ಶಾಸಕ ಎಸ್.ಎನ್.ಸುಬ್ಬಾರೆಡ್ಡಿ ಪ್ರತಿಕ್ರಿಯಿಸಿದರು.

3ನೇ ಹಂತದಲ್ಲಿ ನೀರು ಸಂಸ್ಕರಿಸಿ ಎಂದು ನೀರಾವರಿ ಹೋರಾಟಗಾರರ ಒತ್ತಾಯ ಇದೆ ಎಂಬ ಪ್ರಶ್ನೆಗೆ ಪ್ರತಿಕ್ರಿಯಿಸಿದ ಶಾಸಕ, 'ನಾನು ಸರ್ಕಾರಕ್ಕೆ ಒತ್ತಾಯ ಮಾಡಿದ್ದೇನೆ. ಮುಖ್ಯಮಂತ್ರಿ ಸಿದ್ದರಾಮಯ್ಯ, ಡಿ.ಕೆ.ಶಿವಕುಮಾರ್, ನೀರಾವರಿ ಸಚಿವರ ಬಳಿ ಮತ್ತೊಮ್ಮೆ ಚರ್ಚೆ ಮಾಡುತ್ತೇನೆ. ಕೃಷ್ಣಾ ನದಿಯ ಪಾಲು ಹರಿಸುವ ಯೋಜನೆಯನ್ನು ಸರ್ಕಾರ ಮುಂದಾಗಬೇಕು.

ಇದರಿಂದ ಬಯಲುಸೀಮೆ ತಾಲ್ಲೂಕುಗಳಲ್ಲಿ ಶುದ್ಧವಾದ ಕುಡಿಯುವ ನೀರು, ಕೃಷಿ, ತರಕಾರಿ ಬೆಳೆಯಬಹುದು. ಶಾಶ್ವತವಾದ ನೀರಿನಿಂದ ಸಣ್ಣ ಬೃಹತ್ ಕೈಗಾರಿಕೆ ಆರಂಭವಾಗಲಿದೆ ಎಂದು ತಿಳಿಸಿದರು.

# ಕಾರ್ಯಾರಂಭವಾಗದ ಕುಡಿಯುವ ನೀರಿನ ಘಟಕ

• ಉದಯವಾಹಿನಿ ಕುಣಿಗಲ್

ಪಟ್ಟಣದಲ್ಲಿ ಪುರಸಭೆಯಿಂದ ಲಕ್ಷಾಂತರ ರೂ. ವೆಚ್ಚದಲ್ಲಿ ನಿರ್ಮಾಣವಾಗಿರುವ ಶುದ್ಧ ಕುಡಿಯುವ ನೀರಿನ 2 ಘಟಕಗಳು ಸ್ಥಗಿತಗೊಂಡಿದ್ದು, ನಾಗರಿಕರು ಪರದಾಡುವಂತಾಗಿದೆ. ಪುರಸಭೆಯ ವ್ಯಾಪ್ತಿಯಲ್ಲೇ ಹೆಚ್ಚು ಜನಸಂಖ್ಯೆ ಇರುವ 23ನೇ ವಾರ್ಡ್‌ನಲ್ಲಿ ಐದು ವರ್ಷದ ಹಿಂದೆ ರೂ.9 ಲಕ್ಷದ ವೆಚ್ಚದಲ್ಲಿ ಕುಡಿಯುವ ನೀರಿನ ಘಟಕವನ್ನು ನಿರ್ಮಿಸಲಾಗಿದೆ. ಆದರೆ ಇದುವರೆಗೂ ಒಂದು ಹನಿ ನೀರನ್ನು ಬಳಸಿಕೊಳ್ಳಲು ಸಾಧ್ಯವಾಗಿಲ್ಲ. ಪ್ರಾರಂಭದಲ್ಲಿ ಬಿಲ್ ಪಾವತಿಗೆ ತಕರಾರು ಇದ್ದರೂ, ನಂತರ ಗುತ್ತಿಗೆದಾರನಿಗೆ ಹಣ ಪಾವತಿಯಾಗಿದ್ದರೂ ನೀರು ಮಾತ್ರ ಪಡೆಯಲು ಸಾಧ್ಯವಾಗಿಲ್ಲ. ಘಟಕ ಬಳ್ಳಿಗಳಿಂದ ಆವೃತವಾಗಿದೆ.

ಶುದ್ಧ ಕುಡಿಯುವ ನೀರಿನ ಘಟಕದ ಕಾಮಗಾರಿ ಸಮರ್ಪಕವಾಗಿರದ ಕಾರಣ ಗುತ್ತಿಗೆದಾರನಿಗೆ ಕಾಮಗಾರಿ ಪೂರ್ಣಗೊಳಿಸಿದ ನಂತರ ಹಣ ಪಾವತಿಗೆ ಮನವಿ ಸಲ್ಲಿಸಿದ್ದರೂ, ಅಧಿಕಾರಿಗಳು ಬಿಲ್ ಪಾವತಿಸಿದ್ದಾರೆ. ಜತೆಗೆ ದುರಸ್ತಿ ಮಾಡಿಸಲು ಹಲವು ಬಾರಿ ಮನವಿ ಮಾಡಿದ್ದರೂ ಪ್ರಯೋಜನವಾಗಿಲ್ಲ ಎಂದು ಪುರಸಭೆ ಸದಸ್ಯೆ ಜಯಮ್ಮ ಆರೋಪಿಸಿದ್ದಾರೆ.

ಪುರಸಭೆಯ 12ನೇ ವಾರ್ಡ್‌ನಲ್ಲಿ ಸಾರ್ವಜನಿಕ ಆಸ್ಪತ್ರೆ ಮುಂಭಾಗದಲ್ಲಿ ಆಸ್ಪತ್ರೆಗೆ ಬರುವವರಿಗೆ ಸಮೀಪದ ಅಂದಾನಯ್ಯ ಬಡಾವಣೆ, ಪೊಲೀಸ್ ವಸತಿ ಗೃಹಗಳಿಗೆ ಅನುಕೂಲವಾಗಲೆಂದು ನಿರ್ಮಿಸಿದ್ದ ಶುದ್ಧ ಕುಡಿಯುವ ನೀರಿನ ಘಟಕ ಪ್ರಾರಂಭವಾಗಿ ಐದು ವರ್ಷವಾದರೂ ಕಾರ್ಯನಿರ್ವಹಿಸಿದ್ದು ಕೆಲವು ತಿಂಗಳು ಮಾತ್ರ.ದುರಸ್ತಿಗೆ ಗಮನ ಹರಿಸದ ಕಾರಣ ನಾಗರಿಕರು ದೂರದ ಘಟಕಗಳಿಗೆ ಹೋಗಿ ನೀರು ತರುವ ಅನಿವಾರ್ಯವಿದೆ.


ಉದಯವಾಹಿನಿ ಚಿತ್ರ

> ಪುರಸಭೆ ಅಧಿಕಾರಿ ವರ್ಗದವರು ಸ್ಥಗಿತಗೊಂಡಿರುವ ಘಟಕಗಳನ್ನು ಕಂಡು ಕಾಣದೆ ಹೋಗುತ್ತಿದ್ದಾರೆ. ಇನ್ನೂ ಪುರಸಭೆಯಿಂದ ವಿತರಣೆಯಾಗುವ ನೀರಿನ ಶುದ್ಧತೆ ಬಗ್ಗೆ ಪ್ರಮಾಣಿಕರಿಸುವ ಬಗ್ಗೆ ಅಧಿಕಾರಿಗಳು ಗಮನ ಹರಿಸದ ಕಾರಣ ನಾಗರಿಕರು ಶುದ್ಧ ಕುಡಿಯುವ ನೀರಿಗೆ ಪರದಾಡುವಂತಾಗಿದೆ. ಗಮನಹರಿಸಲು ಗವಿಯಣ್ಣ ಶ್ರೀಧರ್, ವೆಂಕಟೇಶ್ ಮನವಿ ಮಾಡಿದ್ದಾರೆ.

# ಬಿಜೆಪಿ ಜಿಲ್ಲಾಧ್ಯಕ್ಷ ಆನಂದಸ್ವಾಮಿ ರಾಜೀನಾಮೆ ಪಡೆಯಲು ಒತ್ತಾಯ

• ಉದಯವಾಹಿನಿ ರಾಮನಗರ

ಸತತ 2ನೇ ಸಲ ಬಿಜೆಪಿ ಜಿಲ್ಲಾಧ್ಯಕ್ಷರಾಗಿ ಏಳು ತಿಂಗಳ ಹಿಂದೆಯಷ್ಟೇ ಆಯ್ಕೆಯಾಗಿದ್ದ ಎಂ.ಎನ್. ಆನಂದಸ್ವಾಮಿ ವಿರುದ್ಧ ಆರಂಭದಿಂದಲೂ ಪಕ್ಷದ 1 ಗುಂಪಿನೊಳಗೆ ಇದ್ದ ಅಸಮಾಧಾನ ಕಡೆಗೂ ಸ್ಫೋಟಗೊಂಡಿದೆ.

ತುರ್ತು ಸುದ್ದಿಗೋಷ್ಠಿ ನಡೆಸಿದ ಈ ಗುಂಪು, ಆನಂದಸ್ವಾಮಿ ಅವರಿಂದ ರಾಜೀನಾಮೆ ಪಡೆದು ಬೇರೆಯವರನ್ನು ನೇಮಿಸುವಂತೆ ಪಕ್ಷದ ವರಿಷ್ಠರನ್ನು ಒತ್ತಾಯಿಸಿದೆ.

ನಗರದ ಖಾಸಗಿ ಹೋಟೆಲ್‌ನಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ನಗರಾಭಿವೃದ್ಧಿ ಪ್ರಾಧಿಕಾರದ ಮಾಜಿ ಅಧ್ಯಕ್ಷ ಮುರಳೀಧರ್, 'ಜಿಲ್ಲಾಧ್ಯಕ್ಷ ಆನಂದಸ್ವಾಮಿ


ಉದಯವಾಹಿನಿ ಚಿತ್ರ

ಅವರ ಕಾರ್ಯವೈಖರಿಯಿಂದಾಗಿ ಪಕ್ಷವು ಜಿಲ್ಲೆಯಲ್ಲಿ ಬಲ ಕಳೆದುಕೊಳ್ಳುತ್ತಿದೆ. ಪಕ್ಷದ ಹಿತದೃಷ್ಟಿಯಿಂದ ವರಿಷ್ಠರು ಆನಂದಸ್ವಾಮಿ ಅವರಿಂದ ರಾಜೀನಾಮೆ ಪಡೆಯಬೇಕು ಎಂದು ಆಗ್ರಹಿಸಿದರು.

'ಜಿಲ್ಲೆಯಲ್ಲಿ ವಿರೋಧ ಪಕ್ಷದ ನಾಯಕನ ಜವಾಬ್ದಾರಿಯನ್ನು ಸಮರ್ಥವಾಗಿ ನಿರ್ವಹಿಸುವಲ್ಲಿ ಆನಂದಸ್ವಾಮಿ ವಿಫಲರಾಗಿದ್ದಾರೆ. ಆಡಳಿತಾರೂಢ ಕಾಂಗ್ರೆಸ್ ಪಕ್ಷಕ್ಕೆ ಸಹಕಾರ ನೀಡುತ್ತಾ, ಪಕ್ಷದ ಹಿತವನ್ನು ಬಲಿ ಕೊಡುತ್ತಿದ್ದಾರೆ. ವರಿಷ್ಠರು ಅವರ ಬದಲು ಸಮರ್ಥ ಅಧ್ಯಕ್ಷರನ್ನು ನೇಮಕ ಮಾಡಬೇಕು ಎಂದು ಮನವಿ ಮಾಡಿದರು. ಪ್ರಾಧಿಕಾರದ ಮತ್ತೊಬ್ಬ ಮಾಜಿ ಅಧ್ಯಕ್ಷ ಎಸ್.ಆರ್. ನಾಗರಾಜು ಮಾತನಾಡಿ, ಪಕ್ಷದಲ್ಲಿರುವ ಹಿರಿಯ ಮುಖಂಡರು ಮತ್ತು ಕಾರ್ಯಕರ್ತರನ್ನು ಆನಂದಸ್ವಾಮಿ ಕಡೆಗಣಿಸಿದ್ದಾರೆ.

ಎಲ್ಲರೊಂದಿಗೆ ಸಮನ್ವಯ ಸಾಧಿಸಿಕೊಂಡು ಪಕ್ಷವನ್ನು ಸರಿಯಾದ ದಿಕ್ಕಿನಲ್ಲಿ ಸಂಘಟಿಸುವಲ್ಲಿ ಸೋತಿದ್ದಾರೆ ಎಂದು ಅಸಮಾಧಾನ ಹೊರಹಾಕಿದರು.

ಮುಂಬರುವ ಸ್ಥಳೀಯ ಸಂಸ್ಥೆಗಳ ಚುನಾವಣೆಗೆ ಈಗಿನಿಂದಲೇ ಪಕ್ಷವನ್ನು ಅಣಿಗೊಳಿಸದೆ ಆನಂದಸ್ವಾಮಿ ಅವರು ನಿರ್ಲಕ್ಷ್ಯ ಮಾಡುತ್ತಿದ್ದಾರೆ. ಪಕ್ಷ ಸಂಘಟನೆಗಾಗಿ ರಚಿಸಿರುವ ಕೋರ್ ಕಮಿಟಿಯಲ್ಲಿರುವ ಹಿರಿಯರನ್ನು ಕಡೆಗಣಿಸಿದ್ದಾರೆ. ಇದರಿಂದಾಗಿ ಕಾರ್ಯಕರ್ತರು ಬೇರೆ ಪಕ್ಷದ ಕಡೆಗೆ ಮುಖ ಮಾಡುತ್ತಿದ್ದಾರೆ ಎಂದು ಆತಂಕ ವ್ಯಕ್ತಪಡಿಸಿದರು. ಎಸ್‌ಸಿ ಮೋರ್ಚಾ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಶೇಖರ್, ರಾಜ್ಯ ಸರ್ಕಾರದ ದುರಾಡಳಿತದ ವಿರುದ್ಧ ಪ್ರಬಲ ವಿರೋಧ ಪಕ್ಷವಾಗಿ ಹೋರಾಟ ರೂಪಿಸುವಲ್ಲಿ ಆನಂದಸ್ವಾಮಿ ಸೋತಿದ್ದಾರೆ. ಜಿಲ್ಲೆಯಲ್ಲಿ ಹಲವು ಜ್ವಲಂತ ಸಮಸ್ಯೆಗಳಿದ್ದರೂ ಯಾವುದರ ಬಗ್ಗೆಯೂ ಚಕಾರ ಎತ್ತಿಲ್ಲ. ಹೀಗಾದರೆ ಪಕ್ಷ ಹೇಗೆ ಬೆಳೆಯುತ್ತದೆ.

> ಕಾಂಗ್ರೇಸ್‌ಗೆ ಹೋಗಿ ಶಾಸಕರಾಗಿರುವ ಸಿ.ಪಿ. ಯೋಗೇಶ್ವರ್ ಬೆಂಬಲಿಗರಾಗಿರುವ ಆನಂದಸ್ವಾಮಿ ತಮ್ಮ ನಾಯಕರೊಂದಿಗೆ ಪಕ್ಷ ತೊರೆಯಬೇಕಿತ್ತು. ಆದರೆ ಇಲ್ಲೇ ಉಳಿದುಕೊಂಡು ಯೋಗೇಶ್ವರ್ ಬೆಂಬಲಿಸುತ್ತಾ ಪಕ್ಷಕ್ಕೆ ವಂಚಿಸುತ್ತಿದ್ದಾರೆ
>
> – ಜಗನ್ನಾಥ್ ಬಿಜೆಪಿ ಮುಖಂಡ

# ಮಿನಿ ನ್ಯೂಸ್

## ನಂದಿಬೆಟ್ಟದ ಟಿಪ್ಪು ಬೇಸಿಗೆ ಅರಮನೆ ಮೇಲೆ ಲಾರೆನ್ಸ್ ಬಿಷ್ಣೋಯ್ ಹೆಸರು ಕೆತ್ತನೆ!

• ಉದಯವಾಹಿನಿ ಚಿಕ್ಕಬಳ್ಳಾಪುರ

ತಾಲ್ಲೂಕಿನ ನಂದಿಗಿರಿಧಾಮದ ಪ್ರಸಿದ್ಧ ಟಿಪ್ಪು ಬೇಸಿಗೆ ಅರಮನೆಯ ಮೇಲೆ ಅಂತರರಾಷ್ಟ್ರೀಯ ಪಾತಕಿ ಲಾರೆನ್ಸ್ ಬಿಷ್ಣೋಯ್ ಹೆಸರು ಬರೆಯಲಾಗಿದೆ. ಇದು ಪ್ರವಾಸಿಗರಲ್ಲಿ ಅಸಮಾಧಾನಕ್ಕೆ ಕಾರಣವಾಗಿದೆ. ಲ್ಯಾರೆನ್ಸ್ ಬಿಷ್ಣೋಯ್ ಹೆಸರಿನ ನಡುವೆ ಪ್ರೀತಿಯ ಸಂಕೇತವನ್ನೂ ಬರೆಯಲಾಗಿದೆ. ಟಿಪ್ಪು ಬೇಸಿಗೆ ಅರಮನೆಯು ಪುರಾತತ್ವ ಇಲಾಖೆಗೆ ಸೇರಿದೆ. ಸದಾ ಜನಜಂಗುಳಿಯಿಂದ ತುಂಬಿ ತುಳುಕುವ, ಗಿರಿಧಾಮದ ಪ್ರವೇಶದಲ್ಲಿಯೇ ಇರುವ ಬೇಸಿಗೆ ಅರಮನೆಯ ಮೇಲೆ ಈ ಬರಹ ಬರೆದವರು ಯಾರು ಎನ್ನುವುದು ಚರ್ಚೆಗೆ ಒಳಗಾಗಿದೆ.

ನಂದಿಗಿರಿಧಾಮ ಠಾಣೆ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿದ್ದು ಈ ಬರಹದ ಮೇಲೆ ಬಣ್ಣ ಬಳಿದಿದ್ದಾರೆ.

## ಕೋಡಿ ಹರಿದ ಸಾದಲಿ ಕೆರೆ

• ಉದಯವಾಹಿನಿ ಶಿಡ್ಲಘಟ್ಟ

ಕಳೆದ ಕೆಲವು ದಿನಗಳಿಂದ ಬೀಳುತ್ತಿರುವ ಮಳೆಯಿಂದಾಗಿ ತಾಲ್ಲೂಕಿನ ಸಾದಲಿ ಹೊಸಕೆರೆ ತುಂಬಿ ಹರಿಯುತ್ತಿದೆ. ಉತ್ತರ ಪೆನ್ನಾರ್ ನದಿ ಕಣಿವೆ ಪ್ರದೇಶದಲ್ಲಿರುವ ಸಾದಲಿ ಹೊಸಕೆರೆ ಅಚ್ಚುಕಟ್ಟು 45 ಹೆಕ್ಟೇರ್‌ಗಳಷ್ಟಿದೆ. ಈ ಕೆರೆಯ ನೀರಿನ ಶೇಖರಣೆ ಪ್ರದೇಶ 4.21 ಹೆಕ್ಟೇರ್‌ಗಳಷ್ಟಿದೆ. ತಾಲ್ಲೂಕಿನ ಸಾದಲಿ ಮತ್ತು ಎಸ್.ದೇವಗಾನಹಳ್ಳಿ ಪಂಚಾಯಿತಿ ವ್ಯಾಪ್ತಿಗೆ ಬರುವ ಹಲವು ಕೆರೆಗಳು ತುಂಬಿದ್ದು ಈ ಭಾಗದ ಜನರ ಹರ್ಷಕ್ಕೆ ಕಾರಣವಾಗಿದೆ.

ಎಸ್.ದೇವಗಾನಹಳ್ಳಿ ಪಂಚಾಯಿತಿಯ ಇರಗಪ್ಪನಹಳ್ಳಿ ಕೆರೆಯೂ ತುಂಬಿದೆ. ಈ ಭಾಗದ ಅಕ್ಕಯ್ಯಗಾರು ಕೆರೆ ಮತ್ತು ಎಸ್.ಗೊಲ್ಲಹಳ್ಳಿ ಕೆರೆಗಳು ತುಂಬಿ ಕೋಡಿ ಹರಿದು ಸಾದಲಿ ಹೊಸಕೆರೆಗೆ ನೀರು ಹರಿದು ಬಂದು ಈಗ ಈ ಕೆರೆಯೂ ತುಂಬಿ ಕೋಡಿ ಹರಿದಿದೆ. ಹರಿಯುತ್ತಿರುವ ನೀರಿನಲ್ಲಿ ಕೊಡಮೆ ಹಾಕಿ ಯುವಕರು ಮೀನು ಹಿಡಿಯುವ ದೃಶ್ಯ ಕಾಣುತ್ತಿತ್ತು. ರಸ್ತೆಯ ಮೇಲೆ ಹರಿದು ಹೋಗುವ ನೀರಿನಲ್ಲಿ ಮಕ್ಕಳು ಆಟ ಆಡುತ್ತಿದ್ದರು. ಸಾದಲಿ ಹೊಸಕೆರೆ ತುಂಬಿ ಹರಿಯುವ ನೀರು ಸಾದಲಿ ಸಾದಲಮ್ಮನ ಕೆರೆಗೆ ಹರಿಯುತ್ತದೆ. ಅಲ್ಲಿಂದ ಮುಂದೆ ರಾಮಸಮುದ್ರ ಕೆರೆಯ ಕಡೆಗೆ ನೀರು ಹರಿದು ಹೋಗುತ್ತದೆ. ಈಗ ರಾಮಸಮುದ್ರದ ಕೆರೆಯೂ ತುಂಬಿ ಹರಿಯುತ್ತಿದೆ.

## ಬಡತನ ನಿವಾರಣೆಗೆ ಶಿಕ್ಷಣವೇ ಮಾರ್ಗ: ಜಿ. ಪರಮೇಶ್ವರ

• ಉದಯವಾಹಿನಿ ಕೊರಟಗೆರೆ

'ಮಧುಗಿರಿ ಹಾಗೂ ಕೊರಟಗೆರೆ ಕ್ಷೇತ್ರ ನನ್ನನ್ನು ಉನ್ನತ ಮಟ್ಟಕ್ಕೆ ಬೆಳೆಸಿದೆ. ಮಧುಗಿರಿ ಕ್ಷೇತ್ರದ ಜನತೆ ಗಿಡನೆಟ್ಟು ಪೋಷಿಸಿದರು. ಹಣ್ಣು ಬಿಡುವ ಹೊತ್ತಿಗೆ ಕೊರಟಗೆರೆ ಕ್ಷೇತ್ರಕ್ಕೆ ಕಳಿಸಿದರು.

ಈ ಕ್ಷೇತ್ರದ ಜನ ನನ್ನನ್ನು ಉನ್ನತ ಹುದ್ದೆ ಏರಲು ಆಶೀರ್ವದಿಸಿದರು ಎಂದು ಗೃಹ ಸಚಿವ ಜಿ. ಪರಮೇಶ್ವರ ಹೇಳಿದರು. ತಾಲ್ಲೂಕಿನ ಚಟ್ಟೇನಹಳ್ಳಿ ಗ್ರಾಮದ ಗಂಗಮಾಳಮ್ಮ, ಮೈಲಾರಲಿಂಗೇಶ್ವರ ನೂತನ ದೇವಾಲಯದ ಪ್ರಾಣ, ಕಳಶ ಪ್ರತಿಷ್ಠಾಪನಾ ಮಹೋತ್ಸವದಲ್ಲಿ ಮಾತನಾಡಿದರು. ಪೋಷಕರು ಮಕ್ಕಳನ್ನು ವಿದ್ಯಾವಂತರನ್ನಾಗಿ ಮಾಡಿ. 1 ಮಗು ವಿದ್ಯಾವಂತವಾದರೆ ಇಡೀ ಕುಟುಂಬದ ಅಭಿವೃದ್ಧಿಗೆ ಸಹಕಾರವಾಗುತ್ತದೆ. ಬಡತನ ನಿವಾರಣೆಗೆ ಶಿಕ್ಷಣವೇ ಉತ್ತಮ ಮಾರ್ಗ. ಇದರಿಂದ ಸಮಾಜದ ಅಭಿವೃದ್ಧಿ ಸಾಧ್ಯ ಎಂದರು.

## ಅರಣ್ಯ ಸಚಿವರಿಗೆ ಕಪ್ಪು ಬಾವುಟ ಪ್ರದರ್ಶನಕ್ಕೆ ತಯಾರಿ : ಬಿಜೆಪಿ ಕಾರ್ಯಕರ್ತರ ಬಂಧನ


ಉದಯವಾಹಿನಿ ಚಿತ್ರ

• ಉದಯವಾಹಿನಿ ಗುಂಡ್ಲುಪೇಟೆ

ಬಂಡೀಪುರಕ್ಕೆ ಆಗಮಿಸಿದ್ದ ವೇಳೆ ಸಚಿವ ಈಶ್ವರ್ ಖಂಡ್ರೆಗೆ ಕಪ್ಪು ಬಾವುಟ ಪ್ರದರ್ಶನ ಮಾಡಲು ತಯಾರಿ ನಡೆಸಿದ್ದರು ಎಂದು ಬಿಜೆಪಿ ಕಾರ್ಯಕರ್ತರನ್ನ ಪೊಲೀಸರು ವಶಕ್ಕೆ ಪಡೆದು ಬಳಿಕ ಬಿಡುಗಡೆಗೊಳಿಸಿದರು. ಪಟ್ಟಣದ ತಾಲ್ಲೂಕು ಕಚೇರಿ ಎದುರು ಧರಣಿ ನಿರತ ರೈತರನ್ನ ಭೇಟಿಯಾಗಲು ಆಗಮಿಸಲಿದ್ದ ಸಚಿವರಿಗೆ ಕಪ್ಪು ಬಾವುಟ ಪ್ರದರ್ಶನ ಮಾಡಲು ಸಜ್ಜಾಗಿದ್ದ ಬಿಜೆಪಿ ಮಂಡಲ ಅಧ್ಯಕ್ಷ ಮಹದೇವ ಪ್ರಸಾದ್, ಹಂಗಳ ಪ್ರಣಯ್, ಜಗದೀಶ್, ಮಂಜು , ನಂಜಪ್ಪ ಸೇರಿದಂತೆ ಮುಂತಾದವರನ್ನ ಮುಂಜಾಗೃತಾ ಕ್ರಮವಾಗಿ ವಶಕ್ಕೆ ಪಡೆದ ಪೊಲೀಸರು ಸಚಿವರ ಆಗಮನದ ಬಳಿಕ ಬಿಡುಗಡೆಗೊಳಿಸಿದರು.

# ರೈತರ ಸಮಸ್ಯೆ ಬಗೆಹರಿಸಲು ಬದ್ಧ: ಅರಣ್ಯ ಈಶ್ವರ್ ಖಂಡ್ರೆ ಭರವಸೆ

## 2 ಇಲಾಖೆಗಳು ಸರ್ವೇ ನಡೆಸುವ ಮೂಲಕ 1 ರಿಂದ 5 ರವರೆಗೆ ದುರಸ್ತಿ ಆಗಿರುವೆಡೆ ಕಡತಗಳಿಗೆ ಎನ್ ಓ ಸಿ ನೀಡಲು ಕ್ರಮ ಕೈಗೊಳ್ಳಬೇಕು ಒತ್ತಾಯ


• ಉದಯವಾಹಿನಿ ಗುಂಡ್ಲುಪೇಟೆ

ಪಟ್ಟಣದ ತಹಶೀಲ್ದಾರ್ ಕಚೇರಿ ಮುಂಭಾಗ ಕಳೆದ ಹದಿನೈದು ದಿನಗಳಿಂದ ಅಹೋರಾತ್ರಿ ಧರಣಿಯಲ್ಲಿ ನಿರತರಾಗಿರುವ ರೈತರನ್ನ ಖುದ್ದು ಭೇಟಿಯಾದ ಅರಣ್ಯ ಸಚಿವ ಈಶ್ವರ್ ಖಂಡ್ರೆ ಕರಾವಳಿ ಪ್ರದೇಶಗಳನ್ನ ಸೇರಿದಂತೆ ಚಾಮರಾಜನಗರ ಜಿಲ್ಲೆಯಲ್ಲಿ ಶೇ 55 ರಷ್ಟು ಅರಣ್ಯ ಪ್ರದೇಶವಿದೆ ಇಲ್ಲಿನ ರೈತರ ಸಮಸ್ಯೆಗಳಿಗೆ ದನಿಯಾಗುವ ಸದುದ್ದೇಶದಿಂದ ಇಲಾಖೆ ಲೋಪ ದೋಷಗಳನ್ನ ಸರಿಪಡಿಸಲಾಗುವುದು ಎಂದು ಧರಣಿ ನಿರತ ರೈತರಿಗೆ ಭರವಸೆ ನೀಡಿದರು.

ಧರಣಿ ನಿರತ ರೈತರನ್ನ ಶಾಸಕ ಎಚ್.ಎಂ.ಗಣೇಶ್ ಪ್ರಸಾದ್, ಅನಿಲ್ ಚಿಕ್ಕಮಾಧು ಅವರೊಟ್ಟಿಗೆ ತೆರಳಿ ಅಹವಾಲು ಸ್ವೀಕರಿಸಿದರು. ರೈತ ಸಂಘ ಚಾಮರಾಜನಗರ ಜಿಲ್ಲಾಧ್ಯಕ್ಷ ಶಿವಪುರ ಮಹದೇವಪ್ಪ ಹಲವು ಹಕ್ಕೊತ್ತಾಯಗಳನ್ನ ಅರಣ್ಯ ಸಚಿವರ ಮುಂದಿರಿಸಿದರು.

ಕಳೆದ 60 ವರ್ಷದಿಂದ ಬೇಸಾಯ ಮಾಡುತ್ತಿರುವ ರೈತರಿಗೆ ಅಕ್ರಮ ಸಕ್ರಮ ಯೋಜನೆಯಡಿ ಸಾಗುವಳಿ ವಿತರಣೆ ಮಾಡಬೇಕು, ಅರಣ್ಯ ಗಡಿಯಲ್ಲಿ ಕೃಷಿ ಚಟುವಟಿಕೆ ಮಾಡುವವರಿಗೆ ಉಪದ್ರ ನೀಡದೆ ಸಾಗುವಳಿ ನೀಡಲು ಅರಣ್ಯ ಇಲಾಖೆ ಮುಂದಾಗಬೇಕು ಎಂದು ಆಗ್ರಹಿಸಿದರು. ಎರಡು ಇಲಾಖೆಗಳು ಸರ್ವೇ ನಡೆಸುವ ಮೂಲಕ 1 ರಿಂದ 5 ರವರೆಗೆ ದುರಸ್ತಿ ಆಗಿರುವೆಡೆ ಕಡತಗಳಿಗೆ ಎನ್ ಓ ಸಿ ನೀಡಲು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಮಾನವ ವನ್ಯಜೀವಿ ಸಂಘರ್ಷ ತಪ್ಪಿಸಲು ಮುಂದಾಗುವ ಜೊತೆಗೆ ಉಂಟಾಗುವ ಬೆಳೆ ನಷ್ಟವನ್ನ ಪರಿಗಣಿಸಿ ನ್ಯಾಯಯುತವಾಗಿ ಒದಗಿಸಬೇಕು, ವನ್ಯಜೀವಿಗಳ ದಾಳಿಯಿಂದ ಯಾರಾದರೂ ಮೃತಪಟ್ಟಲ್ಲಿ


ಉದಯವಾಹಿನಿ ಚಿತ್ರ

ಕುಟುಂಬದ ಸದಸ್ಯರಿಗೆ ಖಾಯಂ ಉದ್ಯೋಗ ನೀಡಬೇಕು ಅಲ್ಲದೆ ವಿದ್ಯಾಭ್ಯಾಸದ ಜವಾಬ್ದಾರಿಯನ್ನ ಸರ್ಕಾರವೇ ನಿಬಾಯಿಸಬೇಕು ಎಂದು ಒತ್ತಾಯಿಸಿ ಮನವಿ ಸಲ್ಲಿಸಿದರು.

**ಕೃಷಿ ಅವಲಂಬಿತ ಸಮಸ್ಯೆಗಳಿಗೆ ಶೀಘ್ರ ಪರಿಹಾರ – ಖಂಡ್ರೆ:** ಕೃಷಿ ಅವಲಂಭಿತ ಸಮಸ್ಯೆಗೆ ಸಂಬಂಧಿಸಿದಂತೆ ರೈತರು ಕಳೆದ ಹದಿನಾಲ್ಕು ದಿನಗಳಿಂದ ಅಹೋರಾತ್ರಿ ಧರಣಿ ನಡೆಸುತ್ತಿರುವ ಕುರಿತು ಶಾಸಕ ಗಣೇಶ್ ಪ್ರಸಾದ್ ಗಮನಕ್ಕೆ ತಂದಿದ್ದರು ಅದರಂತೆ ಬಂಡೀಪುರದಲ್ಲಿ ಸಭೆ ಕರೆಯಲಾಗಿದ್ದು ರೈತರು ಕೊಟ್ಟಿರುವ ಬೇಡಿಕೆಗಳಲ್ಲಿ ಪ್ರಮುಖವಾಗಿ ಈಗಾಗಲೇ ಬೇಸಾಯ ಮಾಡುತ್ತಿರುವ ಹಕ್ಕು ನೀಡುವ ನಿಟ್ಟಿನಲ್ಲಿ ಚರ್ಚಿಸಲಾಗಿದೆ, ಆದರೆ ಅರಣ್ಯ ಸಂರಕ್ಷಣೆ ಕಾಯ್ದೆ ಜಾರಿಯಾದ ಬಳಿಕ ಸರ್ವೋಚ್ಚ ನ್ಯಾಯಾಲಯದ ತೀರ್ಪಿನನ್ವಯ ರಾಜ್ಯ ಸರ್ಕಾರದ ಕೈ ಕಟ್ಟುವಂತಹ ನಿಯಮಗಳನ್ನ ಜಾರಿಗೊಳಿಸಲಾಗಿದೆ, ಅದುದರಿಂದ ಅರ್ಹ ರೈತರಿಗೆ ಕಾಯ್ದೆ ಬರುವ ಮುಂಚೆಯೇ ಹಕ್ಕು ನೀಡುವ ತೀರ್ಮಾನಕ್ಕೆ ಬಂದಂತ ಸಂಧರ್ಭದಲ್ಲಿ ಕೆಲ ಪರಿಸರವಾದಿಗಳು ಉಚ್ಚ ನ್ಯಾಯಾಲಯದಲ್ಲಿ ರದ್ದುಗೊಳಿಸಿದ ಪ್ರಕರಣಗಳಿವೆ ಎಂದರು.

ರೈತರ ಸಮಸ್ಯೆಗೆ ಶಾಶ್ವತ ಪರಿಹಾರ ಕಂಡುಕೊಳ್ಳುವ ನಿಟ್ಟಿನಲ್ಲಿ ಸುಪ್ರೀಂ ಕೋರ್ಟಿಗೆ ಅರ್ಜಿ ಸಲ್ಲಿಸಲಾಗಿದ್ದು ರೈತರಿಗೆ ಸಹಕಾರಿಯಾಗುವ ಭರವಸೆಯಿದೆ ಎಂದು ಮಾಹಿತಿ ನೀಡಿದರು.

ಅರಣ್ಯ ದಂಚಿನಲ್ಲಿ ರೈಲ್ವೆ ಬ್ಯಾರಿಕೇಡ್ ಅಳವಡಿಕೆಗೆ ಸಿದ್ದರಾಮಯ್ಯ ಸರ್ಕಾರ ಅನುದಾನ ಮಂಜೂರು ಮಾಡಿದೆ ಶೀಘ್ರದಲ್ಲೇ ಟೆಂಡರ್ ಕರೆಯುವ ಮೂಲಕ ಕ್ಷಿಪ್ರಗತಿಯಲ್ಲಿ ಕಾಮಗಾರಿ ಆರಂಭಿಸಲಾಗುವುದು, ರೈತರ ಬಹುಬೇಡಿಕೆಗಳನ್ನ ಪರಿಹರಿಸಲು ಕಂದಾಯ ಇಲಾಖೆ ಸಚಿವರ ಜೊತೆ ಸಮಾಲೋಚನೆ ನಡೆಸಿ ಕಾರ್ಯಗತಗೊಳಿಸಲು ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ ಎಂದು ಭರವಸೆ ನೀಡಿದರು.

ಈ ಸಂಧರ್ಭದಲ್ಲಿ ರೈತ ಸಂಘ ತಾಲ್ಲೂಕು ಅಧ್ಯಕ್ಷ ಹಂಗಳ ದಿಲೀಪ್, ಕಾರ್ಯದರ್ಶಿ ಶಿವಣ್ಣ, ಬೊಮ್ಮನಹಳ್ಳಿ ಲೋಕೇಶ್, ಕಾಡಾ ಮಾಜಿ ಅಧ್ಯಕ್ಷ ಎಚ್.ಎಸ್.ನಂಜಪ್ಪ, ಕಬ್ಬಹಳ್ಳಿ ಮಹೇಶ್, ಚಾಮುಲ್ ನಿರ್ದೇಶಕ ನಂಜುಂಡ ಪ್ರಸಾದ್ ಸೇರಿದಂತೆ ರೈತ ಸಂಘ ಮುಖಂಡರು ಪಧಾಧಿಕಾರಿಗಳು ಹಾಜರಿದ್ದರು.

### ಮರಕಟಾವಿಗೆ ಸರಳೀಕರಣ

ರಾಜ್ಯದಲ್ಲಿ ಮರಗಿಡ ಸಂರಕ್ಷಣಾ ಕಾಯ್ದೆಯಿದ್ದು ಇದು ಸಮಂಜಸವಲ್ಲ, ಈ ವಿಚಾರವಾಗಿ ಚರ್ಚೆ ಮಾಡಲಾಗಿದ್ದು ತೇಗದ ಮರ ಕಟಾವು ಮಾಡಲು ಒಂದು ವರ್ಷಗಳ ಕಾಲಾವಕಾಶ ತೆಗೆದುಕೊಳ್ಳುತ್ತದೆ ಎಂಬ ದೂರುಗಳು ಕೇಳಿಬಂದಿದ್ದು ಅರಣ್ಯ ಇಲಾಖೆಗೆ ಶೀಘ್ರವಾಗಿ ಸರಳೀಕರಣಗೊಳಿಸುವಂತೆ ತಿಳಿಸಿದ್ದೇನೆ ಎಂದರು.

### ಜಂಟಿ ಸರ್ವೆಗೆ ಸೂಚನೆ

ರಾಜ್ಯದ ಹತ್ತು ಜಿಲ್ಲೆಗಳಲ್ಲಿ ಸಾಗುವಳಿ ಸಮಸ್ಯೆ ತಲೆದೋರಿದೆ ಹಾಗಾಗಿ ಕಂದಾಯ ಇಲಾಖೆ ಮತ್ತು ಅರಣ್ಯ ಇಲಾಖೆ ಜಂಟಿ ಸರ್ವೇ ನಡೆಸುವಂತೆ ಜಿಲ್ಲಾಡಳಿತಕ್ಕೆ ಸೂಚಿಸಲಾಗಿದೆ, ಜಂಟಿ ಸಮೀಕ್ಷೆ ಕಾರ್ಯ ತ್ವರಿತಗತಿಯಲ್ಲಿ ನಡೆಸಿ ಅತಿ ಶೀಘ್ರದಲ್ಲಿ ವರದಿ ನೀಡುವಂತೆ ಆದೇಶಿಸಿದ್ದೇವೆ, ಸಾಗುವಳಿಗೆ ಸಂಬಂಧಿಸಿದಂತೆ ಪುನರ್ ಪರಿಶೀಲನೆಗೆ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದ್ದು ಈ ಸಂಬಂಧ ಬಂಡೀಪುರದಲ್ಲೇ ಸಭೆ ಕರೆದು ರೈತರಿಗೂ ಆಹ್ವಾನ ನೀಡುವ ಮೂಲಕ ಎಲ್ಲರ ಸಮ್ಮುಖದಲ್ಲಿ ಸಮಾಲೋಚನೆ ಮಾಡುವ ಮೂಲಕ ರೈತರ ಸಮಸ್ಯೆಗಳನ್ನ ತತಕ್ಷಣ ಬಗೆಹರಿಸುವ ಕೆಲಸ ಮಾಡಲಾಗುವುದು ಎಂದು ತಿಳಿಸಿದರು. ರೈತರ ಪರವಾಗಿ ಸರ್ವೋಚ್ಚ ನ್ಯಾಯಾಲಯಕ್ಕೆ ಪ್ರಸ್ತಾವನೆ ಸಲ್ಲಿಸುವ ಮೂಲಕ ನ್ಯಾಯ ಒದಗಿಸಿಕೊಡಲು ನಮ್ಮ ಸರ್ಕಾರ ಬದ್ಧ ಎಂದು ಭರವಸೆ ನೀಡಿದರು.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಮಧ್ಯಾಹ್ನ | 03:00 ರಿಂದ 04:30 |
| ಗುಳಿಕ ಕಾಲ | ಬೆಳಿಗ್ಗೆ | 12:00 ರಿಂದ 01:30 |
| ಯಮಗಂಡ ಕಾಲ | ಬೆಳಿಗ್ಗೆ | 09:00 ರಿಂದ 10:30 |

**ಮೇಷ** ನಿಮ್ಮ ಭರವಸೆ ಒಂದು ಸಮೃದ್ಧ, ಸೂಕ್ಷ್ಮ ಪರಿಮಳಯುಕ್ತ ಮತ್ತು ಬೆರಗುಗೊಳಿಸುವ ಹೂವಿನ ಹಾಗೆ ಅರಳುತ್ತದೆ. ಇಂದು ಹಣದ ನಷ್ಟವು ಸಂಭವಿಸಬಹುದು. ಆದ್ದರಿಂದ ವಹಿವಾಟುಗಳಿಗೆ ಸಂಬಂಧಿಸಿದ ವಿಷಯಗಳಲ್ಲಿ ನೀವು ಎಷ್ಟು ಜಾಗರೂಕರಾಗಿರುತ್ತಿರೋ ಅಷ್ಟೇ ನಿಮಗೆ ಉತ್ತಮವಾಗಿರುತ್ತದೆ.

**ವೃಷಭ** ಆಕರ್ಷಕವಾದ ಮತ್ತು ನಿಮ್ಮನ್ನು ಶಾಂತವಾಗಿರಿಸುವ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಿ. ನೀವು ಇತರರ ಮೇಲೆ ಹೆಚ್ಚು ಖರ್ಚು ಮಾಡಬಯಸುತ್ತೀರಿ. ನಿಮ್ಮ ಮನೆಯ ವಾತಾವರಣವನ್ನು ಬದಲಾಯಿಸುವ ಮೊದಲು ಅದಕ್ಕೆ ಎಲ್ಲರ ಅನುಮೋದನೆಯಿದೆಯೆಂದು ಖಾತ್ರಿಪಡಿಸಿಕೊಳ್ಳಿ.

**ಮಿಥುನ** ಚಿಂತನೆ, ಶಕ್ತಿಯನ್ನು ನೀವು ವಾಸ್ತವವಾಗಿ ಏನನ್ನು ನೋಡಬಯಸುತ್ತೀರೋ ಅದನ್ನು ಸಾಧಿಸುವಲ್ಲಿ ನಿರ್ದೇಶಿಸಿ. ಇದುವರೆಗೆ ನಿಮ್ಮ ಸಮಸ್ಯೆಯಂದರೆ ಪ್ರಯತ್ನಿಸದೇ ಕೇವಲ ಆಸೆಪಡುತ್ತೀರಿ. ಸಣ್ಣ ಉದ್ಯೋಗವನ್ನು ಮಾಡುವ ಜನರು, ಇಂದು ತಮ್ಮ ಆಪ್ತರಿಂದ ಯಾವುದೇ ಸಲಹೆಯನ್ನು ಪಡೆಯಬಹುದು.

**ಕರ್ಕಾಟಕ** ಶಾಂತವಾಗಿ ಒತ್ತಡ ಮುಕ್ತವಾಗಿರಿ. ಹಣಕ್ಕೆ ಸಂಬಂಧಿಸಿದ ಯಾವುದೇ ವಿಷಯ ನ್ಯಾಯಾಲಯ ಪ್ರಕರಣದಲ್ಲಿ ಸಿಲುಕಿಕೊಂಡಿದ್ದರೆ, ಇಂದು ನೀವು ಅದರಲ್ಲಿ ವಿಜಯವನ್ನು ಪಡೆಯಬಹುದು, ನೀವು ಹಣದ ಲಾಭವನ್ನು ಪಡೆಯಬಹುದು. ನಿಮ್ಮ ಜ್ಞಾನದಾಹ ನಿಮಗೆ ಸ್ನೇಹಿತರನ್ನು ಪಡೆಯಲು ಸಹಾಯ ಮಾಡುತ್ತದೆ.

**ಸಿಂಹ** ಅಭಿಪ್ರಾಯ ನೀಡುವಾಗ ಇತರರ ಭಾವನೆಗಳನ್ನು ವಿಶೇಷವಾಗಿ ಪರಿಗಣಿಸಿ. ನೀವು ಮಾಡಿದ ಯಾವುದೇ ತಪ್ಪು ನಿರ್ಧಾರ ಅವರಿಗೆ ಮಾತ್ರ ವ್ಯತಿರಿಕ್ತ ಪರಿಣಾಮ ಉಂಟುಮಾಡದೇ ನಿಮಗೂ ಮಾನಸಿಕ ಒತ್ತಡ ನೀಡುತ್ತದೆ. ಹೆಚ್ಚು ಹಣವಿಲ್ಲ ಎಂದು ಯೋಚಿಸಿದರೆ, ದೊಡ್ಡವರಿಂದ ಹಣ ಸಂಗ್ರಹಿಸುವ ಸಲಹೆ ತೆಗೆದುಕೊಳ್ಳಿ.

**ಕನ್ಯಾ** ಮಕ್ಕಳೊಂದಿಗೆ ಆಟವಾಡುವುದು ನಿಮಗೆ ಯಾವತ್ತೂ ಅದ್ಭುತ ಚಿಕಿತ್ಸೆಯ ಅನುಭವ ನೀಡುತ್ತದೆ. ಯಾವುದೇ ಅಪರಿಚಿತ ವ್ಯಕ್ತಿಯ ಸಲಹೆಯಿಂದ ಎಲ್ಲಾದರೂ ಹೂಡಿಕೆ ಮಾಡಿರುವ ಜನರಿಗೆ, ಇಂದು ಆ ಹೂಡಿಕೆಯಿಂದ ಪ್ರಯೋಜನವನ್ನು ಪಡೆಯುವ ಪೂರ್ತಿ ಸಾಧ್ಯತೆ ಇದೆ.

**ತುಲಾ** ಬಿಡುವಿರದ ಕಾರ್ಯಕ್ರಮದ ಹೊರತಾಗಿಯೂ ಆರೋಗ್ಯ ಚೆನ್ನಾಗಿರುತ್ತದಾದರೂ ಬದುಕನ್ನು ಲಘುವಾಗಿ ತೆಗೆದುಕೊಳ್ಳಬೇಡಿ, ಜೀವನದ ರಕ್ಷಣೆ ನಿಜವಾದ ಹೊಣೆಗಾರಿಕೆಯೆಂದು ಅರ್ಥ ಮಾಡಿಕೊಳ್ಳಿ. ಹಣ ನಿಮ್ಮ ಕೈಯಲ್ಲಿ ಉಳಿಯುದಿಲ್ಲ. ಹಣ ಉಳಿಸುವಲ್ಲಿ ತೊಂದರೆಗಳನ್ನು ಎದುರಿಸಬೇಕಾಗುತ್ತದೆ.

**ವೃಶ್ಚಿಕ** ನೀವು ವಿಶ್ರಾಂತಿ ಪಡೆಯಲು ಸಾಧ್ಯವಾಗುವ ಒಂದು ದಿನ. ನಿಮ್ಮ ಸ್ನಾಯುಗಳಿಗೆ ವಿಶ್ರಾಂತಿ ನೀಡಲು ತೈಲದಿಂದ ನಿಮ್ಮ ದೇಹಕ್ಕೆ ಮಸಾಜ್ ಮಾಡಿ. ದಿನದಲ್ಲಿ ನಂತರ ಹಣಕಾಸು ಪರಿಸ್ಥಿತಿಗಳು ಸುಧಾರಿಸುತ್ತವೆ. ನೀವು ಕೆಲಸದ ಜಾಗದಲ್ಲಿ ಅತಿಯಾಗಿ ಶ್ರಮಪಡುವುದರಿಂದ ಕೌಟುಂಬಿಕ ಅಗತ್ಯಗಳು ನಿರ್ಲಕ್ಷಿಸಲ್ಪಡುತ್ತವೆ

**ಧನಸ್ಸು** ಸಂತೋಷದಿಂದಿರಲು ಆಕಾಂಕ್ಷೆಗಳನ್ನು ಪರಿಶೀಲಿಸಿ. ಯೋಗದ ಸಹಾಯ ತೆಗೆದುಕೊಳ್ಳಿ ಇದು ನಿಮಗೆ ದೈಹಿಕವಾಗಿ, ಮಾನಸಿಕವಾಗಿ ಮತ್ತು ಆಧ್ಯಾತ್ಮಿಕವಾಗಿ ನಿಮ್ಮ ಮನೋಧರ್ಮವನ್ನು ಸುಧಾರಿಸುವ ಆರೋಗ್ಯಕರ ಜೀವನ ಕಲೆ ಕಲಿಸುತ್ತದೆ. ನಿಮ್ಮ ಹಳೆಯ ಯಾವುದೇ ರೋಗ ಇಂದು ನಿಮ್ಮನ್ನು ಕಾಡಬಹುದು.

**ಮಕರ** ನಿಮ್ಮ ಭಾವನೆಗಳನ್ನು ನಿಯಂತ್ರಿಸಬೇಕು ಮತ್ತು ನಿಮ್ಮ ಭಯವನ್ನು ಸಾಧ್ಯವಾದಷ್ಟೂ ಬೇಗ ತೊಡೆದುಹಾಕಬೇಕು ಏಕೆಂದರೆ ಇವು ತಕ್ಷಣವೇ ನಿಮ್ಮ ಆರೋಗ್ಯವನ್ನು ಬಾಧಿಸಬಹುದು ಮತ್ತು ಒಳ್ಳೆಯ ಆರೋಗ್ಯವನ್ನು ಅನುಭವಿಸುವ ನಿಮ್ಮ ಹಾದಿಯಲ್ಲಿ ಅಡ್ಡ ಬರಬಹುದು. ಷೇರು ಮಾರುಕಟ್ಟೆಯಲ್ಲಿ ಹಣ ಕಳೆದುಕೊಳ್ಳಬಹುದು.

**ಕುಂಭ** ಭರವಸೆ ಒಂದು ಸಮೃದ್ಧ, ಸೂಕ್ಷ್ಮ ಪರಿಮಳಯುಕ್ತ, ಬೆರಗುಗೊಳಿಸುವ ಹೂವಿನ ಹಾಗೆ ಅರಳುತ್ತದೆ. ವಿದೇಶದಲ್ಲಿ ಮಲಗಿರುವ ನಿಮ್ಮ ಭೂಮಿಯನ್ನು ಉತ್ತಮ ಬೆಲೆಗೆ ಮಾರಾಟ ಮಾಡಬಹುದು, ಅದು ನಿಮಗೆ ಲಾಭದಾಯಕವಾಗಲಿದೆ. ಕುಟುಂಬ ಸದಸ್ಯರೆಡೆಗೆ ಸರ್ವಾಧಿಕಾರಿ ಧೋರಣೆ ಅನುಪಯುಕ್ತ ವಾದ ಪ್ರಾರಂಭಿಸುತ್ತದೆ.

**ಮೀನ** ಹಲವಾರು ಒತ್ತಡಗಳು ಮತ್ತು ಭಿನ್ನಾಭಿಪ್ರಾಯಗಳನ್ನು ಎದುರಿಸಬೇಕಾಗಬಹುದು ಹಾಗೂ ಇದು ನಿಮಗೆ ಕಿರಿಕಿರಿ, ಆತಂಕದ ಭಾವನೆಗಳನ್ನು ಉಂಟುಮಾಡಬಹುದು. ಸ್ವಲ್ಪ ಹೆಚ್ಚು ಹಣ ಮಾಡಲು ನಿಮ್ಮ ನವೀನ ಕಲ್ಪನೆಯನ್ನು ಬಳಸಿ. ಕುಟುಂಬದಲ್ಲಿ ಕೆಲವು ಸ್ತ್ರೀ ಸದಸ್ಯರ ಆರೋಗ್ಯ ಚಿಂತೆಗೆ ಕಾರಣವಾಗಬಹುದು.

### ನಾನು 24ಕ್ಯಾರೇಟ್ ಚಿನ್ನ, ನಾಡಗೌಡರಿಗೆ ಸಚಿವ ಸ್ಥಾನ ಕೇಳುವ ಹಕ್ಕಿಲ್ಲ: ಇಂಡಿ ಶಾಸಕ

# ಇಂಡಿ ಕ್ಷೇತ್ರದ ಕಾಂಗ್ರೇಸ್ ಶಾಸಕ ಯಶವಂತರಾಯಗೌಡ ಪಾಟೀಲ ತಿರುಗೇಟು

• **ಉದಯವಾಹಿನಿ, ವಿಜಯಪುರ**

ಶಾಸಕರು ಸಚಿವ ಸ್ಥಾನ ಕೇಳಬಾರದು ಎಂದೇ ನಿಗಮ, ಮಂಡಳಿ ಅಧ್ಯಕ್ಷ ಸ್ಥಾನ ನೀಡಲಾಗಿದೆ. ಹೀಗಾಗಿ ಮುದ್ದೇಬಿಹಾಳ ಶಾಸಕ ಅಪ್ಪಾಜಿ ನಾಡಗೌಡ ಅವರಿಗೆ ಈಗ ಸಚಿವ ಸ್ಥಾನ ಕೇಳುವ ಹಕ್ಕಿಲ್ಲ ಎಂದು ಇಂಡಿ ಕ್ಷೇತ್ರದ ಕಾಂಗ್ರೇಸ್ ಶಾಸಕ ಯಶವಂತರಾಯಗೌಡ ಪಾಟೀಲ ತಿರುಗೇಟು ನೀಡಿದರು. ನಗರದಲ್ಲಿ ಸೋಮವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಸಿ.ಎಸ್.ನಾಡಗೌಡರು ಈಗಾಗಲೇ ಎರಡು ಬಾರಿ ಸಚಿವರಾಗಿದ್ದಾರೆ. ಅಲ್ಲದೇ, ಹಾಲಿ ನಿಗಮ-ಮಂಡಳಿ ಅಧ್ಯಕ್ಷ ಸ್ಥಾನದಲ್ಲಿದ್ದಾರೆ. ಈಗ ಸಚಿವ ಸ್ಥಾನ ಕೇಳುವುದರಲ್ಲಿ ಅರ್ಥವಿಲ್ಲ ಎಂದರು.

ಇಂಡಿ ಮತಕ್ಷೇತ್ರಕ್ಕೆ ಇಲ್ಲಿಯವರೆಗೆ ಸಚಿವ ಸ್ಥಾನ ದೊರಕಿಲ್ಲ. ಈ ಕೊರತೆ ಮುಂಬರುವ ಸಚಿವ ಸಂಪುಟ ಪುನರ್‌ರಚನೆ ವೇಳೆ ನೀಗುವ ವಿಶ್ವಾಸವಿದೆ. ಪಕ್ಷದ ವರಿಷ್ಠರು ಈ ಹಿಂದೆ ನನಗೆ ಸಚಿವ ಸ್ಥಾನ ನೀಡುವ ಭರವಸೆ ನೀಡಿದ್ದಾರೆ. ಹೀಗಾಗಿ ನಿಗಮ, ಮಂಡಳಿ ಅಧ್ಯಕ್ಷ ಸ್ಥಾನದ ಅವಕಾಶ ಬಂದಾಗ ನಯವಾಗಿ ತಿರಸ್ಕರಿಸಿದ್ದೇನೆ. ಈ ಹಿಂದೆ ಪಕ್ಷದ ವರಿಷ್ಠರು ಕೊಟ್ಟಿರುವ ಆಶ್ವಾಸನೆಯಂತೆ ಸಚಿವ ಸ್ಥಾನ ನೀಡಲಿ ಎಂದು ಹಕ್ಕೊತ್ತಾಯ ಮಾಡಿದರು. 40 ವರ್ಷಗಳ ಕಾಲ ನಮ್ಮ ಮನೆತನ ಕಾಂಗ್ರೇಸ್ ಪಕ್ಷದಲ್ಲಿ ರಾಜಕಾರಣ ಮಾಡಿದೆ. ನಾನು ಶುದ್ಧ ಕಾಂಗ್ರೇಸ್ಸಿಗ. 22 ಕ್ಯಾರೇಟ್ ಅಲ್ಲ 24 ಕ್ಯಾರೇಟ್ ಶುದ್ಧ ಕಾಂಗ್ರೇಸ್ಸಿಗ, ನಾನು ಬೇರೆ ಪಕ್ಷದಿಂದ ಬಂದಿಲ್ಲ, ಇಲ್ಲಿಯೇ ಇರುವೆ. ಇದುವರೆಗೂ ಸಚಿವ ಸ್ಥಾನಮಾನ ಸಿಕ್ಕಿಲ್ಲ. ಆದರೆ, ಜಿಲ್ಲೆಯಲ್ಲಿ ಬೇರೆ ಪಕ್ಷದಿಂದ ಕಾಂಗ್ರೇಸ್‌ಗೆ ಬಂದವರಿಗೆ ಈಗಾಗಲೇ ಸಚಿವ ಸ್ಥಾನ ದೊರೆತಿದೆ ಎಂದು ಶಾಸಕ ಅಪ್ಪಾಜಿ ನಾಡಗೌಡ ಮತ್ತು ಸಚಿವ ಶಿವಾನಂದ ಪಾಟೀಲ ವಿರುದ್ಧ ಪರೋಕ್ಷವಾಗಿ ಅಸಮಾಧಾನ ಹೊರಹಾಕಿದರು.

ಸಿಎಂ ಅವರು ಇತ್ತೀಚೆಗೆ ಇಂಡಿಗೆ ಬಂದಾಗ ನನ್ನ ಕ್ಷೇತ್ರದ ಜನತೆ ಸಚಿವ ಸ್ಥಾನದ ಬೇಡಿಕೆ ಮಂಡಿಸುವ ಆಶಯ ವ್ಯಕ್ತಪಡಿಸಿದಾಗ ನಾನೇ ಅವರನ್ನು ಕೈ ಮುಗಿದು ತಡೆದಿರುವೆ, ನಾನು ಗೌರವಾನ್ವಿತ ರಾಜಕಾರಣಿ, ಹೀಗಾಗಿ ಯಾವ ಗೊಂದಲ ಉಂಟಾಗದಂತೆ ನೋಡಿಕೊಂಡಿರುವೆ ಎಂದರು. ಸಕ್ಕರೆ ಕಾರ್ಖಾನೆ ಹಾಗೂ ಕಬ್ಬು ಬೆಳೆಗಾರರ ಹಿತ ಎರಡು ಮುಖ್ಯ. ಆದರೆ, ಕೇಂದ್ರ ಸರ್ಕಾರದ ನೀತಿಗಳಿಂದ ಸಹಕಾರ ವಲಯದ ಸಕ್ಕರೆ ಕಾರ್ಖಾನೆಗಳಿಗೆ ದೊಡ್ಡ ಆತಂಕ ಎದುರಾಗಿದೆ ಎಂದರು.

ಇಳುವರಿ ಆಧರಿಸಿ ಎಫ್‌ಆರ್‌ಪಿ ನಿಗದಿಯಾಗುತ್ತದೆ. ಭೀಮಾ ತೀರದಲ್ಲಿ ಕಬ್ಬಿನ ರಿಕವರಿ ಪ್ರಮಾಣ ಕಡಿಮೆ, ಹೀಗಾಗಿ ಎಫ್‌ಆರ್‌ಪಿ ನಿಗದಿಗೊಳಿಸಲು ಏಕರೂಪದ ಮಾನದಂಡ ವಿಧಿಸುತ್ತಿರುವುದು ಸರಿಯಲ್ಲ, ಭೌಗೋಳಿಕವಾಗಿ ಭಿನ್ನವಾದ ಪರಿಸ್ಥಿತಿ ಇದೆ ಹೀಗಾಗಿ ಎಂಎಸ್‌ಪಿ ಘೋಷಣೆ ಮಾಡಬೇಕು ಎಂದರು.


ಉದಯವಾಹಿನಿ ಚಿತ್ರ

**ಸಂಕಷ್ಟದಲ್ಲಿ ಸಕ್ಕರೆ ಕಾರ್ಖಾನೆಗಳು**

ಸಕ್ಕರೆ ಕಾರ್ಖಾನೆಗಳಿಗೆ ಸಂಬಂಧಿಸಿದಂತೆ ಕೇಂದ್ರ ಸರ್ಕಾರ ನಿಯಮಾವಳಿ ಪರಿಷ್ಕರಣೆ ಮಾಡಬೇಕು, ಇಲ್ಲವಾದರೆ ಕೈಮಗ್ಗಗಳ ಮಾದರಿಯಲ್ಲಿ ಸಕ್ಕರೆ ಕಾರ್ಖಾನೆಗಳು ಮುಚ್ಚುವಂತಹ ಪರಿಸ್ಥಿತಿ ನಿರ್ಮಾಣವಾಗುತ್ತದೆ.


– ಯಶವಂತರಾಯಗೌಡ ಪಾಟೀಲ, ಶಾಸಕ

**ಇಥೆನಾಲ್ ಆಮದು ಬೇಡ**

ಈಥೆನಾಲ್ ಸಂಬಂಧಿಸಿದಂತೆ ಕೇಂದ್ರ ಸರ್ಕಾರ ರೂಪಿಸಿರುವ ನೀತಿ ನಿಯಮಾವಾವಳಿಗಳು ದೊಡ್ಡ ತೊಡಕಾಗಿವೆ, ಈ ಎಲ್ಲವೂ ಮಾರ್ಪಾಡಬೇಕು, ಈ ಹಿಂದೆ ಈಥೆನಾಲ್ ಉತ್ಪಾದನೆಗೆ ಪ್ರೋತ್ಸಾಹ ನೀಡಿದ ಪರಿಣಾಮ ದೊಡ್ಡ ಮಟ್ಟದಲ್ಲಿ ಈಥೆನಾಲ್ ಉತ್ಪಾದನೆಯಾಗುತ್ತಿದೆ. ಆದರೆ, ಬೆಲೆ ಕಡಿಮೆ ಎಂದು ಅಮೆರಿಕಾದಿಂದ ಆಮದು ಮಾಡಿಕೊಳ್ಳಲು ಮುಂದಾಗಿರುವುದು ದೊಡ್ಡ ಆತಂಕ ಸೃಷ್ಟಿ ಮಾಡಿದೆ ಎಂದರು. ಉತ್ಪಾದನೆ ಮಾಡಿದ ಈಥೆನಾಲ್ ಅನ್ನು ಕೇಂದ್ರ ಸರ್ಕಾರ ಖರೀದಿ ಮಾಡುತ್ತಿಲ್ಲ. ಈ ರೀತಿಯಾದರೆ ಉತ್ಪಾದನೆ ಮಾಡಲು ಉತ್ತೇಜನ ನೀಡಿದ್ದು ಯಾಕೆ ಎಂದು ಪ್ರಶ್ನಿಸಿದರು.

## ಬ್ರಿಮ್ಸ್‌ವೈದ್ಯರಿಗೆ 9 ತಿಂಗಳಿಂದ ನೋ ಸ್ಯಾಲರಿ

### ಇತ್ತ ನೋಟಿಸ್ ನೀಡದೇ 40 ವೈದ್ಯರು ಕೆಲಸದಿಂದ ವಜಾ



ಉದಯವಾಹಿನಿ ಚಿತ್ರ

• **ಉದಯವಾಹಿನಿ, ಬೀದರ್**

ಬ್ರಿಮ್ಸ್ ಆಸ್ಪತ್ರೆಯಲ್ಲಿ ಕಳೆದ 7-8 ವರ್ಷಗಳಿಂದ ಗುತ್ತಿಗೆ ಆಧಾರದ ಮೇಲೆ ಕೆಲಸ ಮಾಡುತ್ತಿದ್ದ 40ಕ್ಕೂ ಹೆಚ್ಚು ವೈದ್ಯರಿಗೆ ಕಳೆದ 9 ತಿಂಗಳಿನಿಂದ ಸಂಬಳ ನೀಡಿಲ್ಲ, ಇದೀಗ ನೋಟಿಸ್ ನೀಡದೇ ಏಕಾಏಕಿ ವಜಾಗೊಳಿಸಿದ್ದಾರೆ.

ಕೋವಿಡ್ ಸಮಯದಲ್ಲಿ ಗುತ್ತಿಗೆ ವೈದ್ಯರು ತಮ್ಮ ಪ್ರಾಣವನ್ನೇ ಒತ್ತೆ ಇಟ್ಟು ಕೆಲಸ ಮಾಡಿದ್ದರು. ಅದರಂತೆ ಪ್ರತಿ ವರ್ಷವೂ ಅವರ ಗುತ್ತಿಗೆ ಮುಗಿದ ಮೇಲೆ ಮತ್ತೆ ಗುತ್ತಿಗೆಯನ್ನು ಎಂದಿನಂತೆ ಮುಂದುವರಿಸುತ್ತಿದ್ದರು. ಆದರೆ ಈ ಬಾರಿ 9 ತಿಂಗಳ ಸಂಬಳವನ್ನೂ ನೀಡದೇ ಏಕಾಏಕಿ 40 ವೈದ್ಯರನ್ನು ಕೆಲಸದಿಂದ ತೆಗೆದು ಹಾಕಿದ್ದಾರೆ. ಇದರಿಂದ ವೈದ್ಯರು ಅಕ್ಷರಶಃ ಕಂಗಾಲಾಗಿದ್ದಾರೆ.

ಈಗಾಗಲೇ ಕೆಲವು ವೈದ್ಯರು ಕರ್ತವ್ಯ ಬಿಡುಗಡೆ ಪತ್ರ ತೆಗೆದುಕೊಂಡಿದ್ದು, ಇನ್ನೂ ಕೆಲ ವೈದ್ಯರು ಬಿಡುಗಡೆ ಪತ್ರ ತೆಗೆದುಕೊಳ್ಳದೇ ಬ್ರಿಮ್ಸ್ ಮತ್ತು ಸರ್ಕಾರದ ವಿರುದ್ಧ ಆಕ್ರೋಶ ಹೊರಹಾಕಿದ್ದಾರೆ. ನಮ್ಮಗೆ ಬರೋಬ್ಬರಿ 9 ತಿಂಗಳಿಂದ ಸಂಬಳ ನೀಡಿಲ್ಲ, ಜೊತೆಗೆ ಈಗ ಯಾರಿಗೂ ಹೇಳದೇ, ಕೇಳದೇ ನಮ್ಮನ್ನ ಏಕಾಏಕಿ ಕೆಲಸದಿಂದ ತೆಗೆದುಹಾಕಿದ್ದಾರೆ ಎಂದು ವೈದ್ಯರು ಕಿಡಿಕಾರಿದ್ದಾರೆ.

## ಬಾಳೂರು-ಹೊರನಾಡು ರಸ್ತೆ ಗುಂಡಿ: ನಿತ್ಯವೂ ಅಪಘಾತ

• **ಉದಯವಾಹಿನಿ, ಮೂಡಿಗೆರೆ**

ತಾಲ್ಲೂಕಿನ ಬಾಳೂರಿನಿಂದ ಹೊರನಾಡಿಗೆ ಸಂಪರ್ಕ ಕಲ್ಪಿಸುವ ಹೆದ್ದಾರಿಯಲ್ಲಿ ಗುಂಡಿಯಾಗಿ ವಾಹನ ಸಂಚರಿಸಲು ಸಾಧ್ಯವಾಗದ ಪರಿಸ್ಥಿತಿ ಉಂಟಾಗಿದೆ ಎಂದು ಕೆಳಗೂರಿನ ಮಾನವ ಹಕ್ಕುಗಳು ಹಾಗೂ ಭ್ರಷ್ಟಾಚಾರ ನಿಗ್ರಹ ಸಂಸ್ಥೆ ಪದಾಧಿಕಾರಿಗಳು ದೂರಿದ್ದಾರೆ.

ಸಂಸ್ಥೆಯ ಶಿವರಾಜ್ ಹೇಳಿಕೆ ನೀಡಿ, ಬಾಳೂರಿನಿಂದ ಹೊರನಾಡು ಗ್ರಾಮದವರೆಗೆ 50 ಕಿ.ಮೀ ರಸ್ತೆ ಸಂಪೂರ್ಣ ಗುಂಡಿಯಾಗಿದೆ. ವಾಹನಗಳು ಸಂಚರಿಸಲು ಹರಸಾಹಸ ಪಡಬೇಕಾಗಿದೆ. ಸಂಸ್ಸೆ ಗ್ರಾಮದಲ್ಲಿ ಈ ರಸ್ತೆಯ ಮಧ್ಯಭಾಗದಲ್ಲಿ ಬೃಹತ್ ಗಾತ್ರದ ಹೊಂಡವಾಗಿ ಹಲವಾರು ವಾಹನಗಳು ಗುಂಡಿಯೊಳಗೆ ಬಿದ್ದು ವಾಹನಗಳು ಜಖಂಗೊಂಡಿವೆ. ಬೈಕ್ ಸವಾರರು ಗುಂಡಿಗೆ ಸಿಲುಕಿ ಬಿದ್ದು ಗಂಭೀರ ಗಾಯಗೊಂಡಿದ್ದಾರೆ. ರಸ್ತೆ ವಿಪರೀತ ಗುಂಡಿಯಾಗಿರುವ ಕಾರಣ ಕೆಎಸ್‌ಆರ್ ಟಿಸಿ ಹಾಗೂ ಖಾಸಗಿ ಬಸ್ ಗಳು ಸಮಯಕ್ಕೆ ಸರಿಯಾಗಿ ಸಂಚರಿಸುತ್ತಿಲ್ಲ. ಇದರಿಂದ ರೋಗಿಗಳು, ವಿದ್ಯಾರ್ಥಿಗಳು ಪರದಾಡಬೇಕಾಗಿದೆ. ಕಳಸ, ಮೂಡಿಗೆರೆ ತಾಲ್ಲೂಕು ಕೇಂದ್ರಕ್ಕೆ ಈ ಭಾಗದ ಸಾರ್ವಜನಿಕರು ಇದೇ ರಸ್ತೆಯಲ್ಲಿ ಪ್ರತಿನಿತ್ಯ ಸಂಚರಿಸಬೇಕಾಗಿದೆ. ಖಾಸಗಿ ವಾಹನಗಳು ಜಖಂಗೊಳ್ಳುವ ಭಯದಲ್ಲಿ ಬಾಡಿಗೆ ವಾಹನಗಳ ಮಾಲೀಕರು ಸಂಚರಿಸಲು ಹಿಂದೇಟು ಹಾಕುತ್ತಿದ್ದು, ಸ್ಥಳೀಯರು ಸಮಸ್ಯೆ ಎದುರಿಸುವಂತಾಗಿದೆ ಎಂದು ದೂರಿದ್ದಾರೆ.

ಕಳಸ, ಹೊರನಾಡು, ಕುದುರೆಮುಖ, ಉಡುಪಿ ಸೇರಿದಂತೆ ಬಹುತೇಕ ಕಡೆ ತೆರಳುವ ಪ್ರವಾಸಿಗರು ಇದೆ ರಸ್ತೆಯಲ್ಲಿ ಸಂಚರಿಸಬೇಕಾಗಿದೆ. ಈ ರಸ್ತೆಯಲ್ಲಿ ನಿತ್ಯವೂ ಅಪಘಾತಗಳು ಸಂಭವಿಸುತ್ತಿವೆ. ಕೂಡಲೇ ಈ ರಸ್ತೆಯನ್ನು ಅಭಿವೃದ್ಧಿಗೊಳಿಸುವಂತೆ ಶಾಸಕಿ ನಯನಾ ಮೋಟಮ್ಮ ಅವರಿಗೆ ಮನವಿ ಸಲ್ಲಿಸಲಾಗಿದೆ.

## ಅಂಕೋಲ ಪುರಸಭೆ ಆಡಳಿತಾಧಿಕಾರಿ ಮರು ನಿಯೋಜನೆ ಮಾಡಿದರೆ ಸಾಮೂಹಿಕ ರಾಜೀನಾಮೆ: ಪುರಸಭೆ ಅಧ್ಯಕ್ಷ

• **ಉದಯವಾಹಿನಿ, ಕಾರವಾರ**

ಆಡಳಿತ ದುರುಪಯೋಗ, ಭ್ರಷ್ಟಾಚಾರ ಆರೋಪ ಹೊತ್ತು ಅಮಾನತಾಗಿದ್ದ ಅಂಕೋಲದ ಪುರಸಭೆ ಕಮಿಷನರ್ ಹಾಗೂ ಮುಖ್ಯ ಇಂಜಿನಿಯರ್‌ರನ್ನು ಮರು ನೇಮಕ ಮಾಡಿದ್ದಲ್ಲಿ ಸಾಮೂಹಿಕ ರಾಜೀನಾಮೆ ನೀಡುವುದಾಗಿ ಅಧ್ಯಕ್ಷರು ಹಾಗೂ ಸದಸ್ಯರು ಜಿಲ್ಲಾಧಿಕಾರಿಗಳಿಗೆ ಪತ್ರ ಬರೆದಿದ್ದಾರೆ.


ಉದಯವಾಹಿನಿ ಚಿತ್ರ

ಈ ಕುರಿತು ಇಂದು ಮಾಧ್ಯಮಗಳಿಗೆ ಹೇಳಿಕೆ ಬಿಡುಗಡೆ ಮಾಡಿದ ಅಂಕೋಲ ಪುರಸಭೆ ಅಧ್ಯಕ್ಷ ಸೂರಜ್ ಎಂ.ನಾಯ್ಕ, ಪುರಸಭೆಯ ಈ ಹಿಂದಿನ ಮುಖ್ಯಾಧಿಕಾರಿ ಹೆಚ್.ಅಕ್ಷತಾ ಹಾಗೂ ಕಿರಿಯ ಅಭಿಯಂತರರಾದ ಶಲ್ಯಾ ನಾಯ್ಕ ಅವರು ಹಿಂದಿನಿಂದಲೂ ಆಡಳಿತ ಮಂಡಳಿಯ ಗಮನಕ್ಕೆ ತರದೇ ಹಲವು ಕಾನೂನು ಬಾಹಿರವಾಗಿ ಕರ್ತವ್ಯವನ್ನು ನಿರ್ವಹಿಸಿ, ಕರ್ತವ್ಯಲೋಪ ಎಸಗಿದ್ದರಿಂದ ಜಿಲ್ಲಾಧಿಕಾರಿ ಅವರು ಪ್ರಾಥಮಿಕ ತನಿಖೆ ನಡೆಸಿ ಕಾರಣ ಕೇಳಿ ನೋಟಿಸ್ ನೀಡಿ ಸಾಕಷ್ಟು ಕಾಲಾವಕಾಶ ನೀಡಿದ ನಂತರ ಮುಖ್ಯಾಧಿಕಾರಿ ಹಾಗೂ ಕಿರಿಯ ಇಂಜಿನಿಯರನ್ನು ಅಮಾನತು ಮಾಡಿ ಆದೇಶ ಹೊರಡಿಸಿದ್ದರು. ಆದರೆ ಅಮಾನತು ಆದ ಅಧಿಕಾರಿಗಳು ನ್ಯಾಯಾಲದ ಮೊರೆ ಹೋಗಿ ಆದೇಶಕ್ಕೆ ತಡೆ ತಂದಿದ್ದು ಇರುತ್ತದೆ. ಆದರೆ, ನ್ಯಾಯಾಲಯ ಅಮಾನತು ಆದ ಸ್ಥಳದಲ್ಲಿಯೇ ಮರುನಿಯೋಜನೆ ಮಾಡಬೇಕು ಎನ್ನುವ ಕುರಿತು ಸ್ಪಷ್ಟತೆ ನೀಡಿಲ್ಲ. ಇದು ಕೇವಲ ಮಧ್ಯಂತರ ಆದೇಶವಾಗಿದೆ. ಯಾವುದೇ ಅಧಿಕಾರಿಯೂ ಕರ್ತವ್ಯಲೋಪ ಎಸಗಿ ಅದೇ ಸ್ಥಳದಲ್ಲಿ ಮುಂದುವರಿದರೆ ಸಾಕ್ಷ್ಯನಾಶ ಅಥವಾ ಪ್ರಭಾವ ಬೀರುವ ಹಿನ್ನೆಲೆಯಲ್ಲಿ ಅಮಾನತು ಮಡಲಾಗುತ್ತದೆ.

## ಅಡ್ಡಲಾಗಿ ನಿಂತ ಟ್ಯಾಂಕರ್, ಸಂಚಾರಕ್ಕೆ ಅಡಚಣೆ

• **ಉದಯವಾಹಿನಿ, ಚಿಕ್ಕಮಗಳೂರು**

ಮೂಡಿಗೆರೆ ತಾಲ್ಲೂಕಿನ ಚಾರ್ಮಾಡಿ ಘಾಟಿಯಲ್ಲಿ ಹತ್ತು ಚಕ್ರದ ಟ್ಯಾಂಕರ್ ರಸ್ತೆ ಮಧ್ಯೆ ಅಡ್ಡಲಾಗಿನಿಂತ ಪರಿಣಾಮ ಕೆಲ ಗಂಟೆಗಳ ಕಾಲ ಸಂಚಾರ ಅಸ್ತವ್ಯಸ್ತಗೊಂಡಿತ್ತು. ಬೆಂಗಳೂರಿನಿಂದ ಮಂಗಳೂರು ಕಡೆಗೆ ತೆರಳುತ್ತಿದ್ದ ಟ್ಯಾಂಕರ್ ವಾಹನ ಚಾರ್ಮಾಡಿ ತಿರುವಿನಲ್ಲಿ ನಿಯಂತ್ರಣ ತಪ್ಪಿ ರಸ್ತೆಗೆ ಅಡ್ಡಲಾಗಿ ನಿಂತಿತ್ತು. ಇದರಿಂದ ಎರಡು ಗಂಟೆಗೂ ಹೆಚ್ಚು ಕಾಲ ಘಾಟಿಯಲ್ಲಿ ಸಂಚಾರ ಸಂಪೂರ್ಣ ಸ್ಥಗಿತವಾಗಿತ್ತು. ಬಳಿಕ ಟ್ಯಾಂಕರನ್ನು ಬದಿಗೆ ಸರಿಸಿ ಒಂದೇ ಬದಿಯಲ್ಲಿ ಎರಡೂ ಕಡೆಯ ವಾಹನ ಸಂಚಾರಕ್ಕೆ ಅವಕಾಶ ಕಲ್ಪಿಸಿ ಕೊಡಲಾಯಿತು. ಇದರಿಂದ ಇಡೀ ದಿನ ಘಾಟಿಯಲ್ಲಿ ವಾಹನ ಸಂಚಾರಕ್ಕೆ ಅಡ್ಡಿಯಾಗಿತ್ತು. ಬಸ್‌ಗಳು ಸರಿಯಾದ ಸಮಯಕ್ಕೆ ತಲುಪದೇ ಪ್ರಯಾಣಿಕರು ಪರದಾಡಿದರು ಎಂದು ಸ್ಥಳೀಯರು ತಿಳಿಸಿದರು. ಘಾಟಿಯಲ್ಲಿ ಭಾರಿ ವಾಹನಗಳನ್ನು ಬಿಡಬಾರದು ಎಂದು ಸಂಚಾರ ದಟ್ಟಣೆಯಲ್ಲಿ ಸಿಲುಕಿದ್ದ ವಾಹನ ಸವಾರ ಸುಬ್ರಮಣ್ಯ ಅವರು ಆಕ್ರೋಶ ವ್ಯಕ್ತಪಡಿಸಿದರು.

## 2000ರೂ.ಗಾಗಿ ಸ್ನೇಹಿತನನ್ನೇ ಕೊಂದು ಪೊಲೀಸರಿಗೆ ಶರಣು

• **ಉದಯವಾಹಿನಿ, ಬೆಳಗಾವಿ**

ಕೇವಲ 2000ರೂಗೆ ಸ್ನೇಹಿತನನ್ನೇ ಕೊಲೆ ಮಾಡಿದ ಆರೋಪಿ ಪೊಲೀಸ್ ಠಾಣೆ ಹೋಗಿ ಶರಣಾದ ಘಟನೆ ಜಿಲ್ಲೆಯ ಬೈಲಹೊಂಗಲ ತಾಲ್ಲೂಕಿನ ಗಿರಿಯಾಲ ಗ್ರಾಮದಲ್ಲಿ ಘಟನೆ ನಡೆದಿದೆ. ಗಿರಿಯಾಲ ಗ್ರಾಮದ ಮಂಜುನಾಥ ಗೌಡರ (30) ಕೊಲೆಯಾದ ದುರ್ದೈವಿಯಾಗಿದ್ದು, ದಯಾನಂದ ಗುಂಡ್ಲೂರ ಬಂಧಿತವ ಆರೋಪಿ. ಕಳೆದ ವಾರ ದಯಾನಂದ 2 ಸಾವಿರ ಹಣ ಸಾಲವನ್ನಾಗಿ ಸ್ನೇಹಿತ ಮಂಜುನಾಥ ಬಳಿ ಪಡೆದಿದ್ದ. ಒಂದು ವಾರದೊಳಗೆ ಹಣ ಮರಳಿಸುವುದಾಗಿ ಹೇಳಿದ್ದ. ಆದರೆ ಇದರ ಬಗ್ಗೆ ಮಾತನಾಡದೆ ದಯಾನಂದ ಸುಮನಾಗಿದ್ದ.

ರಾತ್ರಿ ಸಾಲದ ಹಣ ನೀಡುವಂತೆ ಮಂಜುನಾಥ ಕೇಳಿದ್ದ ಆದರೆ ದಯಾನಂದ ಜಗಳ ಆರಂಭಿಸಿದ್ದ. ವಾಗ್ವಾದ ನಡೆದು ಇಬ್ಬರ ಜಗಳ ವಿಕೋಪಕ್ಕೆ ತಿರುಗಿತ್ತು. ಇಬ್ಬರನ್ನು ಬಿಡಿಸಿ ಗ್ರಾಮಸ್ಥರು ಮನೆಗೆ ಕಳಿಸಿದ್ದರು. ಆದರೆ ರಾತ್ರಿ ನಡೆದ ಜಗಳದ ಸಿಟ್ಟಿನಲ್ಲೇ ಬೆಳಗಿನ ಜಾವ ಎದುರಾದ ಮಂಜುನಾಥನ ಮೇಲೆ ಕೊಡ್ಲಿಯಿಂದ ಹೊಡೆದು ದಯಾನಂದ ಪರಾರಿಯಾಗಿದ್ದಾನೆ. ತೀವ್ರ ಗಾಯಗೊಂಡ ಮಂಜುನಾಥ ರಕ್ತಸ್ರಾವದಿಂದ ಆಸ್ಪತ್ರೆಗೆ ಸಾಗಿಸುವ ಮುನ್ನವೇ ಉಸಿರು ಚಲ್ಲಿದ್ದಾನೆ. ಮೊಂಜುನಾಥ ಸಾವನ್ನಪ್ಪಿದ ವಿಷಯ ತಿಳಿಯುತ್ತಿದಂತೆ ಪೊಲೀಸ್ ಠಾಣೆಗೆ ಬಂದು ದಯಾನಂದ ಶರಣಾಗಿದ್ದಾನೆ. ಬೈಲಹೊಂಗಲ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಗುರುಗಳಿಗಿಂತಲೂ ಶಿಷ್ಯ ಹೆಚ್ಚೆಚ್ಚು ಸಾಧನೆ ಮಾಡಿದಾಗ ಹೆಮ್ಮೆ

• **ಉದಯವಾಹಿನಿ ಗದಗ**



ಉದಯವಾಹಿನಿ ಚಿತ್ರ

ಗುರುಗಳಿಗೆ ತಮ್ಮ ಶಿಷ್ಯರು ತಮಗಿಂತಲೂ ಹೆಚ್ಚಿನ ಸಾಧನೆ ಮಾಡಿದಾಗ ಅಥವಾ ತಮಗಿಂತಲೂ ಹೆಚ್ಚಿನ ಹುದ್ದೆಯನ್ನು ಅಲಂಕರಿಸಿದಾಗ ಶಿಷ್ಯರ ಮೇಲೆ ಹೆಚ್ಚಿನ ಹೆಮ್ಮೆ ಅನುಸುತ್ತದೆ ಎಂದು ನಿವೃತ್ತ ಪ್ರಾ. ಅನಿಲ್ ವೈದ್ಯ ಅಭಿಪ್ರಾಯ ಪಟ್ಟರು.

ಅವರು ರವಿವಾರ ನಗರದ ಜ.ಪಂಚಾಚಾರ್ಯ ಶಿಕ್ಷಣ ಮಹಾವಿದ್ಯಾಲಯದಲ್ಲಿ ಜರುಗಿದ ಕರ್ನಾಟಕ ವಿದ್ಯಾವರ್ಧಕ ಸಮಿತಿ, ಅಳವಂಡಿ ಜ.ಪಂಚಾಚಾರ್ಯ ಶಿಕ್ಷಣ ಮಹಾವಿದ್ಯಾಲಯ ಗದಗ, 2007-08ನೇ ನಾಲಿನ ಬಿ.ಇಡಿ. ಪ್ರಶಿಕ್ಷಣಾರ್ಥಿಗಳ ವತಿಯಿಂದ ಹಮ್ಮಿಕೊಂಡ ಗುರುವಂದನಾ ಕಾರ್ಯಕ್ರಮ, ಸ್ನೇಹ ಸಮ್ಮಿಲನ ಸಂಭ್ರಮ-2025 ಸಮಾರಂಭದಲ್ಲಿ ಮಾತನಾಡಿದರು. 2007-08 ನೇ ನಾಲಿನ ಬಿ.ಇಡಿ. ಪ್ರಶಿಕ್ಷಣಾರ್ಥಿಗಳ ಸೇರಿ ಇಂತಹದೊಂದು ಭವ್ಯವಾದ ಸಮಾರಂಭವನ್ನು ಆಯೋಜಿಸಿರುವುದು ಅತ್ಯಂತ ಹೆಮ್ಮೆ ಸಂಗತಿ. ನೀವು ಯಾವುದೇ ವೃತ್ತಿಯನ್ನು ಮಾಡಲಿ ಅದರಲ್ಲಿಯೇ ಪ್ರಾಮಾಣಿಕ, ನಿಸ್ವಾರ್ಥ ಸೇವೆಯ ಮಾಡುವ ಜೊತೆಗೆ ಸಾಧನೆ ಮಾಡಬೇಕೆಂದು ಹೇಳಿದರು. ಒಳ್ಳೆಯ ಕೆಲಸವನ್ನು ಮಾಡಲು ಸಾಧ್ಯ ಆಗದಿದ್ದರೆ ಪರವಾಗಿಲ್ಲ ಆದರೆ ಕೆಟ್ಟ ಕೆಲಸವನ್ನು ಮಾಡಬಾರದು. ನಾವೆಲ್ಲ ಚನ್ನಾಗಿ ಮಾತನಾಡುವ ಅಭ್ಯಾಸವನ್ನು ರೂಢಿ ಮಾಡಿಕೊಳ್ಳಬೇಕೆಂದು ತಿಳಿಸುವ ಮೂಲಕ ಹತ್ತು ಹಲವಾರು ಹಾಸ್ಯ ಪ್ರಸಂಗಗಳನ್ನು ಉದಾಹರಣೆಯೊಂದಿಗೆ ತಿಳಿಸಿ, ಸರ್ವರನ್ನು ನಕ್ಕು ನಕ್ಕು ನಗೆಡಲಲಲ್ಲಿ ತೇಲಿಸಿದರು.

ನಿವೃತ್ತ ಪ್ರಾ. ಬಿ.ಸಿ ಉಪ್ಪಿನ ಮಾತನಾಡಿ ಸಮಾಜದಲ್ಲಿ ನಮ್ಮದೆಯಾದ ಸ್ಥಾನಮಾನಗಳನ್ನು ಕಟ್ಟಿಕೊಳ್ಳಲು ಶಿಕ್ಷಣ ತುಂಬಾ ಅವಶ್ಯಕವಾಗಿದೆ. ನಾವು ಯಾವುದೇ ವೃತ್ತಿಯಲ್ಲಿ ಇರಲಿ ಅದರಲ್ಲಿ ಶ್ರದ್ದೆ, ನಿಷ್ಠೆ ಇರಬೇಕು. ಅಂದಾಗ ನಮಗೆ ಗೌರವ ಹಾಗೂ ಪೂಜೆಯ ಭಾವನೆ ಬರುತ್ತದೆ ಎಂದು ತಿಳಿಸಿದರು. ತಾವು ಪ್ರಾಚಾರ್ಯರಾದ ಸಂದರ್ಭದಲ್ಲಿ ಅನುಭವವನ್ನು ವೇದಿಕೆಯಲ್ಲಿ ಹಂಚಿಕೊಳ್ಳುವ ಮೂಲಕ ಸಂಸ್ಥೆಯ ಕೊಡುಗೆಗಳನ್ನು ತಿಳಿಸಿದ ಅವರು ಶಿಕ್ಷಣ ಸಂಸ್ಥೆಯನ್ನು ಮರೆಯಬಾರದು ಎಂದು ಹೇಳಿದರು.

ಸಮಾರಂಭದ ಅಧ್ಯಕ್ಷತೆ ಮಾತನಾಡಿದ ಪ್ರಾ. ಬಿ.ಬಿ. ಹೊಳಗುಂದಿ ಶಿಕ್ಷಕರು ವಿಚಾರವಂತರಾಗಿ ಪಾಠ ಮಾಡಿದಾಗ ಸಮಾಜ ಸುದಾರಣೆಯಾಗಲು ಸಾಧ್ಯವಿದೆ. ಇಂತಹ ಕಾರ್ಯಕ್ರಮಗಳು ಹೆಚ್ಚೆಚ್ಚು ನಡೆಯಬೇಕೆಂದು ಹೇಳಿದರು. ಗುರುವಂದನಾ ಕಾರ್ಯಕ್ರಮ, ಸ್ನೇಹ ಸಮ್ಮಿಲನ ಸಂಭ್ರಮ-2025 ಸಮಾರಂಭದಲ್ಲಿ ಕಾರಣೀಕರ್ತರು, ಪ್ರತ್ಯಕ್ಷ ಹಾಗೂ ಪರೋಕ್ಷವಾಗಿ ಶ್ರಮಿಸಿದ ಮಹನೀಯರನ್ನು ವೇದಿಕೆಯಲ್ಲಿ ಸನ್ಮಾನಿಸಲಾಯಿತು.

ಕರ್ನಾಟಕ ವಿದ್ಯಾವರ್ಧಕ ಸಮಿತಿ ಚೇರಮನ್ನ ಭುಜಂಗಸ್ವಾಮಿ ಇನಾಮದಾರ ಜ್ಯೋತಿ ಬೆಳಗುವ ಮೂಲಕ ಸಮಾರಂಭವನ್ನು ಉದ್ಘಾಟಿಸಿದರು. ಸಮಾರಂಭದ ವೇದಿಕೆಯಲ್ಲಿ ವಿದ್ಯಾವರ್ಧಕ ಸಮಿತಿ ಕಾರ್ಯದರ್ಶಿ ಶ್ರೀಮತಿ ವಿಜಯಲಕ್ಷ್ಮಿ ರೇವಣ ಸಿದ್ದೇಶ್ವರಸ್ವಾಮಿ ಹಿರೇಮಠ, ಪ್ರೊ. ನಾಗರಾಜ್ ಹೊನ್ನೂರು ವಿದ್ಯಾವರ್ಧಕ ಸಮಿತಿಯ ಬೋಧಕ ಹಾಗೂ ಬೋಧಕೇತರ ಸಿಬ್ಬಂದಿ, ಅಧ್ಯಕ್ಷರು ಹಾಗೂ ಸರ್ವ ಪದಾಧಿಕಾರಿಗಳು 2007-08ನೇ ಸಾಲಿನ ಪ್ರಶಿಕ್ಷಣಾರ್ಥಿಗಳು ಉಪಸ್ಥಿತರಿದ್ದರು.

## ಪೊಲೀಸರು ಮನೆ- ಮನ ತಲುಪಲಿ: ಬಿ. ವರಲಕ್ಷ್ಮಿ

• **ಉದಯವಾಹಿನಿ, ಶಿವಮೊಗ್ಗ**


ಉದಯವಾಹಿನಿ ಚಿತ್ರ

**ಸೊರಬ ಪೊಲೀಸರಿಗೆ ಅಭಿನಂದನೆ**

ಜನಸ್ನೇಹಿ ಪೊಲೀಸ್ ವ್ಯವಸ್ಥೆ ನಿರ್ಮಿಸುವ ಮಹತ್ತರ ಉದ್ದೇಶದಿಂದ ಜಿಲ್ಲಾ ರಕ್ಷಣಾಧಿಕಾರಿಗಳು ಕಳೆದ ವಾರ 'ಮನೆ ಮನೆಗೆ ಪೊಲೀಸ್' ಎಂಬ ವಿನೂತನ ಯೋಜನೆಗೆ ಚಾಲನೆ ನೀಡಿರುವುದು ಸ್ವಾಗತಾರ್ಹ. ಪೊಲೀಸರು ಕೇವಲ ಮನೆ-ಮನೆಗಷ್ಟೇ ಅಲ್ಲ ಜನರ ಮನೆ ಮತ್ತು ಮನ ತಲುಪಲಿ. ಈ ಮೂಲಕ ಪೊಲೀಸರ ಬಗ್ಗೆ ಜನರಲ್ಲಿರುವ ನಾಕಾರಾತ್ಮಕ ಮನೋಭಾವ ದೂರವಾಗಲಿ ಎಂದು ಧಾರ್ಮಿಕ ದತ್ತಿ, ಧರ್ಮದಾಯ ಇಲಾಖೆಯ ಜಿಲ್ಲಾ ಧಾರ್ಮಿಕ ಪರಿಷತ್ ಸದಸ್ಯೆ ಬಿ. ವರಲಕ್ಷ್ಮಿ ಪ್ರಕಾಶ್ ಆಶಿಸಿದರು.

ದೇವಸ್ಥಾನಗಳನ್ನೇ ಗುರಿಯಾಗಿಸಿಕೊಂಡು ಸರಣಿ ಕಳ್ಳತನ ಮಾಡುತ್ತಿದ್ದ ಆರೋಪಿಯನ್ನು ಬಂಧಿಸಿ ಮುಜರಾಯಿ ಸೇರಿದಂತೆ ಏಳು ದೇವಸ್ಥಾನಗಳ ಕಳವು ಪ್ರಕರಣ ಭೇದಿಸಿರುವ ಪೊಲೀಸ್ ಇಲಾಖೆ ಪರವಾಗಿ ಇನ್ಸ್‌ಪೆಕ್ಟರ್ ಮಹಾಂತೇಶ ಕೆ. ಲಂಬಿ ಅವರನ್ನು ಸಂಜೆ ಸೊರಬದಲ್ಲಿ ಅಭಿನಂದಿಸಿ ಅವರು ಈ ಆಶಯ ವ್ಯಕ್ತಪಡಿಸಿದರು.

ರಾಜ್ಯ ಸರ್ಕಾರವು ಗೃಹ ಸಚಿವ ಪರಮೇಶ್ವರ್ ಅವರ ಒತ್ತಾಸೆಯಿಂದ ಪೊಲೀಸರು ಮತ್ತು ಜನರ ನಡುವೆ ವಿಶ್ವಾಸ, ಸುರಕ್ಷತೆ ಮತ್ತು ನೇರ ಸಂಪರ್ಕವನ್ನು ಹೆಚ್ಚಿಸುವ ಗುರಿಯನ್ನು ಹೊಂದುವ ಉದ್ದೇಶದಿಂದ ದೇಶದಲ್ಲಿಯೇ ಮೊದಲ ಬಾರಿಗೆ 'ಮನೆ ಮನೆಗೆ ಪೊಲೀಸ್ ಎಂಬ ಯೋಜನೆ ಜಾರಿಗೊಳಿಸಿದೆ. ಈ ಮೂಲಕ ಪೊಲೀಸರು ಉತ್ತಮ ಜನಸಾಮಾನ್ಯರ ನಡುವೆ ಸ್ನೇಹಪರ ಪರ ಸಂಬಂಧವನ್ನು ಬೆಸೆಯಲಿ. ಕಾನೂನು ಬಾಹಿರ ಕೃತ್ಯಗಳು ಕಡಿಮೆಯಾಗಲಿ. ಕೋಮು ಗಲಭೆಯಂತಹ ದುರ್ಘಟನೆಗಳು ದೂರವಾಗಲಿ ಎಂದರು. ದೇವಸ್ಥಾನಗಳ ಕಳವು ಪ್ರಕರಣ ಭೇದಿಸುವಲ್ಲಿ ಮಹತ್ವದ ಪಾತ್ರ ವಹಿಸಿದ ಸಬ್ ಇನ್ಸ್‌ಪೆಕ್ಟರ್ ನವೀನ್ ಎಂ.ಎಚ್. ನೇತೃತ್ವದ ಸೊರಬ ಪೊಲೀಸ್ ಠಾಣೆಯ ನಾಗೇಶ, ರಾಘವೇಂದ್ರ, ಲೋಕೇಶ್, ವಿನಯ, ಆರ್.ಗಿರೀಶ್, ಹನುಮಂತ, ರಾಜುನಾಯ್ಕ, ಮಲ್ಲೇಶ, ಶಶಿಧರ, ಸಂದೀಪ, ಸೋಮಶೇಖರ, ಮೋಹನ, ರವೀಂದ್ರ, ಹೇಮಲತಾ ಮತ್ತು ರೂಪಾಲಿ ಅವರನ್ನು ಒಳಗೊಂಡ ತಂಡದ ಕಾರ್ಯವೈಖರಿಗೆ ಮೆಚ್ಚುಗೆ ವ್ಯಕ್ತಪಡಿಸಿದರಲ್ಲದೆ ಎಸ್ಪಿ ಮಿಥುನ್ ಕುಮಾರ್ ಅವರು ಈ ತಂಡವನ್ನು ಗೌರವಿಸಬೇಕೆಂದು ಮನವಿ ಮಾಡಿದರು. ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕ ಮಲ್ಲೇಶಪ್ಪ ಡಿ., ನಿವೃತ್ತ ಎಡಿಸಿ, ಜಿಲ್ಲಾ ಅಟ್ರಾಸಿಟಿ ಸಮಿತಿ ಸದಸ್ಯ ರುದ್ರಪ್ಪ ಹೆಚ್., ಸೊರಬ ತಾಲ್ಲೂಕಿನ ತತ್ತೂರು ವಡ್ಡಿಗೆರೆಯ ಪರಮೇಶ್ವರಪ್ಪ, ಶಿಕಾರಿಪುರದ ಕಂಟ್ರಾಕ್ಟರ್ ಸೈಯದ್ ಅಲಿ, ಅರುಣ್ ಸಮನವಳ್ಳಿ ಉಪಸ್ಥಿತರಿದ್ದರು.

## ಹಂಪಿ ವಿರೂಪಾಕ್ಷ ದೇಗುಲದ ಆವರಣದಲ್ಲಿ ನಿಂತ ಮಳೆ ನೀರು ದರ್ಶನಕ್ಕಾಗಿ ಹೈರಾಣು

• **ಉದಯವಾಹಿನಿ, ಬಳ್ಳಾರಿ**

ವಿಜಯನಗರ ಜಿಲ್ಲೆಯಲ್ಲಿ ಕಳೆದ ಒಂದು ವಾರದಿಂದ ನಿರಂತರವಾಗಿ ಮಳೆಯಾಗುತ್ತಿದೆ. ಇದರಿಂದ ಹಂಪಿಯ ವಿರೂಪಾಕ್ಷ ದೇವಾಲಯದ ಆವರಣದಲ್ಲಿ ಮಳೆ ನೀರು ನಿಂತಿದ್ದು, ಜನರು ಹೈರಾಣಾಗುತ್ತಿದ್ದಾರೆ.

ಐತಿಹಾಸಿಕ ಹಂಪಿಯ ಶ್ರೀ ವಿರೂಪಾಕ್ಷ ದೇಗುಲದ ಆವರಣದಲ್ಲಿ ಮಳೆಯಿಂದಾಗಿ ಮೋಣಕಾಲುದ್ದ ನೀರು ನಿಂತಿದೆ. ಪರಿಣಾಮ ದೇವಸ್ಥಾನಕ್ಕೆ ಬರುವ ಭಕ್ತರು ಹಾಗೂ ಪ್ರವಾಸಿಗರಿಗೆ ಸಮಸ್ಯೆ ಎದುರಾಗಿದೆ. ಬೇರೆ ದಾರಿಯಿಲ್ಲದೇ ಪ್ರವಾಸಿಗರು ನಿಂತ ನೀರಿನಲ್ಲಿಯೇ ನಡೆದುಕೊಂಡು ಹೋಗಿ, ವಿರೂಪಾಕ್ಷೇಶ್ವರನ ದರ್ಶನ ಪಡೆದಿದ್ದಾರೆ. ಮಳೆ ಬಂದಾಗ ನೀರು ಹೊರಹೋಗುವ ವ್ಯವಸ್ಥೆ ಮಾಡಬೇಕಿದ್ದ ಅಧಿಕಾರಿಗಳು ನಿರ್ಲಕ್ಷ್ಯ ವಹಿಸಿದ್ದರಿಂದ ಪ್ರವಾಸಿಗರು ಹಿಡಿಶಾಪ ಹಾಕುತ್ತಿದ್ದಾರೆ.

# ಮಹೇಶ್ ಶೆಟ್ಟಿ ತಿಮರೋಡಿ ಗಡಿಪಾರು ವಿಷಯಕ್ಕೆ ಪ್ರತಿಭಟನೆಗೆ ಅವಕಾಶ ನಿರಾಕರಣೆ


### ಸೌಜನ್ಯ ಪರ ಹೋರಾಟಗಾರರಿಗೆ ಬೆಳ್ತಂಗಡಿ ತಹಶೀಲ್ದಾರ್ ಕಚೇರಿಯಲ್ಲಿ ತಡೆ: ಹೋರಾಟಗಾರರ ಆಕ್ರೋಶ

• **ಉದಯವಾಹಿನಿ, ಬೆಳ್ತಂಗಡಿ**

ಸೌಜನ್ಯ ಅತ್ಯಾಚಾರ ಮತ್ತು ಕೊಲೆ ಪ್ರಕರಣದ ನ್ಯಾಯಕ್ಕಾಗಿ ಆಗ್ರಹಿಸಿ ಮನವಿ ಸಲ್ಲಿಸಲು ತೆರಳಿದ್ದ ಹೋರಾಟಗಾರರನ್ನು ತಹಶೀಲ್ದಾರ್ ಕಚೇರಿಯಲ್ಲಿ ತಡೆ ನೀಡಲಾಗಿದೆ. ಈ ಸಂದರ್ಭದಲ್ಲಿ ಪೊಲೀಸರು ತೋರಿದ ವರ್ತನೆಯ ವಿರುದ್ಧ ಹೋರಾಟಗಾರ್ತಿಯೊಬ್ಬರು ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಮನವಿ ಸಲ್ಲಿಸಲು ಕಚೇರಿಗೆ ಬಂದಾಗ ತಹಶೀಲ್ದಾರ್ ಅವರು ಸ್ಥಳದಲ್ಲಿ ಇರಲಿಲ್ಲ. ಈ ಬಗ್ಗೆ ಮಾಧ್ಯಮಗಳ ಮುಂದೆಯೇ ಅವರಿಗೆ ಕರೆ ಮಾಡಿದಾಗ, ತಾವು ಔಟ್ ಆಫ್ ಸ್ಟೇಷನ್ ಇರುವುದಾಗಿ ಮತ್ತು ಭೇಟಿಗೆ ಅಪಾಯಿಂಟ್ಮೆಂಟ್ ತೆಗೆದುಕೊಂಡಿಲ್ಲ ಎಂದು ತಿಳಿಸಿದರು ಎಂದು ಹೋರಾಟಗಾರ್ತಿ ಆರೋಪಿಸಿದರು. ಸಾರ್ವಜನಿಕ ಅಧಿಕಾರಿಯನ್ನು ಭೇಟಿ ಮಾಡಲು, ಅದರಲ್ಲೂ ಮನವಿ ಸಲ್ಲಿಸಲು ಬರುವಾಗ ನಾವು ಅಪಾಯಿಂಟ್ಮೆಂಟ್ ತೆಗೆದುಕೊಂಡು ಬರಬೇಕೇ? ಇದು ಯಾವ ನ್ಯಾಯ? ಎಂದು ಅವರು ಪ್ರಶ್ನಿಸಿದರು.

ತಹಶೀಲ್ದಾರ್ ಮಾತ್ರವಲ್ಲ, ಉಪ ತಹಶೀಲ್ದಾರ್ ಕೂಡ ಕಚೇರಿಯಲ್ಲಿ ಇರಲಿಲ್ಲ. ಅವರ ಕೊಠಡಿಗಳಿಗೆ ಬೀಗ ಹಾಕಲಾಗಿತ್ತು. ಕೊನೆಗೆ ನಮ್ಮ ಮನವಿಯನ್ನು ಟಪಾಲು ವಿಭಾಗದಲ್ಲಿ ನೀಡುವಂತೆ ಹೇಳಿದರು, ಅದರಂತೆ ನಮ್ಮ ಕರ್ತವ್ಯವನ್ನು ನಾವು ಮಾಡಿದ್ದೇವೆ, ಎಂದು ಅವರು ಹೇಳಿದರು. ಅಧಿಕಾರಿಗಳ ಬೇಜವಾಬ್ದಾರಿ ವರ್ತನೆಯನ್ನು ಖಂಡಿಸಿದ ಅವರು, ತಹಶೀಲ್ದಾರ್ ಅವರು ಇಂದು ಯಾವ ಕಾರಣಕ್ಕೆ ಕಚೇರಿಗೆ ಗೈರಾಗಿದ್ದಾರೆ ಎಂಬುದರ ಬಗ್ಗೆ ಮಾಹಿತಿ ಹಕ್ಕು ಕಾಯ್ದೆಯಡಿ ಮಾಹಿತಿ ಪಡೆಯುವುದಾಗಿ ತಿಳಿಸಿದರು.


ಉದಯವಾಹಿನಿ ಚಿತ್ರ

- ಸೌಜನ್ಯ ಹೋರಾಟಗಾರರನ್ನು ಭಯೋತ್ಪಾದಕರಂತೆ ಕಾಣಲಾಗುತ್ತಿದೆ ಎಂದು ಆರೋಪ
- ಸೌಜನ್ಯ ಅತ್ಯಾಚಾರ ಮತ್ತು ಕೊಲೆ ಪ್ರಕರಣದ ನ್ಯಾಯಕ್ಕಾಗಿ ಆಗ್ರಹಿಸಿ ಮನವಿ

ಇನ್ನು ಹೋರಾಟದ ಬಗ್ಗೆ ಮಾತನಾಡಿದ್ದ ಜಯಂತ್ ಟಿ, ವಿಚಾರಣೆಗೆ ನೋಟಿಸ್ ಕೊಟ್ಟಿದ್ದಾರೆ, ಆದರೆ ಸೌಜನ್ಯ ಪರ ಹೋರಾಟವೂ ನಿಗದಿಯಾಗಿರುವುದರಿಂದ ಹೋರಾಟ ಮಾಡಿಯೇ ಮಾಡುತ್ತೇವೆ. ವಿಚಾರಣೆಗೆ ಬೇರೆ ಸಮಯ ಕೊಡುವಂತೆ ಮನವಿ ಮಾಡಿದ್ದೇವೆ ಎಂದಿದ್ದರು. ಆದರೆ ಸೌಜನ್ಯ ಪರ ಹೋರಾಟದಲ್ಲಿಯೂ ಇಂದು ಜಯಂತ್ ಟಿ ಸೇರಿದಂತೆ ಯಾರೂ ಪ್ರಮುಖರು ಭಾಗಿಯಾಗಿರಲಿಲ್ಲ, ಇತ್ತ ಎಸ್‌ಐಟಿ ವಿಚಾರಣೆಗೆ ಕೂಡಾ ಗೈರಾಗಿದ್ದರು.

**ಪೊಲೀಸರ ನಡೆಗೆ ತೀವ್ರ ಆಕ್ರೋಶ**

ಈ ಸಂದರ್ಭದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಪೊಲೀಸರನ್ನು ನಿಯೋಜಿಸಿದ್ದಕ್ಕೆ ಹೋರಾಟಗಾರ್ತಿ ತೀವ್ರ ಬೇಸರ ವ್ಯಕ್ತಪಡಿಸಿದರು. ನಾವು ಮನವಿ ಸಲ್ಲಿಸಲು ಬಂದಿದ್ದೇವೆಯೇ ಹೊರತು ಹಲ್ಲೆ ಮಾಡಲು ಅಲ್ಲ. ಇಡೀ ಬೆಳ್ತಂಗಡಿ ಪೊಲೀಸ್ ಠಾಣೆಯ ಸಿಬ್ಬಂದಿ ಇಲ್ಲಿ ನೆರೆದಿದ್ದಾರೆ. ಸಾಮಾನ್ಯವಾಗಿ ಒಂದು ದೂರು ನೀಡಲು ಹೋದರೆ, ಸಿಬ್ಬಂದಿ ಇಲ್ಲ, ತುಂಬಾ ಕೇಸುಗಳಿವೆ ಎಂದು ತಿಂಗಳುಗಟ್ಟಲೆ ಕಾಯಿಸುತ್ತಾರೆ. ಆದರೆ ಇಂದು ನಮ್ಮನ್ನು ತಡೆಯಲು ಇಡೀ ಪೊಲೀಸ್ ಪಡೆ ಬಂದಿದೆ. ನಮ್ಮನ್ನು ಭಯೋತ್ಪಾದಕರಂತೆ ಕಾಣಲಾಗುತ್ತಿದೆ, ಎಂದು ಅವರು ಆಕ್ರೋಶ ವ್ಯಕ್ತಪಡಿಸಿದರು. ನಮ್ಮದು ಶಾಂತಿಯುತ ಹೋರಾಟ. ಮನವಿ ನೀಡಿ ಹದಿನೈದು ನಿಮಿಷದಲ್ಲಿ ವಾಪಸ್ ಹೋಗುತ್ತಿದ್ದೆವು. ಆದರೆ ಅನಗತ್ಯವಾಗಿ ಗೊಂದಲ ಸೃಷ್ಟಿಸಲಾಯಿತು. ಈ ಅಧಿಕಾರಿಗಳ ವರ್ತನೆಯಿಂದ ನಮಗೆ ಬಹಳ ನೋವಾಗಿದೆ. ಸೌಜನ್ಯ ಹೋರಾಟವನ್ನು ಯಾರಿಂದಲೂ ನಿಲ್ಲಿಸಲು ಸಾಧ್ಯವಿಲ್ಲ. ನಮ್ಮ ಹಕ್ಕನ್ನು ಹತ್ತಿಕ್ಕಲು ಯಾರಿಗೂ ಸಾಧ್ಯವಿಲ್ಲ ಎಂದು ಅವರು ಸವಾಲು ಹಾಕಿದರು.

**ಕಾನೂನು ಕ್ರಮದ ಎಚ್ಚರಿಕೆ:** ಸೌಜನ್ಯ ಪ್ರಕರಣದ ಹೋರಾಟಗಾರ ಮಹೇಶ್ ಶೆಟ್ಟಿ ತಿಮರೋಡಿ ಅವರ ಪರವಾಗಿ, ಅವರ ಗಡಿಪಾರು ರದ್ದು ಮಾಡುವಂತೆ ಆಗ್ರಹಿಸಿ ಅಕ್ಟೋಬರ್ 27 ರಂದು ನಡೆಸಲು ಉದ್ದೇಶಿಸಿದ್ದ ಪ್ರತಿಭಟನೆಗೆ ದಕ್ಷಿಣ ಕನ್ನಡ ಜಿಲ್ಲಾ ಪೊಲೀಸ್ ಇಲಾಖೆ ಅನುಮತಿ ನಿರಾಕರಿಸಿದೆ. ಆದರೂ ಸೋಮವಾರ ಪ್ರತಿಭಟನೆಗಾಗಿ ರಾಷ್ಟ್ರೀಯ ಹಿಂದೂ ಜಾಗರಣ ವೇದಿಕೆಯ ಕೆಲವರು ಸೇರಿದ್ದರು. ನಿಮ್ಮ ಮೇಲೆ ಪ್ರಕರಣ ದಾಖಲಿಸುತ್ತೇವೆ. ಪ್ರತಿಭಟನೆಗೆ ಅನುಮತಿ ಇಲ್ಲ. ಎಲ್ಲರೂ ಹೋಗಿ ಎಂದು ಪೊಲೀಸರು ಎಚ್ಚರಿಕೆ ಕೊಟ್ಟರು. ಕೆಲವರನ್ನು ವಶಕ್ಕೆ ಪಡೆಯಲಾಗಿದೆ.

ಪ್ರಕರಣವು ನ್ಯಾಯಾಲಯದಲ್ಲಿ ವಿಚಾರಣಾ ಹಂತದಲ್ಲಿರುವುದರಿಂದ ಈ ನಿರ್ಧಾರ ಕೈಗೊಳ್ಳಲಾಗಿದೆ ಎಂದು ಇಲಾಖೆ ಸ್ಪಷ್ಟಪಡಿಸಿದೆ. ರಾಷ್ಟ್ರೀಯ ಹಿಂದೂ ಜಾಗರಣ ವೇದಿಕೆಯ ಅಧ್ಯಕ್ಷರಾದ ಅನಿಲ್ ಕುಮಾರ್ ಅಂತರ ಅವರು ಈ ಪ್ರತಿಭಟನೆಗೆ ಅನುಮತಿ ಕೋರಿ ಅರ್ಜಿ ಸಲ್ಲಿಸಿದ್ದರು.

ಈ ಕುರಿತು ಪತ್ರಿಕಾ ಹೇಳಿಕೆ ಬಿಡುಗಡೆ ಮಾಡಿರುವ ಜಿಲ್ಲಾ ಪೊಲೀಸ್ ಅಧೀಕ್ಷಕರು, ಪ್ರಕರಣ ನ್ಯಾಯಾಲಯದಲ್ಲಿರುವ ಕಾರಣದಿಂದಾಗಿ ಪ್ರತಿಭಟನೆಗೆ ಅನುಮತಿ ನೀಡಲು ಸಾಧ್ಯವಿಲ್ಲ ಎಂದು ತಿಳಿಸಿದ್ದಾರೆ. ಒಂದುವೇಳೆ ಇಲಾಖೆಯ ಸೂಚನೆಯನ್ನು ಉಲ್ಲಂಘಿಸಿ ಪ್ರತಿಭಟನೆ ನಡೆಸಿದರೆ, ಕಾನೂನಿನ ಪ್ರಕಾರ ಕಠಿಣ ಕ್ರಮ ಜರುಗಿಸಲಾಗುವುದು ಎಂದು ಅವರು ಎಚ್ಚರಿಸಿದ್ದಾರೆ.

## ಮಚ್ಚಿನಿಂದ ಕೊಚ್ಚಿ ಯುವಕನ ಹತ್ಯೆ

• **ಉದಯವಾಹಿನಿ, ಹಾಸನ**

ಹಾಡಹಗಲೇ ಮಚ್ಚಿನಿಂದ ಕೊಚ್ಚಿ ಯುವಕನನ್ನು ಬರ್ಬರ ಹತ್ಯೆ ಮಾಡಿರುವ ಘಟನೆ ಹಾಸನದ ಬೇಲೂರು ಪಟ್ಟಣದ ಸಾರಿಗೆ ಬಸ್ ನಿಲ್ದಾಣದಲ್ಲಿ ನಡೆದಿದೆ. ಚನ್ನಕೇಶವಗೌಡ್ರು ಬೀದಿಯ ನಿವಾಸಿ ಗಿರೀಶ್ (28) ಕೊಲೆಯಾದ ಯುವಕ. ಸುರಪುರ ಗ್ರಾಮದ ಶ್ರೀನಿವಾಸ್ ಅಲಿಯಾಸ್ ಸೀನ ಕೊಲೆಗೈದ ಆರೋಪಿ. ಸೀನ ಕೋಳಿ ಅಂಗಡಿಯಲ್ಲಿ ಕೆಲಸ ಮಾಡುತ್ತಿದ್ದ. ರಾತ್ರಿ ಯುವತಿ ವಿಚಾರಕ್ಕೆ ಗಿರೀಶ್ ಹಾಗೂ ಸೀನನ ನಡುವೆ ಗಲಾಟೆ ನಡೆದಿತ್ತು ಎನ್ನಲಾಗಿದೆ. ಇದರಿಂದ ಗಿರೀಶ್ ಮೇಲೆ ಸೀನ ಕೋಪಗೊಂಡಿದ್ದ. ಬೇಕರಿಯಲ್ಲಿ ಕೆಲಸ ಮಾಡುತ್ತಿದ್ದ ಗಿರೀಶ್ ಸೋಮವಾರ ಬೆಳಿಗ್ಗೆ 11ಗಂಟೆ ಸುಮಾರಿನಲ್ಲಿ ಸಾರಿಗೆ ಬಸ್ ನಿಲ್ದಾಣದಲ್ಲಿರುವ ಶೌಚಾಲಯಕ್ಕೆ ಹೋಗಿ ಹೊರಗೆ ಬಂದಿದ್ದ. ಈ ವೇಳೆ ಕಾದು ನಿಂತಿದ್ದ ಸೀನ ಮಚ್ಚು ಹಿಡಿದು ಗಿರೀಶ್ ಮೇಲೆ ಅಟ್ಯಾಕ್ ಮಾಡಿ ಮನಬಂದಂತೆ ಕೊಚ್ಚಿ ಎಸ್ಕೇಪ್ ಆಗಿದ್ದಾನೆ. ರಕ್ತದ ಮಡುವಿನಲ್ಲಿ ಬಿದ್ದಿದ್ದ ಗಿರೀಶ್‌ನನ್ನು ಅಂಬ್ಯುಲೆನ್ಸ್‌ನಲ್ಲಿ ಜಿಲ್ಲಾಸ್ಪತ್ರೆಗೆ ಸಾಗಿಸುವ ಮಾರ್ಗ ಮಧ್ಯೆ ಸಾವನ್ನಪ್ಪಿದ್ದಾನೆ. ಸ್ಥಳಕ್ಕೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಬೇಲೂರು ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.



# ಪ್ರಭಾಸ್–ಸಮಂತಾ ಒಟ್ಟಿಗೆ ನಟಿಸಿಲ್ಲ


ಈ ಇಬ್ಬರು ಒಟ್ಟಿಗೆ ನಟಿಸದಿರಲು ಮುಖ್ಯ ಕಾರಣ ಅವರ ನಡುವಿನ ಎತ್ತರದ ಅಂತರ ಎಂದು ಪ್ರಭಾಸ್ ಈ ಹಿಂದೆ ಸಂದರ್ಶನವೊಂದರಲ್ಲಿ ಸ್ಪಷ್ಟಪಡಿಸಿದ್ದರು. ಪ್ರಭಾಸ್ ಆರು ಅಡಿ ಎತ್ತರವಿದ್ದರೆ, ಸಮಂತಾ ಸುಮಾರು 5 ಅಡಿ 2 ಇಂಚು. ಸುಮಾರು 10 ಇಂಚುಗಳಷ್ಟು ಈ ವ್ಯತ್ಯಾಸವು ಚಲನಚಿತ್ರ ನಿರ್ಮಾಪಕರಿಗೆ ಕ್ಯಾಮೆರಾ ಫ್ರೇಮ್‌ಗಳನ್ನು ಹೊಂದಿಸುವುದು, ವಿಶೇಷವಾಗಿ ಪ್ರಣಯ ದೃಶ್ಯಗಳನ್ನು ಸ್ವಾಭಾವಿಕವಾಗಿ ತೋರಿಸುವುದು ದೊಡ್ಡ ಕೆಲಸವಾಗಿದೆ. ಅದಕ್ಕಾಗಿಯೇ ನಿರ್ದೇಶಕರು ಮತ್ತು ನಿರ್ಮಾಪಕರು ಈ ಕಾಂಬೊವನ್ನು ಹೊಂದಿಸುವಲ್ಲಿ ಹೆಚ್ಚು ರಿಸ್ಕ್ ತೆಗೆದುಕೊಳ್ಳುವುದಿಲ್ಲ.

**ತಪ್ಪಿದ ಅವಕಾಶಗಳು:** ಎತ್ತರ ಮಾತ್ರವಲ್ಲ, ಇನ್ನೊಂದು ಕಾರಣವೆಂದರೆ ಈ ಕಾಂಬೊಗೆ ಸಂಪೂರ್ಣವಾಗಿ ಹೊಂದಿಕೊಳ್ಳುವ ಯಾವುದೇ ಸ್ಕ್ರಿಪ್ಟ್ ಸೆಟ್ ಇರಲಿಲ್ಲ. ಉದಾಹರಣೆಗೆ, 2019 ರ ಬ್ಲಾಕ್‌ಬಸ್ಟರ್ ಚಲನಚಿತ್ರ ಸಾಹೋದಲ್ಲಿ ಸಮಂತಾ ಅವರನ್ನು ಆರಂಭದಲ್ಲಿ ನಾಯಕಿಯಾಗಿ ಬಲವಾಗಿ ಪರಿಗಣಿಸಲಾಗಿತ್ತು. ಆದರೆ ಅಂತಿಮವಾಗಿ, ಆ ಅವಕಾಶ ಬಾಲಿವುಡ್ ನಟಿ ಶ್ರದ್ಧಾ ಕಪೂರ್ ಅವರಿಗೆ ಹೋಯಿತು. ಇದಲ್ಲದೆ, ನಾಗ್ ಅಶ್ವಿನ್ ನಿರ್ದೇಶನದಲ್ಲಿ ನಾಯಕಿಯಾಗಿ ಪ್ರಭಾಸ್ ಅವರ ಮುಂಬರುವ ಯೋಜನೆಗೆ ಸಮಂತಾ ಅವರನ್ನು ಸಂಪರ್ಕಿಸಲಾಗಿದೆ ಎಂಬ ಮಾತು ಉದ್ಯಮದಲ್ಲಿ ಕೇಳಿಬಂದಿತ್ತು. ಆದರೆ, ನಿರ್ದೇಶಕರ ಸೃಜನಶೀಲ ದೃಷ್ಟಿಕೋನಕ್ಕೆ ಅನುಗುಣವಾಗಿ ಈ ಪ್ರಸ್ತಾಪವನ್ನು ಪಕ್ಕಕ್ಕೆ ಇಡಲಾಗಿದೆ ಮತ್ತು ಪ್ರಭಾಸ್ ಸಹ ಅದನ್ನು ಬೆಂಬಲಿಸಿದ್ದಾರೆ ಎಂದು ಹೇಳಲಾಗುತ್ತದೆ. ಸಮಂತಾ ಅವರ ವೃತ್ತಿಜೀವನ.. ಆರೋಗ್ಯವೂ ಸಹ.. ಸಮಂತಾ ಅವರ ವೃತ್ತಿಜೀವನದ ಹಾದಿ ಮತ್ತು ಅವರ ಆರೋಗ್ಯ ಕೂಡ ಈ ಕಾಂಬೊ ಸೆಟ್ ಆಗದಿರಲು ಮತ್ತೊಂದು ಪ್ರಮುಖ ಕಾರಣವಾಗಿದೆ. ಅವರು ಮೈಯೋಸಿಟಿಸ್ ಎಂಬ ಆಟೋಇಮ್ಯೂನ್ ಸ್ಥಿತಿಯಿಂದ ಬಳಲುತ್ತಿದ್ದಾರೆ ಎಂದು ಘೋಷಿಸಿದ ನಂತರ, ಅವರು ತಮ್ಮ ಆರೋಗ್ಯದ ಮೇಲೆ ಸಂಪೂರ್ಣವಾಗಿ ಗಮನ ಹರಿಸಿದ್ದಾರೆ. ಅವರು ಇಷ್ಟಪಡುವ ಮತ್ತು ಅಭಿನಯಕ್ಕೆ ಅವಕಾಶವಿರುವ ಸ್ಕ್ರಿಪ್ಟ್‌ಗಳನ್ನು ಮಾತ್ರ ಆಯ್ಕೆ ಮಾಡುತ್ತಿದ್ದಾರೆ.



ಬಹುಕೋಟಿ ಚಿತ್ರಗಳಲ್ಲಿ ಮುಖ್ಯ ನಾಯಕಿ

# ‘ಐ ಆಯಮ್ ಗಾಡ್’ ಟ್ರೇಲರ್



ನ.7ಕ್ಕೆ ಸಿನಿಮಾ ಬಿಡುಗಡೆ

‘ಐ ಆಯಮ್ ಗಾಡ್’ ಸಿನಿಮಾದ ಟ್ರೇಲರ್ ಬಿಡುಗಡೆ ಆಗಿದೆ. ಇದು ಉಪೇಂದ್ರ ಅವರ ಶಿಷ್ಯ ರವಿ ಗೌಡ ನಿರ್ದೇಶಿಸಿ, ನಟಿಸಿ, ನಿರ್ಮಾಣ ಮಾಡಿರುವ ಸಿನಿಮಾ. ಇತ್ತೀಚೆಗೆ ಮೈಸೂರಿನಲ್ಲಿ ನಡೆದ ಟ್ರೇಲರ್ ಬಿಡುಗಡೆ ಸಮಾರಂಭಕ್ಕೆ ರಿಯಲ್ ಸ್ಟಾರ್ ಉಪೇಂದ್ರ ಅವರು ಮುಖ್ಯ ಅತಿಥಿಯಾಗಿ ಆಗಮಿಸಿದ್ದರು. ಟ್ರೇಲರ್ ಬಿಡುಗಡೆ ಮಾಡಿ, ಮೆಚ್ಚುಗೆ ವ್ಯಕ್ತಪಡಿಸಿದರು. ಈಗಾಗಲೇ ಈ ಸಿನಿಮಾದ 2 ಹಾಡುಗಳು ಹಿಟ್ ಆಗಿವೆ. ಈಗ ಟ್ರೇಲರ್ ಮೂಲಕ ಗಮನ ಸೆಳೆಯಲಾಗಿದೆ. ‘ಐ ಆಯಮ್ ಗಾಡ್’ ಚಿತ್ರದಲ್ಲಿ ಲವ್ ಸ್ಟೋರಿ ಜೊತೆಗೆ ಸಸ್ಪೆನ್ಸ್ ಥ್ರಿಲ್ಲರ್ ಕಹಾನಿ ಇದೆ. ‘ಐ ಆಯಮ್ ಗಾಡ್’ ಎಂಬ ಡೈಲಾಗ್ ಕೇಳಿದರೆ ಉಪೇಂದ್ರ ಅವರೇ ನೆನಪಾಗುತ್ತಾರೆ. ‘ಎ’ ಸಿನಿಮಾ ಆ ಡೈಲಾಗ್ ಅಷ್ಟು ಫೇಮಸ್. ರವಿ ಗೌಡ ಅವರು ಉಪೇಂದ್ರರ ಗರಡಿಯಲ್ಲಿ ಸಿನಿಮಾದ ಪಾಠಗಳನ್ನು ಕಲಿತವರು. ಉಪೇಂದ್ರ ಜೊತೆ ‘ಉಪ್ಪಿ 2’ ಸಿನಿಮಾದಲ್ಲಿ ಕೆಲಸ ಮಾಡಿ ಅವರು ಅನುಭವ ಪಡೆದರು. ಈಗ ‘ಐ ಆಯಮ್ ಗಾಡ್’ ಸಿನಿಮಾಗೆ ನಿರ್ದೇಶನ ಮಾಡಿದ್ದಾರೆ. ಉಪೇಂದ್ರ ಅವರಿಗೆ ‘ಐ ಆಯಮ್ ಗಾಡ್’ ಸಿನಿಮಾದ ಟ್ರೇಲರ್ ಇಷ್ಟ ಆಗಿದೆ. ಟ್ರೇಲರ್ ಬಿಡುಗಡೆ ಬಳಿಕ ಅವರು ಮಾತನಾಡಿ, ತಮ್ಮ ಶಿಷ್ಯನ ಸಿನಿಮಾ ಪ್ರೀತಿಯನ್ನು ಶ್ಲಾಘಿಸಿದರು. ‘ಉಪ್ಪಿ 2’ ಸಿನಿಮಾದ ಸಂದರ್ಭದಲ್ಲಿ ರವಿ ಗೌಡ ಬಹಳ ಆಸಕ್ತಿಯಿಂದ ಸಿನಿಮಾದ ಕೆಲಸಗಳನ್ನು ಕಲಿಯುತ್ತಿದ್ದರು ಎಂಬುದನ್ನು ಉಪೇಂದ್ರ ನೆನಪು ಮಾಡಿಕೊಂಡರು. ಈ ವೇಳೆ ಮಾತನಾಡಿದ ರವಿ ಗೌಡ, ‘ಸಿನಿಮಾ ಮಾಡಬೇಕು ಎಂದು ನಿರ್ಧರಿಸಿದಾಗ ಯಾವುದೇ ಸಿನಿಮಾ ಯೂನಿವರ್ಸಿಟಿ ಬೇಡ ಉಪ್ಪಿ ಸರ್ ಹತ್ತಿರ ಹೋಗುವುದೇ ಬೆಸ್ಟ್ ಅಂತ ಹೋಗಿ ರಿಕ್ವೆಸ್ಟ್ ಮಾಡಿ ಸೇರಿಕೊಂಡೆ. ಐ ಆಯಮ್ ಗಾಡ್ ಸಿನಿಮಾ ಕಷ್ಟಪಟ್ಟು ಮಾಡಿದ್ದೇವೆ.



# ಮೌನಿ ರಾಯ್ ರೆಸ್ಟೋರೆಂಟ್ ಸಖತ್ ದುಬಾರಿ


ಭೇಲ್‌ಪುರಿಗೆ 400 ರೂಪಾಯಿ

ಮೌನಿ ರಾಯ್ ಅವರ 'ಬದ್ಮಾಶ್' ರೆಸ್ಟೋರೆಂಟ್ ಬೆಂಗಳೂರು ಸೇರಿದಂತೆ ಹಲವೆಡೆ ದುಬಾರಿ ಬೆಲೆಗಳಿಂದ ಸುದ್ದಿಯಾಗಿದೆ. ಜಾಮೂನು, ಅವಕಾಡೋ ಭೇಲ್ ಪುರಿ, ತಂದೂರಿ ರೋಟಿ ಸೇರಿದಂತೆ ಹಲವು ತಿನಿಸುಗಳಿಗೆ 300 ರೂ.ನಿಂದ 800 ರೂ.ವರೆಗೆ ಬೆಲೆ ಇದೆ. ಸೆಲೆಬ್ರಿಟಿಗಳ ಹೋಟೆಲ್‌ಗಳಿಗೆ ಅಭಿಮಾನಿಗಳು ಖಂಡಿತಾ ಬರುತ್ತಾರೆ ಎಂಬ ನಂಬಿಕೆಯೇ ಈ ದುಬಾರಿ ಬೆಲೆಗೆ ಕಾರಣ ಎನ್ನಲಾಗಿದೆ.

ಎಲ್ಲಾ ಸೆಲೆಬ್ರಿಟಿಗಳು ಸಿನಿಮಾ ರಂಗದಲ್ಲಿ ಯಶಸ್ಸು ಕಂಡ ಬಳಿಕ ಯಾವುದಾದರೂ ಒಂದು ಉದ್ಯಮ ಆರಂಭಿಸುತ್ತಾರೆ. ಬಾಲಿವುಡ್‌ನಲ್ಲಿ ಈ ಟ್ರೆಂಡ್ ಜೋರಾಗಿದೆ. ಅನೇಕ ಸೆಲೆಬ್ರಿಟಿಗಳು ಬಟ್ಟೆ ಬ್ರ್ಯಾಂಡ್ ಹೊಂದಿದ್ದಾರೆ. ಇನ್ನೂ ಕೆಲವು ಸೆಲೆಬ್ರಿಟಿಗಳು ತಮ್ಮದೇ ಹೋಟೆಲ್ ಉದ್ಯಮ ಹೊಂದಿದ್ದಾರೆ. ಇದಕ್ಕೆ ಮೌನಿ ರಾಯ್ ಕೂಡ ಹೊರತಾಗಿಲ್ಲ. ಅವರು ಬೆಂಗಳೂರು, ಮುಂಬೈ ಸೇರಿದಂತೆ ದೇಶದ ವಿವಿಧೆಡೆ ಆರು ರೆಸ್ಟೋರೆಂಟ್ ಹೊಂದಿದ್ದಾರೆ. ಈ ರೆಸ್ಟೋರೆಂಟ್‌ನ ತಿನಿಸುಗಳ ಬೆಲೆ ಅನೇಕರಿಗೆ ಅಚ್ಚರಿ ಮೂಡಿಸಿದೆ.

‘ಬದ್‌ಮಾಶ್’ ಅನ್ನೋದು ಮೌನಿ ರಾಯ್ ರೆಸ್ಟೋರೆಂಟ್ ಹೆಸರು. ಬೆಂಗಳೂರಿನ ಸರ್ಜಾಪುರದಲ್ಲಿ ಅವರು 2023ರಲ್ಲಿ ಮೊದಲ ಔಟ್‌ಲೆಟ್ ಆರಂಭಿಸಿದರು. ಈಗ ಮುಂಬೈ, ಕೋಲ್ಕತ್ತ ಸೇರಿದಂತೆ ಆರು ಕಡೆಗಳಲ್ಲಿ ಅವರ ಹೋಟೆಲ್ ಇದೆ. ಈ ರೆಸ್ಟೋರೆಂಟ್‌ಗೆ ಭೇಟಿ ನೀಡಬೇಕು ಎಂದರೆ ನೀವು ದೊಡ್ಡ ಮೊತ್ತ ತೆತ್ತಲು ರೆಡಿ ಇರಬೇಕು. ಇಲ್ಲಿನ ತಿಂಡಿಗಳ ಬೆಲೆ 300 ರೂಪಾಯಿಯಿಂದ ಆರಂಭ ಆಗಿ 800 ರೂಪಾಯಿವರೆಗೆ ಇದೆ. ಇಂಡಿಯನ್ ಎಕ್ಸ್‌ಪ್ರೆಸ್ ವರದಿ ಮಾಡಿದ ಪ್ರಕಾರ, ಜಾಮೂನಿನ ಬೆಲೆ 410 ರೂಪಾಯಿ. ಅವಕಾಡೋ ಭೇಲ್ ಬೆಲೆ 395 ರೂಪಾಯಿ. ಮಸಾಲಾ ಪೀನಟ್, ಮಸಾಲಾ ಪಾಪಡ್, ಕ್ರಿಸ್ಪಿ ಕಾರ್ನ್ ಹಾಗು ಶೇವ್ ಪುರಿ ಬೆಲೆ 295 ರೂಪಾಯಿ. ಸಿಗಡಿಯಿಂದ ಮಾಡಿದ ತಿಂಡಿಗಳ ಬೆಲೆ 795 ರೂಪಾಯಿ. ತಂದೂರಿ ರೋಟಿ ಒಂದಕ್ಕೆ 105 ರೂಪಾಯಿ.

# ಮಿಲ್ಕಿ ಬ್ಯೂಟಿ ಬಗ್ಗೆ ರಾಖಿ ಗರಂ



ಬಾಲಿವುಡ್‌ನ ಓಜಿ ಐಟಂ ಗರ್ಲ್ ಎಂದು ಸ್ವಯಂ ಘೋಷಿತ ರಾಖಿ ಸಾವಂತ್, ನಟಿ ತಮನ್ನಾ ಭಾಟಿಯಾ ಅವರ ಬಗ್ಗೆ ಮತ್ತೊಮ್ಮೆ ವಿವಾದ ಸೃಷ್ಟಿಸಿದ್ದಾರೆ. ಇತ್ತೀಚೆಗೆ ಹಿಂದಿ ರಶ್ ಜೊತೆಗಿನ ಚಾಟ್‌ನಲ್ಲಿ, ರಾಖಿ ತಮನ್ನಾ ಐಟಂ ಸಂಖ್ಯೆಗಳಲ್ಲಿ ಡ್ಯಾನ್ಸ್ ಮಾಡುವ ಆಯ್ಕೆಯನ್ನು ಅಣಕಿಸುತ್ತಾ, ದೊಡ್ಡ ಪರದೆಯ ನಾಯಕಿಯರು ತಮ್ಮ ನಟನಾ ವೃತ್ತಿಜೀವನ ನಿಧಾನವಾದಾಗ ಮಾತ್ರ ಐಟಂ ಸಾಂಗ್ ಪಾತ್ರಗಳನ್ನು ತೆಗೆದುಕೊಳ್ಳುತ್ತಾರೆ ಎಂದು ಹೇಳಿದ್ದಾರೆ. ತಮನ್ನಾ ಜೊತೆ ನನಗೇನೂ ಸಮಸ್ಯೆ ಇಲ್ಲ. ಬಾಹುಬಲಿಯಂತಹ ಸಿನಿಮಾ ಮಾಡಿ ಈಗ ನಮ್ಮಂತಹ ಐಟಂ ಸಾಂಗ್ ಯಾಕೆ ಮಾಡಲು ಶುರು ಮಾಡಿದರು ನೀವು ಬಹುಕೋಟಿ ಚಿತ್ರಗಳಲ್ಲಿ ಮುಖ್ಯ ನಾಯಕಿಯಾಗಿ ನಟಿಸಿದ್ದೀರಿ, ಇದ್ದಕ್ಕಿದ್ದಂತೆ ಆಜ್ ಕಿ ರಾತ್‌ನಂತಹ 5–10 ಲಕ್ಷ ಮೌಲ್ಯದ ಸಾಂಗ್ ಮಾಡುವುದರಲ್ಲಿ ಅರ್ಥವೇನು ಈ ಬಿಯರ್ ಬಾರ್ ಟೈಪ್ ನ ಹಾಡು ನಮಗೆ ಸೂಟ್ ಆಗುತ್ತದೆ ಎಂದು ರಾಖಿ ಹೇಳಿದರು. ಮುಖ್ಯವಾಹಿನಿಯ ನಟಿಯರು ಎಲ್ಲಾ ರೀತಿಯ ಪಾತ್ರಗಳನ್ನು ತೆಗೆದುಕೊಳ್ಳುವ ಮೂಲಕ ಐಟಂ ಸಾಂಗ್ ಹಾಗೂ ಮೇನ್ ಲೀಡ್ ನಡುವಿನ ಗಡಿಗಳನ್ನು ಮಸುಕಾಗಿಸುತ್ತಿದ್ದಾರೆ ಎಂದು ಹೇಳಿದರು.

# ಎಂಥಾ ಶಾಕ್ ಕೊಟ್ಬಿಟ್ರಿ ಶೆಟ್ರೇ..!



ಕುಂದರ್ರೂ ಅಲ್ಲ, ಎನ್ ಟಿ ಆರೂ ಅಲ್ಲ

ಕಾಂತಾರ ನೋಡಿದ ಎಲ್ಲರಿಗೂ ಬಹುವಾಗಿ ಕಾಡಿದ ಪಾತ್ರಗಳಲ್ಲಿ ಒಂದು ಮಾಯ್ಕಾರನ ಪಾತ್ರ. ಕೆಲವೇ ಕೆಲವು ನಿಮಿಷಗಳಷ್ಟು ಸ್ಕ್ರೀನ್ ಸ್ಪೇಸ್ ನ ಹೊರತಾಗಿಯೂ ಅದ್ಭುತ ಪ್ರಭಾವ ಸೃಷ್ಟಿಸಿದ ಈ ಪಾತ್ರ, ಪೋಷಣೆ ಮಾಡಿದ್ಯಾರು ಎಂಬ ಹುಳ ಅಕ್ಟೋಬರ್ 2 ರಿಂದ ಎಲ್ಲರೂ ತಲೆಯಲ್ಲಿ ಬಿಟ್ಟು ಕೊಂಡಿದ್ದರು.

ಅದಾಗ್ಯೂ ಸೋಶಿಯಲ್ ಮೀಡಿಯಾದಲ್ಲಿ ಪ್ರಭಾಕರ್ ಕುಂದರ್ ಹೆಸರೂ ಹಾಗೆಯೇ ಜೂನಿಯರ್ ಎನ್‌ಟಿಆರ್ ಅಂತೇ ಎಂಬ ವದಂತಿ ಹಬ್ಬಿತ್ತು. ಆದರೆ ನಿನ್ನೆ ನಮಗೆಲ್ಲಾ ಶೆಟ್ರು ಶಾಕ್ ಕೊಟ್ಟುಬಿಟ್ರು! ಅದೇನೆಂದರೆ ಅವರೇ ಬೆರ್ಮೆಯ ಪಾತ್ರದ ಜೊತೆಗೆ ಮಾಯ್ಕಾರ ಪಾತ್ರವನ್ನೂ ನಿಭಾಯಿಸಿದ್ದಾರೆ. ಈ ಮಾಯ್ಕಾರ ಯಾರು ಎಂಬುದು ಎಲ್ಲರ ಚಿಂತೆಯಾದರೆ ಅದಕ್ಕೆ ಉತ್ತರವಾಗಿ ರಿಷಬ್ ನಿರ್ವಹಿಸಿದ ಬೆರ್ಮೆ ಪಾತ್ರದ ಮೂಲ ಪುರುಷ ಆ ಜಾಗದಲ್ಲಿ ಬದುಕಿ ಕಾಡಿನ ಸಂಘರ್ಷಗಳಲ್ಲಿ ತನ್ನ ಸಮುದಾಯಕ್ಕಾಗಿ ಹೋರಾಡಿ ಜೀವ ಕೊಟ್ಟವ ಅಥವಾ ತುಳುನಾಡಿನ ಸಂಪ್ರದಾಯದ ಪ್ರಕಾರ ಮಾಯವಾದವ. ಅದಕ್ಕೆ ಆತ ಮಾಯ್ಕಾರ ಹಾಗೆಯೇ ತುಳುನಾಡಲ್ಲಿ ಹೀಗೆ ಹೋರಾಡಿ ತೀರಿಕೊಂಡು ದೈವವಾದವರು ನಮ್ಮ ಕಣ್ಣಿಗೆ ಕಾಣೋದಿಲ್ಲ ನಾವು ಅವರ ಕಣ್ಣಿಗೆ ಕಾಣುತ್ತೇವೆ ಹಾಗೆಯೇ ಅವರು ಕಲೆ ಕಾರ್ನಿಕ ತೋರುತ್ತಿರುತ್ತಾರೆ ಎಂಬ ಮಾತಿದೆ. ಅದಕ್ಕೆ ಪರ್ಯಾಪ್ತವಾಗಿ ಮಾಯ್ಕಾರನ ಪಾತ್ರ ಹೆಣೆಯಲ್ಪಟ್ಟಿದೆ.

# ರಣಜಿ ಟ್ರೋಫಿಯಲ್ಲಿ ಅತ್ಯಂತ ವೇಗದ ದ್ವಿಶತಕ ಬಾರಿಸಿದ ಪೃಥ್ವಿ ಶಾ



ಮಹಾರಾಷ್ಟ್ರದ ಪರ ರಣಜಿ ಟ್ರೋಫಿಯಲ್ಲಿ ಆಡುತ್ತಿರುವ ಪೃಥ್ವಿ ಶಾ, ಚಂಡೀಗಢ ವಿರುದ್ಧ 156 ಎಸೆತಗಳಲ್ಲಿ 222 ರನ್‌ಗಳ ಸ್ಫೋಟಕ ದ್ವಿಶತಕ ಬಾರಿಸಿ ಮಿಂಚಿದ್ದಾರೆ. ಇದು ರಣಜಿ ಇತಿಹಾಸದಲ್ಲಿ ಅವರ ಅತ್ಯಂತ ವೇಗದ ದ್ವಿಶತಕ ಮತ್ತು ಮಹಾರಾಷ್ಟ್ರದ ಪರವೂ ಅತಿ ವೇಗದ ಸಾಧನೆಯಾಗಿದೆ.

ಈ ಭರ್ಜರಿ ಪ್ರದರ್ಶನದೊಂದಿಗೆ ಪೃಥ್ವಿ, ಭಾರತ ತಂಡಕ್ಕೆ ಮರಳುವ ತಮ್ಮ ಆಶಯವನ್ನು ಗಟ್ಟಿಗೊಳಿಸಿದ್ದಾರೆ. ಮಹಾರಾಷ್ಟ್ರ ಪರ ತಮ್ಮ ಮೊದಲ ರಣಜಿ ಟ್ರೋಫಿ ಪಂದ್ಯವನ್ನು ಆಡುತ್ತಿರುವ ಪೃಥ್ವಿ ಶಾ, ಈ ಆವೃತ್ತಿಯಲ್ಲಿನ ಎರಡನೇ ಪಂದ್ಯದಲ್ಲಿ ಅದ್ಭುತ ಪ್ರದರ್ಶನ ನೀಡಿದ್ದಾರೆ. ಮಹಾರಾಷ್ಟ್ರ ಪರ ಆರಂಭಿಕರಾಗಿ ಕಣಕ್ಕಿಳಿದಿದ್ದ ಪೃಥ್ವಿ ಕೇವಲ 141 ಎಸೆತಗಳಲ್ಲಿ ದ್ವಿಶತಕ ಬಾರಿಸುವ ಮೂಲಕ ಸಂಚಲನ ಸೃಷ್ಟಿಸಿದ್ದಾರೆ. ಚಂಡೀಗಢ ವಿರುದ್ಧ ತಮ್ಮ ತವರು ನೆಲದಲ್ಲಿ ನಡೆದ ಈ ಪಂದ್ಯದಲ್ಲಿ ಪೃಥ್ವಿ ಶಾ ಒಟ್ಟು 156 ಎಸೆತಗಳನ್ನು ಎದುರಿಸಿ 5 ಸಿಕ್ಸರ್‌ಗಳು ಮತ್ತು 29 ಬೌಂಡರಿಗಳ ಸಹಿತ 222 ರನ್ ಬಾರಿಸಿದರು.

142 ಕ್ಕಿಂತ ಹೆಚ್ಚಿನ ಸ್ಟ್ರೈಕ್ ರೇಟ್‌ನಲ್ಲಿ ಬ್ಯಾಟ್ ಬೀಸಿದ ಪೃಥ್ವಿ ಮಹಾರಾಷ್ಟ್ರ ಪರ ತಮ್ಮ ಮೊದಲ ಪ್ರಥಮ ದರ್ಜೆ ಶತಕ ಬಾರಿಸಿದರು. ಇದಕ್ಕೂ ಮೊದಲು ಪೃಥ್ವಿ ಮುಂಬೈ ಪರ ಆಡಿದ್ದರು, ಆದರೆ ತಂಡದಿಂದ ಕೈಬಿಟ್ಟ ನಂತರ ಅವರು ಮಹಾರಾಷ್ಟ್ರ ತಂಡವನ್ನು ಸೇರಿಕೊಂಡಿದ್ದರು. ಈಗ ಪೃಥ್ವಿ ತಮ್ಮ ದ್ವಿಶತಕದ ಮೂಲಕ ಮಹಾರಾಷ್ಟ್ರ ತೋರಿಸಿದ ನಂಬಿಕೆಯನ್ನು ಉಳಿಸಿಕೊಳ್ಳುವಲ್ಲಿ ಯಶಸ್ವಿಯಾಗಿದ್ದಾರೆ. ಆದಾಗ್ಯೂ, ಮೊದಲ ರಣಜಿ ಟ್ರೋಫಿ ಪಂದ್ಯದಲ್ಲಿ ಪೃಥ್ವಿ ಶಾ ವಿಫಲರಾಗಿದ್ದರು. ಹಾಗೆಯೇ ಚಂಡೀಗಢ ವಿರುದ್ಧದ ಎರಡನೇ ಪಂದ್ಯದ ಮೊದಲ ಇನ್ನಿಂಗ್ಸ್‌ನಲ್ಲಿ ಕೇವಲ 8 ರನ್ ಗಳಿಸಿ ಔಟಾಗಿದ್ದರು. ಆದರೆ ಎರಡನೇ ಇನ್ನಿಂಗ್ಸ್‌ನಲ್ಲಿ ಅದ್ಭುತ ಪ್ರದರ್ಶನ ನೀಡಿದ್ದ ಪೃಥ್ವಿ, ಚಂಡೀಗಢದ ಪ್ರತಿ ಬೌಲರ್‌ಗಳನ್ನು ಕಾಡಿದರು. ನಿಶಾಂಕ್ ಬಿರ್ಲಾ ವಿರುದ್ಧ, ಅವರು 40 ಎಸೆತಗಳಲ್ಲಿ 57 ರನ್ ಬಾರಿಸಿದರೆ, ಜಗಜಿತ್ ಸಂಧು ವಿರುದ್ಧ 20 ಎಸೆತಗಳಲ್ಲಿ 44 ರನ್ ಕಲೆಹಾಕಿದರು. . ಈ ದ್ವಿಶತಕ ಪೃಥ್ವಿ ಶಾ ಅವರಿಗೆ ಬಹಳ ವಿಶೇಷವಾಗಿದೆ, ಏಕೆಂದರೆ ಇದು ರಣಜಿ ಟ್ರೋಫಿಯಲ್ಲಿ ಅವರ ಅತ್ಯಂತ ವೇಗದ ದ್ವಿಶತಕವಾಗಿದೆ. ಇದು ಮಹಾರಾಷ್ಟ್ರದ ಪರ ಯಾವುದೇ ಬ್ಯಾಟ್ಸ್‌ಮನ್‌ನಿಂದ ಬಂದ ಅತ್ಯಂತ ವೇಗದ ದ್ವಿಶತಕವೂ ಆಗಿದೆ. ಈ ಇನ್ನಿಂಗ್ಸ್‌ನೊಂದಿಗೆ, ಪೃಥ್ವಿ ಶಾ ಶೀಘ್ರದಲ್ಲೇ ಟೀಂ ಇಂಡಿಯಾಕ್ಕೆ ಮರಳಲು ಸಿದ್ಧ ಎಂದು ಘೋಷಿಸಿದ್ದಾರೆ. ಪಂದ್ಯದ ವಿಚಾರಕ್ಕೆ ಬರುವುದಾದರೆ.. ಮೊದಲು ಬ್ಯಾಟ್ ಮಾಡಿದ ಮಹಾರಾಷ್ಟ್ರ ತಂಡ 313 ರನ್ ಕಲೆಹಾಕಿತು. ಇದಕ್ಕೆ ಉತ್ತರವಾಗಿ ಚಂಡೀಗಢ ತಂಡ 209 ರನ್‌ಗಳಿಗೆ ಆಲೌಟ್ ಆಯಿತು.

# ರೋಹಿತ್, ಕೊಹ್ಲಿ ಫ್ಯಾನ್ಸ್ ಪ್ರಶ್ನೆಗೆ ತಬ್ಬಿಬ್ಬಾದ ಅಗರ್ಕರ್



ಈಗ ಹೇಗೆ ಕೈಬಿಡುತ್ತೀರಿ..

ರೋಹಿತ್ ಶರ್ಮಾ ಹಾಗೂ ವಿರಾಟ್ ಕೊಹ್ಲಿ 2027 ರ ಏಕದಿನ ವಿಶ್ವಕಪ್ ಆಡುವುದು ಅನುಮಾನ ಎಂದು ಹೇಳಲಾಗುತ್ತಿದೆ. ಇತ್ತ ಮುಖ್ಯ ಆಯ್ಕೆಗಾರ ಅಜಿತ್ ಅಗರ್ಕರ್ ಕೂಡ ಇವರಿಬ್ಬರು ವಿಶ್ವಕಪ್ ಆಡುವ ಬಗ್ಗೆ ಇನ್ನು ತೀರ್ಮಾನಿಸಲಾಗಿಲ್ಲ ಎಂದಿದ್ದರು. ಹೀಗಾಗಿ ರೋಹಿತ್ ಹಾಗೂ ಕೊಹ್ಲಿಗೆ ಆಸ್ಟ್ರೇಲಿಯಾ ಪ್ರವಾಸವೇ ಕೊನೆಯ ಸರಣಿ ಎನ್ನಲಾಗುತ್ತಿತ್ತು. ಆದರೆ ಈ ಪ್ರವಾಸದಲ್ಲಿ ಕೊಹ್ಲಿ ಮೊದಲೆರಡು ಪಂದ್ಯಗಳಲ್ಲಿ ವಿಫಲರಾದರೂ ಎಂಬುದನ್ನು ಹೊರತುಪಡಿಸಿ ಕೊನೆಯ ಪಂದ್ಯದಲ್ಲಿ ಅತ್ಯುತ್ತಮ ಪ್ರದರ್ಶನ ನೀಡಿದರು. ಇತ್ತ ರೋಹಿತ್ ಶರ್ಮಾ ಮೊದಲ ಪಂದ್ಯವನ್ನು ಬಿಟ್ಟರೆ ಉಳಿದೆರಡು ಪಂದ್ಯಗಳಲ್ಲಿ ಭರ್ಜರಿ ಬ್ಯಾಟಿಂಗ್ ಮಾಡಿದರು. ಹೀಗಾಗಿ ಅವರನ್ನು ತಂಡದಿಂದ ಹೊರಗಿಡಲು ನೋಡುತ್ತಿದ್ದ ಬಿಸಿಸಿಐ ಆಡಳಿತ ಮಂಡಳಿಗೆ ಹೊಸ ತಲೆನೋವು ಶುರುವಾಗಿದೆ.


**ಅಪಹಾಸ್ಯಕ್ಕೀಡಾದ ಅಗರ್ಕರ್**

ವಯಸ್ಸು ಹಾಗೂ ಫಾರ್ಮ್ ಅನ್ನು ಗಮನದಲ್ಲಿಟ್ಟುಕೊಂಡು ರೋಹಿತ್ ಮತ್ತು ಕೊಹ್ಲಿಯನ್ನು ಏಕದಿನ ತಂಡದಿಂದಲೂ ಕೈಬಿಡಲು ಬಿಸಿಸಿಐ ಚಿಂತಿಸುತ್ತಿದೆ ಎಂದು ಹೇಳಲಾಗುತ್ತಿದೆ. ಇದೆಲ್ಲದರ ನಡುವೆ ಇವರಿಬ್ಬರು ಅದ್ಭುತ ಫಾರ್ಮ್‌ನಲ್ಲಿರುವುದು ಬಿಸಿಸಿಐಗೆ ಬಿಸಿ ತುಪ್ಪವಾಗಿ ಪರಿಣಮಿಸಿದೆ.

ಇದಕ್ಕೆ ಪೂರಕವಾಗಿ ತಂಡದ ಮುಖ್ಯ ಆಯ್ಕೆಗಾರ ಅಜಿತ್ ಅಗರ್ಕರ್ ಅವರನ್ನು ರೋಹಿತ್ ಹಾಗೂ ವಿರಾಟ್ ಅಭಿಮಾನಿಗಳು ಸಾರ್ವಜನಿಕವಾಗಿಯೇ ಹೀಯಾಳಿಸಿದ್ದು, ಆಸ್ಟ್ರೇಲಿಯಾದಲ್ಲಿ ರನ್‌ಗಳಿಸಿರುವ ಇವರಿಬ್ಬರನ್ನು ಈಗ ಹೇಗೆ ತಂಡದಿಂದ ಹೊರಗಿಡುತ್ತೀರಿ ಎಂಬ ಪ್ರಶ್ನೆ ಕೇಳಿದ್ದಾರೆ. ಅಭಿಮಾನಿಗಳ ಈ ಪ್ರಶ್ನೆಗೆ ಉತ್ತರಿಸಲಾಗದೆ ಅಜಿತ್ ಅಗರ್ಕರ್ ತಮ್ಮ ಕಾರು ಹತ್ತಿ ಪಲಾಯನ ಮಾಡಿದ್ದಾರೆ. ಇದೀಗ ಅದರ ವಿಡಿಯೋ ವೈರಲ್ ಆಗುತ್ತಿದೆ.

**ನೀವು ಹೇಗೆ ತಡೆಯುತ್ತೀರಿ:** ಸಾಮಾಜಿಕ ಜಾಲತಾಣಗಳಲ್ಲಿ ರೋಹಿತ್ ಮತ್ತು ವಿರಾಟ್ ಅಭಿಮಾನಿಗಳು ಅಜಿತ್ ಅಗರ್ಕರ್ ಅವರನ್ನು ಗುರಿಯಾಗಿಸಿಕೊಂಡು ಅಪಹಾಸ್ಯ ಮಾಡುತ್ತಿರುವ ವಿಡಿಯೋವೊಂದು ವೇಗವಾಗಿ ವೈರಲ್ ಆಗುತ್ತಿದೆ. ಈ ವಿಡಿಯೋದಲ್ಲಿ ಅಭಿಮಾನಿಗಳು, ‘ಅಗರ್ಕರ್ ಭಾಯ್, ರೋಹಿತ್ ಶರ್ಮಾ ಮತ್ತು ವಿರಾಟ್ ಕೊಹ್ಲಿ ಆಸ್ಟ್ರೇಲಿಯಾದಲ್ಲಿ ರನ್ ಗಳಿಸಿದ್ದಾರೆ, ಈಗ ಅವರನ್ನು ಹೇಗೆ ತಂಡದಿಂದ ಹೊರಹಾಕುತ್ತೀರಿ 2027 ರ ವಿಶ್ವಕಪ್‌ನಲ್ಲಿ ಅವರನ್ನು ಆಡದಂತೆ ನೀವು ಹೇಗೆ ತಡೆಯುತ್ತೀರಿ’ ಎಂಬ ಪ್ರಶ್ನೆಗಳನ್ನು ಕೇಳುತ್ತಿರುವುದನ್ನು ಕಾಣಬಹುದು. ಆದಾಗ್ಯೂ, ಅಗರ್ಕರ್, ಈ ಯಾವ ಪ್ರಶ್ನೆಗೂ ಉತ್ತರಿಸದೆ ಅಲ್ಲಿಂದ ಹೊರಟು ಹೋಗಿದ್ದಾರೆ.

ಅಜಿತ್ ಅಗರ್ಕರ್ ಅವರನ್ನು ಅಭಿಮಾನಿಗಳು ಈ ರೀತಿ ಅಪಹಾಸ್ಯ ಮಾಡಲು ಕಾರಣ ಆಸ್ಟ್ರೇಲಿಯಾದಲ್ಲಿ ರೋಹಿತ್ ಶರ್ಮಾ ಅವರ ಅದ್ಭುತ ಪ್ರದರ್ಶನ ಮಾತ್ರವಲ್ಲ, ಆಸ್ಟ್ರೇಲಿಯಾ ಪ್ರವಾಸಕ್ಕೂ ಮುನ್ನ ತಂಡದ ಆಯ್ಕೆ ಪ್ರಕ್ರಿಯೆಯಲ್ಲಿ ಅಗರ್ಕರ್ ಅವರ ನಿರ್ಧಾರಗಳು ಮತ್ತು ಹೇಳಿಕೆಗಳು. ರೋಹಿತ್ ಶರ್ಮಾ ಅವರನ್ನು ಏಕದಿನ ನಾಯಕತ್ವದಿಂದ ತೆಗೆದುಹಾಕುವ ನಿರ್ಧಾರದಿಂದ ಅಭಿಮಾನಿಗಳು ಕೋಪಗೊಂಡಿದ್ದರು ಮಾತ್ರವಲ್ಲದೆ, 2027 ರ ವಿಶ್ವಕಪ್ ಬಗ್ಗೆ ಅಜಿತ್ ಅಗರ್ಕರ್ ಅವರ ಅಸ್ಪಷ್ಟ ಪ್ರತಿಕ್ರಿಯೆಯೂ ಸಹ ಆಗಿತ್ತು.



# ಟೆಸ್ಟ್ ಸರಣಿಗೆ ದಕ್ಷಿಣ ಆಫ್ರಿಕಾ ತಂಡ ಪ್ರಕಟ

ವೆಸ್ಟ್ ಇಂಡೀಸ್ ವಿರುದ್ಧ ಟೆಸ್ಟ್ ಗೆದ್ದು, ಆಸ್ಟ್ರೇಲಿಯಾ ವಿರುದ್ಧ ಏಕದಿನ ಸರಣಿ ಸೋತ ಟೀಂ ಇಂಡಿಯಾ, ಮುಂಬರುವ ಟಿ20 ಸರಣಿ ಗೆಲ್ಲಲು ಸಜ್ಜಾಗಿದೆ. ಇದರ ನಡುವೆ, ಭಾರತ ಪ್ರವಾಸಕ್ಕಾಗಿ ದಕ್ಷಿಣ ಆಫ್ರಿಕಾ ತನ್ನ 15 ಸದಸ್ಯರ ಟೆಸ್ಟ್ ತಂಡವನ್ನು ಪ್ರಕಟಿಸಿದೆ. ಆಸ್ಟ್ರೇಲಿಯಾ ಟಿ20 ಸರಣಿಯ ನಂತರ ಭಾರತ ಹರಿಣಗಳ ವಿರುದ್ಧ 2 ಪಂದ್ಯಗಳ ಟೆಸ್ಟ್ ಸರಣಿ ಆಡಲಿದೆ. ಈ ಸರಣಿಗೆ ಆಫ್ರಿಕಾ ತಂಡ ಸಿದ್ಧವಾಗಿದೆ. ವೆಸ್ಟ್ ಇಂಡೀಸ್ ವಿರುದ್ಧ 2 ಪಂದ್ಯಗಳ ಟೆಸ್ಟ್ ಸರಣಿಯನ್ನು 2–0 ಅಂತರದಿಂದ ಗೆದ್ದುಕೊಂಡಿದ್ದ ಟೀಂ ಇಂಡಿಯಾ ಅದೇ ಹುಮ್ಮಸ್ಸಿನಲ್ಲಿ ಆಸ್ಟ್ರೇಲಿಯಾ ಪ್ರವಾಸ ಮಾಡಿತ್ತು. ಆದರೆ ಆಸ್ಟ್ರೇಲಿಯಾದಲ್ಲಿ ಭಾರತ ತಂಡಕ್ಕೆ ಏಕದಿನ ಸರಣಿ ಗೆಲ್ಲಲು ಸಾಧ್ಯವಾಗಲಿಲ್ಲ. ಹೀಗಾಗಿ ಮುಂಬರುವ ಟಿ20 ಸರಣಿಯನ್ನು ಗೆದ್ದು, ಏಕದಿನ ಸರಣಿ ಸೋಲಿಗೆ ಸೇಡು ತೀರಿಸಿಕೊಳ್ಳುವ ಇರಾದೆಯಲ್ಲಿ ಭಾರತ ಟಿ20 ತಂಡವಿದೆ. ಈ ನಡುವೆ ಭಾರತ ಪ್ರವಾಸಕ್ಕೆ ದಕ್ಷಿಣ ಆಫ್ರಿಕಾ ತಂಡವನ್ನು ಪ್ರಕಟಿಸಲಾಗಿದೆ. ವಾಸ್ತವವಾಗಿ ಆಸ್ಟ್ರೇಲಿಯಾ ವಿರುದ್ಧದ ಟಿ20 ಸರಣಿ ಬಳಿಕ ಟೀಂ ಇಂಡಿಯಾ, ಹರಿಣಗಳ ವಿರುದ್ಧ 2 ಪಂದ್ಯಗಳ ಟೆಸ್ಟ್ ಸರಣಿಯನ್ನು ತವರಿನಲ್ಲಿ ಆಡಲಿದೆ. ಇದೀಗ ಈ ಸರಣಿಗೆ 15 ಸದಸ್ಯರ ಆಫ್ರಿಕಾ ತಂಡವನ್ನು ಘೋಷಿಸಲಾಗಿದೆ. ಭಾರತ ವಿರುದ್ಧದ ಈ ಸರಣಿಗೆ ದಕ್ಷಿಣ ಆಫ್ರಿಕಾ ತಂಡದ ನಾಯಕತ್ವ ಮತ್ತೆ ಟೆಂಬಾ ಬವುಮಾ ಅವರ ಕೈಸೇರಿದೆ. ವಾಸ್ತವವಾಗಿ ಪಾಕಿಸ್ತಾನ ವಿರುದ್ಧದ ಟೆಸ್ಟ್ ಸರಣಿಯಲ್ಲಿ ಟೆಂಬಾ ಬವುಮಾ ತಂಡದ ಭಾಗವಾಗಿರಲಿಲ್ಲ. ಏಕೆಂದರೆ ಇಂಜುರಿ ಸಮಸ್ಯೆಯಿಂದ ಬಳಲುತ್ತಿದ್ದ ಅವರು ಈ ಸರಣಿಯಿಂದ ಹೊರಗಿದ್ದರು. ಹೀಗಾಗಿ ಅವರ ಅನುಪಸ್ಥಿತಿಯಲ್ಲಿ, ಐಡೆನ್ ಮಾರ್ಕ್ರಮ್ ನಾಯಕನಾಗಿ ತಂಡವನ್ನು ಮುನ್ನಡೆಸಿದ್ದರು.

# ವಿಶ್ವಕಪ್‌ನಿಂದ ಹೊರಬಿದ್ದ ಸ್ಟಾರ್ ಓಪನರ್



ಟೀಂ ಇಂಡಿಯಾಕ್ಕೆ ಆಘಾತ

ಅಕ್ಟೋಬರ್ 30 ರಂದು ಆಸ್ಟ್ರೇಲಿಯಾ ವಿರುದ್ಧದ ಮಹಿಳಾ ವಿಶ್ವಕಪ್ ಸೆಮಿಫೈನಲ್‌ನಿಂದ ಟೀಂ ಇಂಡಿಯಾದ ಆರಂಭಿಕ ಆಟಗಾರ್ತಿ ಪ್ರತೀಕಾ ರಾವಲ್ ಗಾಯದಿಂದ ಹೊರಬಿದ್ದಿದ್ದಾರೆ. ಬಾಂಗ್ಲಾದೇಶ ವಿರುದ್ಧ ಫೀಲ್ಡಿಂಗ್ ವೇಳೆ ಗಾಯಗೊಂಡಿದ್ದ ಪ್ರತೀಕಾ, ಟೂರ್ನಿಯಿಂದಲೇ ಹೊರಗುಳಿದಿರುವುದು ಭಾರತಕ್ಕೆ ದೊಡ್ಡ ಹಿನ್ನಡೆಯಾಗಿದೆ.

ಉತ್ತಮ ಫಾರ್ಮ್‌ನಲ್ಲಿದ್ದ ಅವರ ಅನುಪಸ್ಥಿತಿ ತಂಡದ ಮೇಲೆ ಪರಿಣಾಮ ಬೀರಲಿದ್ದು, ಆರಂಭಿಕ ಸ್ಥಾನಕ್ಕೆ ಅಮನ್ ಜೋತ್ ಕೌರ್ ಅಥವಾ ಹರ್ಲೀನ್ ಡಿಯೋಲ್ ಹೆಸರುಗಳು ಕೇಳಿಬಂದಿವೆ.

ಅಕ್ಟೋಬರ್ 30 ರಂದು ಆಸ್ಟ್ರೇಲಿಯಾ ವಿರುದ್ಧ ವಿಶ್ವಕಪ್ ಸೆಮಿಫೈನಲ್ ಪಂದ್ಯವನ್ನು ಆಡಲು ಸಜ್ಜಾಗಿರುವ ಟೀಂ ಇಂಡಿಯಾಕ್ಕೆ ಆಘಾತ ಎದುರಾಗಿದೆ. ಭಾರತ ಮಹಿಳಾ ತಂಡದ ಆರಂಭಿಕ ಆಟಗಾರ್ತಿ ಪ್ರತೀಕಾ ರಾವಲ್ ವಿಶ್ವಕಪ್ ಸೆಮಿಫೈನಲ್‌ನಿಂದ ಹೊರಬಿದಿದ್ದಾರೆ. ಬಾಂಗ್ಲಾದೇಶ ವಿರುದ್ಧದ ಪಂದ್ಯದಲ್ಲಿ ಫೀಲ್ಡಿಂಗ್ ಮಾಡುವಾಗ ಪ್ರತೀಕಾ ಅವರು ಗಂಭೀರ ಗಾಯಕ್ಕೆ ತುತ್ತಾಗಿದ್ದರು.

ಇದರಿಂದಾಗಿ ಅವರು ಬ್ಯಾಟಿಂಗ್ ಕೂಡ ಮಾಡಿರಲಿಲ್ಲ. ಹೀಗಾಗಿ ವಿಶ್ವಕಪ್‌ನ ನಿರ್ಣಾಯಕ ಪಂದ್ಯಗಳಿಗೆ ಅವರ ಲಭ್ಯತೆಯ ಬಗ್ಗೆ ಅನುಮಾನ ಮೂಡಿತ್ತು. ಇದೀಗ ಹೊರಬಿದ್ದಿರುವ ಮಾಹಿತಿ ಪ್ರಕಾರ, ಗಾಯಗೊಂಡಿರುವ ಪ್ರತೀಕಾ ಇಡೀ ಟೂರ್ನಿಯಿಂದಲೇ ಹೊರಬಿದಿದ್ದಾರೆ ಎನ್ನಲಾಗುತ್ತಿದೆ. ವಿಶ್ವಕಪ್‌ನಲ್ಲಿ ಉತ್ತಮ ಫಾರ್ಮ್‌ನಲ್ಲಿದ್ದ ಪ್ರತೀಕಾ ರಾವಲ್ ಅವರ ಅನುಪಸ್ಥಿತಿಯು ಟೀಂ ಇಂಡಿಯಾಕ್ಕೆ ದೊಡ್ಡ ಹೊಡೆತ ನೀಡಿದೆ.

**ಅದ್ಭುತ ಫಾರ್ಮ್‌ನಲ್ಲಿದ್ದ ಪ್ರತೀಕಾ ರಾವಲ್**

2025 ರ ಮಹಿಳಾ ವಿಶ್ವಕಪ್‌ನಲ್ಲಿ ಪ್ರತೀಕಾ ಅವರ ಪ್ರದರ್ಶನದ ಬಗ್ಗೆ ಹೇಳುವುದಾದರೆ, ಈ ಟೂರ್ನಿಯಲ್ಲಿ ಆರು ಪಂದ್ಯಗಳನ್ನಾಡಿರುವ ಪ್ರತೀಕಾ 51.33 ಸರಾಸರಿಯಲ್ಲಿ 308 ರನ್ ಬಾರಿಸಿದ್ದರು. ಈ ಮೂಲಕ ಸ್ಮೃತಿ ಮಂಧಾನ ನಂತರ ತಂಡದ ಪರ ಅತೀ ಹೆಚ್ಚು ರನ್ ಗಳಿಸಿದ್ದ ಎರಡನೇ ಆಟಗಾರ್ತಿಯಾಗಿದ್ದರು. ಹಾಗೆಯೇ ಪ್ರತಿಕಾ, ಮಂಧಾನ ಜೊತೆಗೆ, ಹಲವಾರು ಪಂದ್ಯಗಳಲ್ಲಿ ಟೀಂ ಇಂಡಿಯಾಗೆ ಉತ್ತಮ ಆರಂಭವನ್ನು ನೀಡಿದ್ದರು.

ಜೊತೆಗೆ ನ್ಯೂಜಿಲೆಂಡ್ ವಿರುದ್ಧದ ಪಂದ್ಯದಲ್ಲಿ ಶತಕ ಬಾರಿಸಿದ್ದು ಮಾತ್ರವಲ್ಲದೆ ಸ್ಮೃತಿ ಅವರೊಂದಿಗೆ ದಾಖಲೆಯ ದ್ವಿಶತಕದ ಜೊತೆಯಾಟವನ್ನು ನಡೆಸಿದ್ದರು.

**Printed by : A. BALACHANDRA, Printed at : RAJHANS ENTERPRISES** No. 134, 4th Main Road, Industrial Town, Rajajinagar, Bengaluru - 560044, Karnataka. **Owned By, Published By, Editor :T. HOMBE GOWDA,** No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
**ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966**